ಸಂಪುಟ: 21, ಸಂಚಿಕೆ: 126, ಪುಟಗಳು: 8, ಗುರುವಾರ, 15 ಫೆಬ್ರವರಿ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಗುರುವಾರ 15, ಫೆಬ್ರವರಿ -2024)

- ಶೋಭಕೃತ್ ಸಂವತ್ಸರ, ಶಿಶಿರ ಋತು
- ಉತ್ತರಾಯಣ, ಮಾಘ ಮಾಸ
- ಶುಕ್ಲ ಪಕ್ಷ, ಬಿದಿಗೆ,
- ಶತಭಿಷಾ ನಕ್ಷತ್ರ
- ರಾಹುಕಾಲ- 01:57 PM 03:28 PM
- ಗುಳಿಕಕಾಲ - 09:24 AM 10:55 AM
- ಯಮಗಂಡಕಾಲ - 06:22 AM 07:53 AM

# ರಾಜ್ಯಸಭಾ ಸಂಸದರ ಆಯ್ಕೆ ಪ್ರಕ್ರಿಯೆ ಹೇಗೆ?

**ಬೆಂಗಳೂರು:** ದೇಶದಲ್ಲಿ ಲೋಕಸಭೆ ಚುನಾವಣೆಯ ಕಹಳೆ ಮೊಳಗುವ ಮುನ್ನವೇ ಮತ್ತೊಂದು ಚುನಾವಣೆಗೆ ಅಖಾಡ ಸಿದ್ಧವಾಗಿದೆ. ಇದು ರಾಜ್ಯಸಭಾ ಚುನಾವಣೆ. ಫೆಬ್ರವರಿ 27 ರಂದು ದೇಶದ 15 ರಾಜ್ಯಗಳ 56 ರಾಜ್ಯಸಭಾ ಸ್ಥಾನಗಳಿಗೆ ಮತದಾನ ನಡೆಯಲಿದೆ. ಫೆಬ್ರವರಿ 15 ರವರೆಗೆ ನಾಮಪತ್ರ ಸಲ್ಲಿಕೆಗೆ ಅವಕಾಶವಿದ್ದು, ಅಭ್ಯರ್ಥಿಗಳು ಫೆಬ್ರವರಿ 20 ರವರೆಗೆ ತಮ್ಮ ನಾಮಪತ್ರವನ್ನು ಹಿಂಪಡೆಯಬಹುದಾಗಿದೆ.

ಉತ್ತರ ಪ್ರದೇಶ, ಮಹಾರಾಷ್ಟ್ರ, ಬಿಹಾರ, ಗುಜರಾತ್, ಪಶ್ಚಿಮ ಬಂಗಾಳ, ಆಂಧ್ರಪ್ರದೇಶ, ತೆಲಂಗಾಣ, ಕರ್ನಾಟಕ, ಒಡಿಶಾ, ಹರಿಯಾಣ, ಹಿಮಾಚಲ, ರಾಜಸ್ಥಾನ, ಉತ್ತರಾಖಂಡ, ಮಧ್ಯಪ್ರದೇಶ ಮತ್ತು ಛತ್ತೀಸ್‌ಗಢಗಳಿಂದ ರಾಜ್ಯಸಭೆಗೆ ಪ್ರತಿನಿಧಿಗಳ ಆಯ್ಕೆ ನಡೆಯಲಿದೆ. ರಾಜ್ಯಸಭಾ ಚುನಾವಣೆಯನ್ನು ಹೇಗೆ ನಡೆಸಲಾಗುತ್ತದೆ ಮತ್ತು ಇದು ಇತರ ಚುನಾವಣೆಗಳಿಗಿಂತ ಹೇಗೆ ಭಿನ್ನವಾಗಿದೆ ಎಂಬ ಮಾಹಿತಿ ಇಲ್ಲಿದೆ.

**ಸಾರ್ವಜನಿಕರಿಗಿಲ್ಲ ಮತದಾನ ಅವಕಾಶ:** ಸಾರ್ವಜನಿಕರು




ರಾಜ್ಯಸಭಾ ಚುನಾವಣೆಯಲ್ಲಿ ಭಾಗವಹಿಸುವುದಿಲ್ಲ. ಬದಲಿಗೆ ಜನರಿಂದ ಚುನಾಯಿತರಾದ ಶಾಸಕರು ಅದರಲ್ಲಿ ಭಾಗವಹಿಸುತ್ತಾರೆ. ಆದ್ದರಿಂದಲೇ ಈ ಚುನಾವಣೆಯನ್ನು ಪರೋಕ್ಷ ಚುನಾವಣೆ ಎಂದೂ ಕರೆಯುತ್ತಾರೆ. ಭಾರತದಲ್ಲಿ ಸಂಸತ್ತಿನ ಎರಡು ಮನೆಗಳಿದ್ದು, ಅವು ಲೋಕಸಭೆ ಮತ್ತು ರಾಜ್ಯಸಭೆ ಆಗಿವೆ.

ಉಭಯ ಸದನಗಳಲ್ಲಿ ಮಸೂದೆ ಅಂಗೀಕಾರವಾದ ನಂತರ ಅದು ರಾಷ್ಟ್ರಪತಿಯವರಿಗೆ ಹೋಗುತ್ತದೆ. ಅವರ ಸಹಿಯ ನಂತರ, ಮಸೂದೆಯು ಕಾನೂನಿನ ರೂಪವನ್ನು ತೆಗೆದುಕೊಳ್ಳುತ್ತದೆ ಮತ್ತು ದೇಶಾದ್ಯಂತ ಅನುಸರಿಸಲ್ಪಡುತ್ತದೆ

**ಮೇಲ್ಮನೆ ವಿಸರ್ಜನೆಯಾಗುವುದಿಲ್ಲ!:** ಐದು ವರ್ಷಗಳಿಗೊಮ್ಮೆ ಲೋಕಸಭೆ ಚುನಾವಣೆ ನಡೆಯುವುದು ನಮಗೆಲ್ಲ ಗೊತ್ತೇ ಇದೆ. ದೇಶದಲ್ಲಿ ಸರ್ಕಾರವು ಅದರ ಚುನಾಯಿತ ಸದಸ್ಯರ ಸಂಖ್ಯೆಯ ಆಧಾರದ ಮೇಲೆ ರಚನೆಯಾಗುತ್ತದೆ. ಅಂದರೆ, ಲೋಕಸಭೆಯ ಸಂಸದರ ಅಧಿಕಾರಾವಧಿಯು ಐದು ವರ್ಷಗಳು. ಆದರೆ ಪ್ರತಿಕೂಲ ಸಂದರ್ಭಗಳಲ್ಲಿ ಅದನ್ನು ಮಧ್ಯದಲ್ಲಿ ವಿಸರ್ಜಿಸಬಹುದು. ಇದಕ್ಕೆ ವಿರುದ್ಧವಾಗಿ, ರಾಜ್ಯಸಭೆಯು ಶಾಶ್ವತ ಸದನವಾಗಿದೆ ಮತ್ತು ಅದು ಎಂದಿಗೂ ವಿಸರ್ಜನೆಯಾಗುವುದಿಲ್ಲ. ಈ ಮೇಲ್ಮನೆಯ ಸದಸ್ಯರು ಆರು ವರ್ಷಗಳ ಕಾಲ ಚುನಾಯಿತರಾಗುತ್ತಾರೆ.

ಪ್ರತಿ ಎರಡು ವರ್ಷಗಳಿಗೊಮ್ಮೆ ಮೂರನೇ ಒಂದು ಭಾಗದಷ್ಟು ಸದಸ್ಯರ ಅಧಿಕಾರಾವಧಿ ಪೂರ್ಣಗೊಳ್ಳುತ್ತದೆ. ಅವರ ಸ್ಥಾನಕ್ಕೆ ಹೊಸಬರ ಆಯ್ಕೆಗೆ ಚುನಾವಣೆಗಳು ನಡೆಯುತ್ತವೆ. ಆದರೆ, ರಾಜ್ಯಸಭೆಯ ಸದಸ್ಯರೊಬ್ಬರು ರಾಜೀನಾಮೆ ನೀಡಿದರೆ ಅಥವಾ ಮರಣಹೊಂದಿದರೆ ಅಥವಾ ಕೆಲವು ಕಾರಣಗಳಿಂದ ಸದಸ್ಯರು ಸದನಕ್ಕೆ ಅನರ್ಹರೆಂದು ಘೋಷಿಸಲ್ಪಟ್ಟರೆ, ಅವರ ಸ್ಥಾನಕ್ಕೆ ಉಪಚುನಾವಣೆ ಕೂಡ ನಡೆಯುತ್ತದೆ. ಮಧ್ಯಂತರ ಅವಧಿಯಲ್ಲಿ ಚುನಾವಣೆ ನಡೆಯುವ ಸ್ಥಾನಕ್ಕೆ ಚುನಾಯಿತರಾದ ಸಂಸದರು ಪೂರ್ಣ ಆರು ವರ್ಷಗಳ ಅವಧಿಯನ್ನು ಪೂರ್ಣಗೊಳಿಸುವುದಿಲ್ಲ. ಬದಲಿಗೆ ಅವರು ಹಿಂದಿನ ಸದಸ್ಯರ ಅಧಿಕಾರಾವಧಿಯಲ್ಲಿ ಉಳಿದಿರುವ ಅವಧಿಗಷ್ಟೇ ಸಂಸದರಾಗುತ್ತಾರೆ.

**ಗರಿಷ್ಠ 250 ಸದಸ್ಯರಿರಬಹುದು, ಪ್ರಸ್ತುತ ಸಂಖ್ಯೆ 245:** ಭಾರತೀಯ ಸಂವಿಧಾನದ 80 ನೇ ವಿಧಿಯಲ್ಲಿ, ರಾಜ್ಯಸಭೆಯ ಒಟ್ಟು ಸದಸ್ಯರ ಗರಿಷ್ಠ ಸಂಖ್ಯೆಯನ್ನು 250 ಕ್ಕೆ ನಿಗದಿಪಡಿಸಲಾಗಿದೆ. ಇದರಲ್ಲಿ 238 ಸದಸ್ಯರು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಂದ ಚುನಾಯಿತರಾಗಿದ್ದಾರೆ. ಪುಟ 2

# ನನ್ನ ತೆರಿಗೆ ನನ್ನ ಹಕ್ಕು ಅಭಿಯಾನ

## ಸಾರ್ವಜನಿಕರ ಪ್ರಶ್ನೆಗಳಿಗೆ ಅಂಕಿ-ಸಂಖ್ಯೆ ಸಮೇತ ಉತ್ತರಿಸಿದ ಸಿಎಂ

**ಬೆಂಗಳೂರು:** ಇಂದು ಟ್ವಿಟರ್ ಲೈವ್ ನಲ್ಲಿ 'ನನ್ನ ತೆರಿಗೆ ನನ್ನ ಹಕ್ಕು' ಅಭಿಯಾನದ ಬಗ್ಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ ಪ್ರಧಾನಿ ಮೋದಿ ವಿರುದ್ಧ ಕಿಡಿಕಾರಿದ್ದಾರೆ. ಕಾರ್ಪೊರೇಟ್ ಕಂಪನಿಗಳ ಮೇಲಿನ ತೆರಿಗೆ ಪ್ರಮಾಣ ಶೇ.22.5ಕ್ಕೆ ಇಳಿಸಿದರು. ಜನಸಾಮಾನ್ಯರ ಮೇಲೆ ತೆರಿಗೆ ಪ್ರಮಾಣ ಹೆಚ್ಚಳ ಮಾಡಿದ್ದಾರೆ. ಸಾಮಾನ್ಯರಿಂದ ತೆರಿಗೆ ವಸೂಲಿ ಹೆಚ್ಚು ಮಾಡುತ್ತಲೇ ಹೋಗುತ್ತಿದ್ದಾರೆ. ನಮ್ಮ ಸಂಸದರು ದೆಹಲಿಯಲ್ಲಿ ಈ ಅನ್ಯಾಯವನ್ನು ಪ್ರಶ್ನಿಸುವುದೇ



ಇಲ್ಲ. ಸಾಮಾನ್ಯ ಜನರ ಖರ್ಚಿನ ಮೇಲೆ ಹಾಕುವ ಜಿಎಸ್‌ಟಿ ಪ್ರಮಾಣ ಕಡಿಮೆಮಾಡಿ. ಶ್ರೀಮಂತರು ಬಳಸುವ ಐಷಾರಾಮಿ ವಸ್ತುಗಳ ಮೇಲೆ ಜಿಎಸ್‌ಟಿ ಹೆಚ್ಚಿಸಬೇಕು. ನಮ್ಮ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯವನ್ನು ಅರ್ಥ ಮಾಡಿಕೊಳ್ಳಬೇಕು. ಮೋದಿ ಗುಜರಾತ್ ಸಿಎಂ ಆಗಿದ್ದಾಗ 50% ತೆರಿಗೆ ಪಾಲು ಕೊಡಿ ಎಂದಿದ್ದರು.

ರಾಜ್ಯಗಳು ಭಿಕ್ಷುಕರಾ ಎಂದು ನರೇಂದ್ರ ಮೋದಿಯವರು ಕೇಳಿದ್ದರು. ಕೇಂದ್ರ ಸರ್ಕಾರಕ್ಕೆ ಒಂದು ರೂಪಾಯಿ ತೆರಿಗೆಯನ್ನೂ ಕೊಡುವುದಿಲ್ಲ, ಎಲ್ಲವನ್ನೂ ರಾಜ್ಯವೇ ಇಟ್ಟುಕೊಳ್ಳುತ್ತೇವೆ ಎಂದು ಇದೇ ಮೋದಿ ಹೇಳಿದ್ದರು. ನರೇಂದ್ರ ಮೋದಿ ಪ್ರಧಾನಿ ಆದ ಮೇಲೆ ಉಲ್ಟಾ ಮಾತಾಡುತ್ತಿದ್ದಾರೆ ಎಂದು ವಾಗ್ದಾಳಿ ಮಾಡಿದ್ದಾರೆ.

ಅಭಿಯಾನ ಕುರಿತು ಸಾರ್ವಜನಿಕರ ಪ್ರಶ್ನೆಗಳಿಗೆ ಉತ್ತರಿಸಿದ ಸಿಎಂ ಸಿದ್ದರಾಮಯ್ಯ ರಾಜ್ಯದಲ್ಲಿ ಬಿಜೆಪಿ ಅಧಿಕಾರದಲ್ಲಿದ್ದಾಗ ಸದನದಲ್ಲಿ ಪದೇಪದೆ ಹೇಳಿದ್ದೆ. ಸಿಎಂ ಆಗಿದ್ದ ಯಡಿಯೂರಪ್ಪ, ಬೊಮ್ಮಾಯಿ ರಾಜ್ಯದ ಪಾಲನ್ನು ತರಲು ಯತ್ನಿಸಲಿಲ್ಲ. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯ ಪ್ರಶ್ನಿಸದೆ ಅನ್ಯಾಯವನ್ನು ಸಮರ್ಥಿಸುತ್ತಿದ್ದಾರೆ. ಇವರು ರಾಜ್ಯವನ್ನು ಪ್ರತಿನಿಧಿಸುತ್ತಿದ್ದಾರೆ ಎನ್ನುವುದನ್ನೇ ಮರೆತು ಮಾತಾಡಿದ್ದಾರೆ ಎಂದಿದ್ದಾರೆ. ಪುಟ 2

### ತಿಂಗಳಾಂತ್ಯಕ್ಕೆ ಶುಚಿ, ಕಭಿ ಸೇರಿ ಹಲವು ಯೋಜನೆಗಳ ಜಾರಿಗೆ ಮುಂದಾದ

## ಆರೋಗ್ಯ ಇಲಾಖೆ

**ಬೆಂಗಳೂರು:** ರಾಜ್ಯ ಆರೋಗ್ಯ ಇಲಾಖೆಯು ಸಾರ್ವತ್ರಿಕ ಚುನಾವಣೆಗೂ ಮುನ್ನ ತಿಂಗಳ ಅಂತ್ಯದ ವೇಳೆಗೆ ಹಲವಾರು ಯೋಜನೆಗಳನ್ನು ಔಪಚಾರಿಕವಾಗಿ ಪ್ರಾರಂಭಿಸುವ ನಿರೀಕ್ಷೆಯಲ್ಲಿದೆ. ಈ ನಿಟ್ಟಿನಲ್ಲಿ ಕರ್ನಾಟಕ ಬ್ರೈನ್ ಹೆಲ್ತ್ ಇನಿಶಿಯೇಟಿವ್ ಅಡಿಯಲ್ಲಿ ನಿಮ್ಹಾನ್ಸ್ ಸಹಯೋಗದೊಂದಿಗೆ ರಾಜ್ಯಾದ್ಯಂತ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಮೆದುಳಿನ



ಆರೋಗ್ಯ ಚಿಕಿತ್ಸಾಲಯಗಳನ್ನು ಸ್ಥಾಪಿಸಲಾಗಿದೆ. ಫೆ. 26 ರಂದು ಸಿಎಂ ಸಿದ್ದರಾಮಯ್ಯ ಉದ್ಘಾಟಿಸುವುದಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಅದೇ ರೀತಿಯಾಗಿ ಎಲ್ಲಾ ಶಾಲಾ ಬಾಲಕಿಯರಿಗೆ ಮುಟ್ಟಿನ ಪ್ಯಾಡ್‌ಗಳನ್ನು ಪೂರೈಸುವ 'ಶುಚಿ ಯೋಜನೆ' ಮತ್ತು ಹೃದಯಾಘಾತ ಸಂತ್ರಸ್ತರಿಗಾಗಿ ಉಚಿತವಾಗಿ 'ಪುನೀತ್ ರಾಜ್ ಕುಮಾರ್ ಹೃದಯ ಜ್ಯೋತಿ ಯೋಜನೆ'ಯು ಒಳಗೊಂಡಿದೆ.

ಟೆನೆಕ್ಟೆಪ್ಲೇಸ್ ಚುಚ್ಚುಮದ್ದು ಮತ್ತು ಸಾರ್ವಜನಿಕವಾಗಿ ತುರ್ತು ಸ್ವಯಂಚಾಲಿತ ಡಿಫಿಬ್ರಿಲೇಟರ್‌ಗಳನ್ನು ಈ ತಿಂಗಳ ಅಂತ್ಯದೊಳಗೆ ಪ್ರಾರಂಭಿಸಲು ನಿರ್ಧರಿಸಲಾಗಿದೆ ಎಂದು ಹೇಳಿದ್ದಾರೆ.

**ಸಾರ್ವಜನಿಕ ಸ್ಥಳಗಳಲ್ಲಿ ಎಇಡಿ ಸ್ಥಾಪನೆ ಇಲ್ಲ:** ಸಾರ್ವಜನಿಕ ಸ್ಥಳಗಳಲ್ಲಿ ಎಇಡಿ ಗಳನ್ನು ಸ್ಥಾಪಿಸಲಾಗುತ್ತಿಲ್ಲ. ಏಕೆಂದರೆ ಸಾಮಾನ್ಯ ಜನರಿಗೆ ಅವುಗಳನ್ನು ನಿರ್ವಹಿಸುವಲ್ಲಿ ತರಬೇತಿಯ ಅಗತ್ಯವಿದೆ. ಹೀಗಾಗಿ ಸಾರ್ವಜನಿಕ ಸ್ಥಳಗಳಲ್ಲಿ ಸ್ಥಾಪಿಸಲಾಗುತ್ತಿಲ್ಲ. ತರಬೇತಿ ಪಡೆದ ಸಿಬ್ಬಂದಿ ಈಗಾಗಲೇ ಲಭ್ಯವಿರುವಲ್ಲಿ ಇರಬೇಕು. ಎಲ್ಲವೂ ಸ್ಥಾಪಿಸಿದ ನಂತರ ಯೋಜನೆಯು AED ನಲ್ಲಿ ಜನರಿಗೆ ತರಬೇತಿ ನೀಡುವ ಕಾರ್ಯಕ್ರಮಗಳನ್ನು ಸಹ ಒಳಗೊಂಡಿರುತ್ತದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತ ಡಿ ರಂದೀಪ್ ಹೇಳಿದ್ದಾರೆ. ಪುಟ 2

### ಇಂದು ಕೇಂದ್ರ ಸಚಿವರೊಂದಿಗೆ ಸಭೆ ನಡೆಸಲು ಒಪ್ಪಿದ

## ರೈತ ಮುಖಂಡರು



**ಚಂಡೀಗಢ:** ಕೇಂದ್ರ ಸರ್ಕಾರ ಇಂದು ಚಂಡೀಗಢದಲ್ಲಿ ರೈತರೊಂದಿಗೆ ಸಭೆ ನಡೆಸಲಿದ್ದು, ಪ್ರತಿಭಟನಾಕಾರರು ತಾಳ್ಮೆಯಿಂದಿರುತ್ತಾರೆ. ಅಲ್ಲಿಯವರೆಗೆ ವಿವಿಧ ಗಡಿಗಳಲ್ಲಿನ ಬ್ಯಾರಿಕೇಡ್‌ಗಳು ಮತ್ತು ಇತರ ಅಡೆತಡೆಗಳನ್ನು ದಾಟಲು ಪ್ರಯತ್ನಿಸುವುದಿಲ್ಲ ಎಂದು ರೈತ ಮುಖಂಡರೊಬ್ಬರು ತಿಳಿಸಿದ್ದಾರೆ. ಚಂಡೀಗಢದಲ್ಲಿ ಬುಧವಾರ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ನಂತರ ಮಾತನಾಡಿದ ರೈತ ಮುಖಂಡ ಸರ್ವಾನ್ ಸಿಂಗ್ ಪಂಧೇರ್, ಕೇಂದ್ರ ಕೃಷಿ ಸಚಿವ ಅರ್ಜುನ್ ಮುಂಡಾ ಮತ್ತು ಇತರ ಇಬ್ಬರು ಕೇಂದ್ರ ಸಚಿವರಾದ ಪಿಯೂಷ್ ಗೋಯಲ್ ಮತ್ತು ನಿತ್ಯಾನಂದ ರಾಯ್ ಅವರು ನಗರದಲ್ಲಿ ಪ್ರತಿಭಟನೆ ನಿರತ ರೈತರ ಪ್ರತಿನಿಧಿಗಳನ್ನು ಗುರುವಾರ ಭೇಟಿ ಮಾಡಿದ್ದರು. ಗೋಯಲ್ ಅವರು ಆಹಾರ ಮತ್ತು ಸಾರ್ವಜನಿಕ ವಿತರಣಾ ಖಾತೆಯನ್ನು ಹೊಂದಿದ್ದು ರಾಯ್ ಅವರು ಗೃಹ ಖಾತೆ ರಾಜ್ಯ ಸಚಿವರಾಗಿದ್ದಾರೆ.

''ಕಳೆದ ರಾತ್ರಿ ನಮಗೆ ಬಂದ ಸಂದೇಶ ಮತ್ತು ಕೇಂದ್ರ ಸಚಿವ ಅನುರಾಗ್ ಠಾಕೂರ್ ಸಂವಾದಕ್ಕೆ ಕರೆದ ಆಧಾರದ ಮೇಲೆ, ನಾವು ಚಳವಳಿಯಲ್ಲಿ ಎಲ್ಲರೊಂದಿಗೆ ಮಾತನಾಡಿದ್ದೇವೆ. ನಾವು ಇಂದು ಶಾಂತಿಯಿಂದಿರಲು ನಿರ್ಧರಿಸಿದ್ದೇವೆ. ನಾವಿದ್ದ ಸ್ಥಳದಿಂದ ಮುಂದೆ ಹೋಗಲು ಪುಟ 2

## ಸಂಕ್ಷಿಪ್ತ ಸುದ್ದಿ

### ವಿಚಾರಣೆ ನೆಪದಲ್ಲಿ ಠಾಣೆಗೆ ಕರೆತಂದು ಮಹಿಳೆಗೆ ಹಲ್ಲೆ

## ಅಮಾನತು





**ಮಂಡ್ಯ:** ವಿಚಾರಣೆ ನೆಪದಲ್ಲಿ ಮಹಿಳೆಯೊಬ್ಬಳ ಮೇಲೆ ಮಂಡ್ಯದ ಪೂರ್ವ ಠಾಣೆ ಪಿಎಸ್‌ಐ ಅಯ್ಯನಗೌಡ ಎಂಬುವವರು ದರ್ಪ ಮೆರೆದಿದ್ದು, ಮಂಡ್ಯದ ಅಶೋಕ್ ನಗರ ನಿವಾಸಿ ರೂಪದೇವಿ ಎಂಬಾಕೆಯ ಮೇಲೆ ಪೊಲೀಸ್ ಠಾಣೆಯಲ್ಲಿಯೇ ಹಲ್ಲೆ ನಡೆಸಿದ್ದಾರೆ. ಈ ಹಿನ್ನಲೆ ಪಿಎಸ್‌ಐ ವಿರುದ್ಧ ಮಹಿಳೆಯ ತಾಯಿ ಗೌರಮ್ಮ ಠಾಣೆಗೆ ದೂರು ನೀಡಿದ್ದು, ದೂರಿನ ಅನ್ವಯ ಪಿಎಸ್ ಐರನ್ನ ಅಮಾನತು ಮಾಡಿ ಮಂಡ್ಯ ಎಸ್ ಪಿ ಯತೀಶ್ ಆದೇಶ ಮಾಡಿದ್ದಾರೆ. ಪುಟ 2

### ಬೆಂಗಳೂರು ಶಿಕ್ಷಕರ ಕ್ಷೇತ್ರದ ಉಪಚುನಾವಣೆ: ಮತದಾರರಿಗೆ ವಿಶೇಷ ಸಾಂದರ್ಭಿಕ ರಜೆ

## ಘೋಷಣೆ



**ಬೆಂಗಳೂರು:** ಕರ್ನಾಟಕ ವಿಧಾನಪರಿಷತ್‌ನ ಬೆಂಗಳೂರು ಶಿಕ್ಷಕರ ಕ್ಷೇತ್ರದ ಉಪಚುನಾವಣೆ ಇದೇ ಫೆಬ್ರವರಿ 16ರಂದು ನಡೆಯಲಿದ್ದು, ಇದಕ್ಕೆ ಬಿಬಿಎಂಪಿ ಎಲ್ಲಾ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ಇನ್ನು ಈ ಸಂಬಂಧ ಮಲ್ಲೇಶ್ವರದ ಐಪಿಪಿ ಸಭಾಂಗಣದಲ್ಲಿ ಅಂತಿಮ ಹಂತದ ಕ್ರಮಗಳ ಕುರಿತು ಸಭೆ ಬಿಬಿಎಂಪಿ ನಡೆಸಿತು. ಇನ್ನು ಮತದಾನದ ದಿನ (ಫೆ.16) ಮತದಾರರಿಗೆ ವಿಶೇಷ ಸಾಂದರ್ಭಿಕ ರಜೆ ಇರಲಿದೆ. ಕ್ಷೇತ್ರ ವ್ಯಾಪ್ತಿಯ ಅರ್ಹ ಶಿಕ್ಷಕ ಮತದಾರರಿಗೆ ಅಂದು ವಿಶೇಷ ಸಾಂದರ್ಭಿಕ ರಜೆ ಮಂಜೂರು ಮಾಡಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಆದೇಶ ಹೊರಡಿಸಿದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ ಜಿಲ್ಲೆಯ ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ಮತದಾನ ನಡೆಯಲಿದ್ದು, ಇಲ್ಲಿನ ಸರ್ಕಾರಿ, ಖಾಸಗಿ ಶಾಲಾ ಕಾಲೇಜು, ಪುಟ 2

### ರಾಜ್ಯಸಭಾ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಮಾಡಿದ ಕಾಂಗ್ರೆಸ್

## ರಾಜಸ್ಥಾನದಿಂದ ಸೋನಿಯಾ ಸ್ಪರ್ಧೆ

**ರಾಜಸ್ಥಾನ:** ಬಿಜೆಪಿಯು ರಾಜ್ಯಸಭಾ ಅಭ್ಯರ್ಥಿಗಳ ಎರಡನೇ ಪಟ್ಟಿ ಬಿಡುಗಡೆ ಮಾಡಿದ ಬೆನ್ನಲ್ಲೇ ಕಾಂಗ್ರೆಸ್ ಕೂಡ ನಾಲ್ಕು ರಾಜ್ಯಸಭಾ ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ. ರಾಜಸ್ಥಾನದಿಂದ ಸೋನಿಯಾ ಗಾಂಧಿಯನ್ನು ಅಭ್ಯರ್ಥಿಯನ್ನಾಗಿ ಘೋಷಣೆ ಮಾಡಲಾಗಿದೆ. ಹಿಮಾಚಲ ಪ್ರದೇಶದಿಂದ ಅಭಿಷೇಕ್ ಮನುಸಿಂಘ್ವಿಗೆ ಟಿಕೆಟ್ ನೀಡಲಾಗಿದೆ, ಬಿಹಾರದಿಂದ ಡಾ. ಅಖಿಲೇಶ್ ಪ್ರಸಾದ್ ಸಿಂಗ್ ಸ್ಪರ್ಧಿಸಿದರೆ ಮಹಾರಾಷ್ಟ್ರದಿಂದ ಚಂದ್ರಕಾಂತ್ ಗೆ ಹಂಡೋರೆಗೆ ಟಿಕೆಟ್ ನೀಡಲಾಗಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪಟ್ಟಿಯನ್ನು ಪ್ರಕಟ ಮಾಡಿದ್ದಾರೆ.

ರಾಜಸ್ಥಾನದಿಂದ ಸೋನಿಯಾ ಗಾಂಧಿ



ಮತ್ತು ಹಿಮಾಚಲದಿಂದ ಅಭಿಷೇಕ್ ಮನು ಸಿಂಘ್ವಿ ಅವರಿಗೆ ಟಿಕೆಟ್ ನೀಡಲಾಗಿದೆ. ಇದರೊಂದಿಗೆ ಬಿಹಾರದಿಂದ ಅಖಿಲೇಶ್ ಪ್ರಸಾದ್ ಸಿಂಗ್ ಮತ್ತು ಮಹಾರಾಷ್ಟ್ರದಿಂದ ಚಂದ್ರಕಾಂತ್ ಹಂದೋರೆ ಹೆಸರನ್ನು ಪ್ರಕಟಿಸಲಾಗಿದೆ. ಚಂದ್ರಕಾಂತ ಹಂದೋರೆ ಮಹಾರಾಷ್ಟ್ರದ ದಲಿತ ನಾಯಕ.

ಮಧ್ಯಪ್ರದೇಶದಲ್ಲಿ ಒಂದು, ತೆಲಂಗಾಣದಲ್ಲಿ ಎರಡು ಮತ್ತು ಕರ್ನಾಟಕದಲ್ಲಿ ಮೂರು ರಾಜ್ಯಸಭಾ ಸ್ಥಾನಗಳಿಗೆ ಕಾಂಗ್ರೆಸ್ ಅಭ್ಯರ್ಥಿಗಳನ್ನು ಇನ್ನೂ ಘೋಷಿಸಿಲ್ಲ.

ಕಾಂಗ್ರೆಸ್ ಸಂಸದೀಯ ಪಕ್ಷದ ಮುಖ್ಯಸ್ಥೆ ಸೋನಿಯಾ ಗಾಂಧಿ ಅವರು ಬುಧವಾರ ರಾಜಸ್ಥಾನದಿಂದ ರಾಜ್ಯಸಭಾ ಚುನಾವಣೆಗೆ ನಾಮಪತ್ರ ಸಲ್ಲಿಸಿದ್ದಾರೆ. ರಾಜಸ್ಥಾನದ ಮಾಜಿ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್, ರಾಜ್ಯ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಗೋವಿಂದ್ ಸಿಂಗ್ ದೋತಾಸ್ರಾ ಮತ್ತು ಇತರ ಕೆಲವು ನಾಯಕರು ಸೋನಿಯಾ ಅವರನ್ನು ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡರು.

ಸೋನಿಯಾ ಗಾಂಧಿ 1999 ರಿಂದ ಲೋಕಸಭಾ ಸದಸ್ಯರಾಗಿದ್ದಾರೆ ಮತ್ತು ಪ್ರಸ್ತುತ ಉತ್ತರ ಪ್ರದೇಶದ ಪುಟ 2

### ಪರಿಷತ್ ಚುನಾವಣೆಗೆ ಮದ್ಯ ಮಾರಾಟ ನಿರ್ಬಂಧದಲ್ಲಿ ಮಾರ್ಪಾಡು

## ಮತಎಣಿಕೆ ದಿನದಂದು ನಿರ್ಬಂಧ

**ಬೆಂಗಳೂರು:** ರಾಜ್ಯದಲ್ಲಿ ಇದೇ ತಿಂಗಳ 16 ರಂದು ವಿಧಾನಪರಿಷತ್ ಬೆಂಗಳೂರು ಶಿಕ್ಷಕರ ಕ್ಷೇತ್ರದ ಉಪಚುನಾವಣೆಯ ಮತದಾನ ನಡೆಯಲಿದೆ. ಹೀಗಾಗಿ ಮತದಾನಕ್ಕೂ ಮುನ್ನ 48 ಗಂಟೆಗಳ ಅವಧಿಯಲ್ಲಿ ಮದ್ಯ ಮಾರಾಟಕ್ಕೆ ನಿಷೇಧ ಹೇರಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದರು. ಆದರೆ ಈ ಕ್ರಮ ಮೇಲ್ನೋಟಕ್ಕೆ ಸಮರ್ಪಕವಾಗಿಲ್ಲ ಎಂದು ನಿನ್ನೆ ಹೈಕೋರ್ಟ್ ಮೌಖಿಕವಾಗಿ ಅಭಿಪ್ರಾಯಪಟ್ಟಿತ್ತು. ಸದ್ಯ ಇದೇ ವಿಚಾರ ಸಂಬಂಧ ಪರಿಷತ್ ಚುನಾವಣೆಗೆ ಮದ್ಯ ಮಾರಾಟ ನಿರ್ಬಂಧದಲ್ಲಿ ಮಾರ್ಪಾಡು ಮಾಡಲಾಗಿದೆ. ಫೆ.16ರ ಬೆಳಗ್ಗೆ 6ರಿಂದ ಮಧ್ಯರಾತ್ರಿವರೆಗೆ ಹಾಗೂ ಫೆ.20ರ ಬೆಳಗ್ಗೆ 6ರಿಂದ ಮಧ್ಯರಾತ್ರಿವರೆಗೆ ಮಾತ್ರ ಮದ್ಯ ಮಾರಾಟ ನಿರ್ಬಂಧ ಹೇರಿ ನ್ಯಾ.ಎಸ್.ಆರ್.ಕೃಷ್ಣ ಕುಮಾರ್‌ರಿದ್ದ ಹೈಕೋರ್ಟ್ ಪೀಠ ಮಧ್ಯಂತರ ಆದೇಶ ಹೊರಡಿಸಿದೆ.

ರಾಜ್ಯದಲ್ಲಿ 2024ರ ವಿಭಾಸಭಾ ಚುನಾವಣೆ ಇದೇ 16 ರಂದು ನಿಗದಿಯಾಗಿದೆ. ಈ ಹಿನ್ನೆಲೆಯಲ್ಲಿ ಚುನಾವಣೆಗೂ ಒಂದು ದಿನ ಮುನ್ನ ಸೇರಿ ಒಟ್ಟು 48 ಗಂಟೆಗಳ ಕಾಲ ಬೆಂಗಳೂರು ನಗರದಲ್ಲಿ




ಮದ್ಯ ಮಾರಾಟಕ್ಕೆ ನಿಷೇಧಿಸಿರುವುದಾಗಿ ಬೆಂಗಳೂರು ನಗರ ಜಿಲ್ಲಾಧಿಕಾರಿಯವರು ಆದೇಶ ಹೊರಡಿಸಿದ್ದರು. ಇದನ್ನು ಪ್ರಶ್ನಿಸಿ ಅರ್ಜಿದಾರರು ಹೈಕೋರ್ಟ್ ಮೆಟ್ಟಿಲೇರಿದ್ದರು. ಸದ್ಯ ಈಗ ನ್ಯಾ. ಎಸ್.ಆರ್.ಕೃಷ್ಣ ಕುಮಾರ್‌ರಿದ್ದ ಹೈಕೋರ್ಟ್ ಪೀಠ ಮಧ್ಯಂತರ ಆದೇಶ ಹೊರಡಿಸಿದೆ.

ಮತದಾನ, ಎಣಿಕೆ ದಿನದಂದು ಮಾತ್ರ ಮದ್ಯ ಮಾರಾಟ ನಿರ್ಬಂಧ ಹೇರಿ ಆದೇಶ ಹೊರಡಿಸಲಾಗಿದೆ. ಪುಟ 2

# ಪೊಲೀಸರ ಕರ್ತವ್ಯ ಪ್ರಜ್ಞೆ

### ಪೊಲೀಸ್ ಕಾರ್ಯಕ್ಕೆ ಅಪಾರ ಮೆಚ್ಚುಗೆ!

**ಬೆಳಗಾವಿ:** ಅದು ಡಿಸೆಂಬರ್ 10ರ ಮಧ್ಯರಾತ್ರಿ ಬೆಳಗಾವಿ ತಾಲೂಕಿನ ವಂಟಮೂರಿ ಗ್ರಾಮದಲ್ಲಿ ಅದೊಬ್ಬ ಮಹಿಳೆಯನ್ನ ವಿವಸ್ತ್ರಗೊಳಿಸಿ ವಿದ್ಯುತ್ ಕಂಬಕ್ಕೆ ಕಟ್ಟಿಹಾಕಿ ಹಲ್ಲೆ ಮಾಡ್ತಿದ್ದರು. ಈ ವೇಳೆ ಕಾಕತಿ ಠಾಣೆ ಪೊಲೀಸರ 112ಗೆ ಗ್ರಾಮಸ್ಥರೊಬ್ಬರು ಕರೆ ಮಾಡಿ ಘಟನೆ ಕುರಿತು ಹೇಳಿದ್ದಾರೆ, ಹೀಗೆ ಕರೆ ಬಂದ ಹದಿನೈದು ನಿಮಿಷದಲ್ಲಿ 112 ವಾಹನ ಸಮೇತ ಇಬ್ಬರು ಪೊಲೀಸ್ ಕಾನ್ಸ್ ಟೇಬಲ್ ಗಳಾದ ಸುಭಾಷ ಬಿಲ್ ಮತ್ತು ವಿಠ್ಠಲ ಪಟ್ಟೇದ ಸ್ಥಳಕ್ಕೆ ಹೋಗಿದ್ದಾರೆ.

ಈ ವೇಳೆ ಮಹಿಳೆಯ ಸ್ಥಿತಿ ಕಂಡು ಶಾಕ್ ಆಗಿದ್ದಾರೆ, ಕೂಡಲೇ ಅಲ್ಲಿದ್ದ ಆರೋಪಿಗಳಿಗೆ ಆವಾಜ್ ಹಾಕಿ ತಡೆಯುವ ಕೆಲಸ ಮಾಡಿದ್ದಾರೆ. ಇದೇ ವೇಳೆ ಘಟನೆ ಕೈಮೀರಬಾರದು ಅನ್ನೋ ಕಾರಣಕ್ಕೆ ಕೂಡಲೇ ಪಿಎಸ್‌ಐ ಮಂಜುನಾಥ್ ಹುಲಕುಂದ ಗೆ ಕರೆ ಮಾಡಿದ ಸಿಬ್ಬಂದಿ ಘಟನೆ ಕುರಿತು ಹೇಳಿದ್ದಾರೆ. ಇದಾದ ಬಳಿಕ



ಇಬ್ಬರೂ ಪೊಲೀಸ್ ಕಾನ್ಸ್ ಟೇಬಲ್ ಗಳು ಮೊಟ್ಟಮೊದಲ ಕೆಲಸವಾಗಿ ಮಹಿಳೆಯ ಮನೆಗೆ ಓಡಿ ಹೋಗಿ ಸೀರೆಯೊಂದನ್ನ ತಂದು ಆ ತಾಯಿಗೆ ನೀಡಿ ಮಾನ ಮುಚ್ಚುವ ಕೆಲಸ ಮಾಡಿದ್ದಾರೆ.

ಇನ್ನು ಘಟನೆ ನಡೆದ ಸಂದರ್ಭದಲ್ಲಿ 100ಕ್ಕೂ ಅಧಿಕ ಜನ ಅಲ್ಲಿ ಮೂಕ ಪ್ರೇಕ್ಷಕರಾಗಿದ್ದರು. ಪುಟ 2

### ಮುಚ್ಚುವ ಹಂತಕ್ಕೆ ಬಂದ ಬೀದರ್ ನಾಗರಿಕ ವಿಮಾನಯಾನ

## ಸ್ಟಾರ್ ಏರ್ ಜೆಟ್ ವಿಮಾನ ಹಾರಾಟ ಸ್ಥಗಿತ

**ಬೀದರ್:** ಬೀದರ್‌ಜಿಲ್ಲೆಯಿಂದ ರಾಜ್ಯದ ರಾಜ್ಯಧಾನಿ ಬೆಂಗಳೂರಿಗೆ ವಿಮಾನ ಹಾರಾಡಬೇಕೆಂಬ ಕನಸನ್ನು ಇಲ್ಲಿನ ಜನ ಕಂಡಿದ್ದರು. ಈ ಜಿಲ್ಲೆಯ ನಾಗರಿಕರ ಕನಸಿನಂತೆ ಗಡಿ ಜಿಲ್ಲೆ ಬೀದರ್ ನಿಂದ ಬೆಂಗಳೂರಿಗೆ ವಿಮಾನ ಹಾರಾಟ ಕುಡ ಆರಂಭವಾಯಿತು. ಆದರೆ ಕಳೆದೆರಡು ತಿಂಗಳಿಂದ ವಿಮಾನ ಹಾರಾಟ ನಿಲ್ಲಿಸಿದ್ದು, ಬೀದರ್ ವಿಮಾನ ನಿಲ್ದಾಣ ಮುಚ್ಚುವ ಎಲ್ಲಾ ಲಕ್ಷಣಗಳು ಗೋಚರಿಸುತ್ತಿವೆ.

ಗಡಿ ಜಿಲ್ಲೆ ಬೀದರ್ ನಲ್ಲಿ ವಿಮಾನ ನಿಲ್ದಾಣವಾಗಬೇಕು. ರಾಜ್ಯ ರಾಜ್ಯಧಾನಿ ಬೆಂಗಳೂರು, ದೇಶದ ರಾಜಧಾನಿ ದೆಹಲಿ, ಹೈದರಾಬಾದ್, ಪುಣೆಗೆ ಇಲ್ಲಿಂದ ವಿಮಾನ ಹಾರಾಟ ಮಾಡಬೇಕು ಅಂತ ಜಿಲ್ಲೆಯ ಜನರು ಕನಸು ಕಂಡಿದ್ದರು. ಇದಕ್ಕಾಗಿ ಹತ್ತಾರು ಹೋರಾಟಗಳನ್ನ ಸಹ ಜನರು ಮಾಡಿದ್ದರು. ಜನರ ಹೋರಾಟಕ್ಕೆ ಮಣಿದ ಕೇಂದ್ರ ಸರಕಾರ 2020ರ ಫೆಬ್ರವರಿ 7 ರಂದು ಬೀದರ್ ನಿಂದ ಬೆಂಗಳೂರಿಗೆ 72




ಸೀಟ್ ನ ಟ್ರೂಜೆಟ್ ವಿಮಾನದ ಹಾರಾಟ ಆರಂಭಿಸಿತು. ಆದರೆ ಪ್ರಯಾಣಿಕರ ಕೊರತೆ, ಆರ್ಥಿಕ ನಷ್ಟದಿಂದಾಗಿ ಟ್ರೂಜೆಟ್ ವಿಮಾನ ಕೆಲವು ತಿಂಗಳಲ್ಲಿಯೇ ತನ್ನ ಹಾರಾಟವನ್ನು ನಿಲ್ಲಿಸಿತು.

ಇದಾದ ಬಳಿಕ ಒಂದು ವರ್ಷಗಳ ಕಾಲ ವಿಮಾನ ಹಾರಾಡಲೇ ಇಲ್ಲ. ಪ್ರಯಾಣೀಕರು ಹೈದ್ರಾಬಾದ್‌ಗೆ ಹೋಗಿ ಅಲ್ಲಿಂದ ವಿಮಾಣದ ಮೂಲಕ ಬೆಂಗಳೂರು ಸೇರಿದಂತೆ ಬೇರೆ ಬೇರೆ ರಾಜ್ಯಗಳಿಗೆ ಪ್ರಯಾಣ ಮಾಡಲು ಆರಂಭಿಸಿದರು. ಇದು ಪ್ರಯಾಣಿಕರಿಗೆ ಕಷ್ಟವಾಗತೊಡಗಿದಾಗ ಪ್ರಯಾಣಿಕರ ಒತ್ತಾಯದ ಮೇರೆಗೆ 2022 ಜೂನ್ 15 ರಂದು ಸ್ಟಾರ್ ಏರ್ ವಿಮಾನ ತನ್ನ ಹಾರಾಟವನ್ನು ಆರಂಭಿಸಿತು. ಆದರೆ ಎರಡು ವರ್ಷದಲ್ಲಿಯೇ ಇದು ಕೂಡ ಆರ್ಥಿಕನಷ್ಟದಿಂದಾಗಿ ತನ್ನ ಸೇವೆಯನ್ನ ನಿಲ್ಲಿಸಿದೆ. ಹೀಗಾಗಿ ಇಲ್ಲಿ ಸುಸಜ್ಜಿತ ಏರ್ ಪೋರ್ಟ್ ಇದ್ದರು ಕೂಡಾ ಜಿಲ್ಲೆಯ ಜನರಿಗೆ ವಿಮಾನ ಸೌಲಭ್ಯ ಸಿಗದಂತಾಗಿದೆ ಇದು ಸಹಜವಾಗಿಯೇ ಜಿಲ್ಲೆಯ ಜನರ ನಿರಾಸೆಗೆ ಕಾರಣವಾಗಿದೆ.

ಕೊರೊನಾ ಸಮಯದಲ್ಲಿ ಬೀದರ್ ವಿಮಾನನಿಲ್ದಾಣ ಆರಂಭವಾಗಿದ್ದರುಕೂಡಾ ಅವತ್ತಿನಿಂದ ಇವತ್ತಿನ ವರೆಗೆ ಪ್ರಯಾಣಿಕರು ಹೆಚ್ಚಿನ ಸಂಖ್ಯೆಯಲ್ಲಿಯೇ ಓಡಾಡಿದ್ದಾರೆ. ಆದರೂ ಕೂಡಾ ಟ್ರೂಜೆಟ್ ಹಾಗೂ ಸ್ಟಾರ್ ಏರ್ ನವರು ನಷ್ಟವಾಗುತ್ತಿದೆಂದು ಹೇಳಿ ತಮ್ಮ ಸೇವೆಯನ್ನು ನಿಲ್ಲಿಸಿದ್ದು ಇದು ಪ್ರಯಾಣಿಕರಿಗೆ ಸಾಕಷ್ಟು ಸಮಸ್ಯೆಯನ್ನುಂಟು ಮಾಡಿದೆ. ಬಿದರ್ ನಲ್ಲಿ ವಿಮಾನ ಹಾರಾಟ ಸ್ಥಗಿತವಾಗಿದ್ದರಿಂದ ಜಿಲ್ಲೆಯ ಜನರು ಅನಿವಾರ್ಯವಾಗಿ ಕಲಬುರ್ಗಿ ಅಥವಾ ಹೈದ್ರಾಬಾದ್‌ಗೆ ಹೋಗಿ ವಿಮಾನದ ಮೂಲಕ ಬೆಂಗಳೂರಿಗೆ ಹೋಗವಂತ ಸ್ಥಿತಿ ಉದ್ಭವಿಸಿದೆ. ಪಕ್ಕದ ಕಲಬುರ್ಗಿಯಿಂದ ದಿನಕ್ಕೆ ಐದಾರು ವಿಮಾನಗಳು ಹಾರಾಟ ಮಾಡುತ್ತಿವೆ. ಜೊತೆಗೆ ಅನ್ಯ ರಾಜ್ಯಕ್ಕೂ ಕೂಡ ಇಲ್ಲಿಂದ ವಿಮಾನ ಹಾರಾಟ ಮಾಡುತ್ತಿದೆ. ಆದರೆ ಬೀದರ್ ನಲ್ಲಿ ಮಾತ್ರ ಇದ್ದ ಪುಟ 2

# ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆಗೆ 3 ತಿಂಗಳ ಅವಧಿ ವಿಸ್ತರಣೆ

**ಬೆಂಗಳೂರು:** ವಾಹನಗಳಿಗೆ ಹೈ ಸೆಕ್ಯುರಿಟಿ ರಿಜಿಸ್ಟ್ರೇಷನ್ ನಂಬರ್ ಪ್ಲೇಟ್ ಅಳವಡಿಕೆಗೆ 3 ತಿಂಗಳ ಅವಧಿ ವಿಸ್ತರಣೆ ಮಾಡುವುದಾಗಿ ಸರ್ಕಾರ ಘೋಷಣೆ ಮಾಡಿದೆ ವಿಧಾನ ಪರಿಷತ್ ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್ ನ ಸದಸ್ಯ ಮಧು ಜಿ ಮಾದೇಗೌಡ ಪ್ರಶ್ನೆಗೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಉತ್ತರ ನೀಡಿದರು. ಹೈ ಸೆಕ್ಯುರಿಟಿ ನಂಬರ್ ಪ್ಲೇಟ್ ಅಳವಡಿಕೆಗೆ ಫೆಬ್ರವರಿ 17, 2024ಕಕ್ಕೆ ಗಡುವು ಮುಕ್ತಾಯವಾಗಲಿದೆ. ಹೀಗಾಗಿ ವಾಹನಗಳಿಗೆ ಹೈ ಸೆಕ್ಯುರಿಟಿ ರಿಜಿಸ್ಟ್ರೇಷನ್ ನಂಬರ್ ಪ್ಲೇಟ್ ಅಳವಡಿಕೆಗೆ 3 ತಿಂಗಳ ಅವಧಿ ವಿಸ್ತರಣೆ ಮಾಡುತ್ತೇವೆ ಎಂದರು. ರಾಜ್ಯದಲ್ಲಿ ಈಗಾಗಲೇ 18,32,787 ವಾಹನಗಳಿಗೆ ನಂಬರ್ ಪ್ಲೇಟ್ ಅಳವಡಿಕೆ ಮಾಡಲಾಗಿದೆ. ರಾಜ್ಯದಲ್ಲಿ 9.16%. ಮಾತ್ರ ನಂಬರ್ ಪ್ಲೇಟ್ ಅಳವಡಿಕೆ ಮಾಡಲಾಗಿದೆ. ಬೇರೆ ರಾಜ್ಯಗಳಲ್ಲಿ ಇದು ವೇಗವಾಗಿ ಆಗಿದೆ. ನಮ್ಮ ರಾಜ್ಯದಲ್ಲಿ ನಂಬರ್ ಪ್ಲೇಟ್ ಅಳವಡಿಕೆ ತಡವಾಗಿದೆ. ಹೀಗಾಗಿ 3 ತಿಂಗಳು ಅವಧಿ ವಿಸ್ತರಣೆ ಮಾಡಿ ಆದಷ್ಟು ಬೇಗ ನಂಬರ್ ಪ್ಲೇಟ್ ಅಳವಡಿಕೆ ಮಾಡಲು ಕ್ರಮ ತೆಗೆದುಕೊಳ್ಳುತ್ತೇವೆ ಎಂದು ವಿವರಿಸಿದರು.

# ಕಾಂಗ್ರೆಸ್‌ನವರು ಕೊಟ್ಟ ಕಾರ್ಡ್ ನೀಡಿದ್ರೆ, ಮೈತ್ರಿ ಪಕ್ಷದಿಂದ ಗಿಫ್ಟ್




**ರಾಮನಗರ:** ಲೋಕಸಭಾ ಚುನಾವಣೆ ಸಮೀಪ ಹಿನ್ನೆಲೆ ಕಾಂಗ್ರೆಸ್‌ನ ಗಿಫ್ಟ್ ಕಾರ್ಡ್ ಪಾಲಿಟಿಕ್ಸ್‌ಗೆ ಜೆಡಿಎಸ್-ಬಿಜೆಪಿ ಕೌಂಟರ್ ಕೊಡಲು ಮುಂದಾಗಿದೆ. ಕಳೆದ ಚುನಾವಣೆ ವೇಳೆ ರಾಮನಗರ ಹಾಗೂ ಮಾಗಡಿ ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್‌ನಿಂದ ಗಿಫ್ಟ್ ಕಾರ್ಡ್ ಹಂಚಿಕೆ ಹಿನ್ನೆಲೆ ಗಿಫ್ಟ್ ನೀಡದ ಕಾಂಗ್ರೆಸ್ಸಿಗರಿಗೆ ಜೆಡಿಎಸ್ ಮಾಜಿ ಶಾಸಕ ಎ.ಮಂಜು ತಿರುಗೇಟು ನೀಡಿದ್ದಾರೆ. ಮಾಗಡಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಳೆದ ಚುನಾವಣೆಯಲ್ಲಿ ಮತದಾರರಿಗೆ ಗಿಫ್ಟ್ ಕಾರ್ಡ್ ಕೊಟ್ಟು ಕಾಂಗ್ರೆಸ್‌ನವ್ರು ಮೋಸ ಮಾಡಿದ್ದಾರೆ. ಸರ್ಕಾರ ಬಂದು ವರ್ಷ ಸಮೀಪಿಸಿದ್ರೂ ಗಿಫ್ಟ್‌ಗಳನ್ನ ನೀಡದೇ ಜನರನ್ನು ಯಾಮಾರಿಸಿದ್ದಾರೆ. ಹಾಗಾಗಿ ಮೋಸ ಹೋದ ಜನರಿಗೆ ಜೆಡಿಎಸ್-ಬಿಜೆಪಿಯಿಂದ ಗಿಫ್ಟ್ ಕೊಡುತ್ತೇವೆ. ಕಾಂಗ್ರೆಸ್‌ನವರು ಕೊಟ್ಟ ಕಾರ್ಡ್ ಅನ್ನ ನಮ್ಮ ಬಳಿ ತಂದು ಕೊಟ್ಟರೆ, ನೀವು ಕಾಂಗ್ರೆಸ್ಸಿಗೆ ಮತ ಹಾಕಿ ಮೋಸ ಹೋಗಿದ್ದೀರಾ ಎಂದು ತಿಳಿಹೇಳಿ ನಾವೇ ಗಿಫ್ಟ್ ಕೊಡ್ತೇವೆ ಎಂದು ಮಾಜಿ ಶಾಸಕ ಎ.ಮಂಜುನಾಥ್ ತಿಳಿಸಿದ್ದಾರೆ. ಕಾಂಗ್ರೆಸ್‌ನವರು ಹಂಚಿದ್ದ ಗಿಫ್ಟ್ ಕಾರ್ಡ್‌ಗಳು ಈಗಾಗಲೇ ಎಕ್ಸ್ಪೈರ್ ಆಗಿದೆ. ಆದರೂ ಆ ಕಾರ್ಡ್‌ಗಳಿಗೆ ನಾವೇ ಗಿಫ್ಟ್ ಹಂಚುತ್ತೇವೆ. ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರಿಗೂ ಕೂಡಾ ಗಿಫ್ಟ್ ಕೊಡಲು ನಾವು ಸಿದ್ಧರಿದ್ದೇವೆ. ಕಾರ್ಡ್ ಕೊಟ್ಟು ಗಿಫ್ಟ್ ಪಡೆದುಕೊಳ್ಳಬಹದು ಎಂದು ಮಾಜಿ ಶಾಸಕ ಮಂಜುನಾಥ್ ತಿಳಿಸಿದ್ದಾರೆ.

# ಕಾಂಗ್ರೆಸ್ ಆಡಳಿತದಲ್ಲಿ ಕ್ರೈಮ್ ಸಿಟಿಯಾಗುತ್ತಿದೆ ಬೆಂಗಳೂರು



**ಬೆಂಗಳೂರು:** ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಸೇಫ್ ಸಿಟಿಯಾಗಿದ್ದ ಬೆಂಗಳೂರು ಕಾಂಗ್ರೆಸ್ ಆಡಳಿತಕ್ಕೆ ಬಂದ ಬಳಿಕ ಕ್ರೈಮ್ ಸಿಟಿಯಾಗುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ ವಾಗ್ದಾಳಿ ನಡೆಸಿದರು. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಅದಕ್ಕೆ ಉದಾಹರಣೆ, ಮಾಜಿ ಸಚಿವ ಗೋಪಾಲಯ್ಯ ಅವರಿಗೆ ಬಂದಿರುವ ಕೊಲೆ ಬೆದರಿಕೆ. ಎಲ್ಲಿ ಕಾನೂನು ಸುವ್ಯವಸ್ಥೆ ಸರಿ ಇರುತ್ತದೋ, ಅಲ್ಲಿಗೆ ಬಂಡವಾಳ ಹರಿದು ಬರುತ್ತದೆ. ನಮ್ಮ ರಾಜ್ಯದಲ್ಲಿ ಅನೇಕ ಹೂಡಿಕೆ ಬರುತ್ತಿತ್ತು, ಆದರೆ ಈಗ ಹೂಡಿಕೆದಾರರ ಸಂಖ್ಯೆ ಕಡಿಮೆಯಾಗಿದೆ ಎಂದರು. ದೌರ್ಜನ್ಯ ಪ್ರಕರಣದಲ್ಲಿ ಕರ್ನಾಟಕ ಈಗ ಮೂರನೇ ಸ್ಥಾನದಲ್ಲಿದೆ. ಬೆಂಗಳೂರು ನಂಬರ್ ಒನ್ ಕ್ರೈಮ್ ಸಿಟಿ ಆಗಿದೆ. ಸೈಬರ್ ವಂಚನೆಯಲ್ಲಿ ನಂಬರ್ ಒನ್ ಸ್ಥಾನದಲ್ಲಿದೆ. 438 ಕೋಟಿ ಸೈಬರ್ ವಂಚನೆ ಆಗಿದೆ. ನಮ್ಮ ಸರ್ಕಾರ ಇದ್ದಾಗ ಬಾಲ ಮುಚ್ಚಿಕೊಂಡಿದ್ದ ಭಯೋತ್ಪಾದಕರು, ಬೀದಿ ಬೀದಿಗಳಲ್ಲಿ ಓಡಾಡುತ್ತಿದ್ದಾರೆ. ಪಿಎಫ್‌ಐ ಸಂಘಟನೆಯವರು ಕೇಸ್ ವಾಪಸ್ ತೆಗೆದುಕೊಳ್ಳುತ್ತಾರೆ ಎಂದು ರಾಜಾರೋಷವಾಗಿ ಓಡಾಡುತ್ತಿದ್ದಾರೆ ಎಂದು ಅಶೋಕ್ ಹೇಳಿದರು. ಹಿಂದೆಲ್ಲ ಜನ್ಮದಿನ ಕಾರ್ಯಕ್ರಮಕ್ಕೆ ಕಟೌಟ್, ಫ್ಲೆಕ್ಸ್ ಹಾಕುತ್ತಿದ್ದರು. ಈಗ ಕೋಲಾರದಲ್ಲಿ ರಾಜಾರೋಷವಾಗಿ ತಲ್ವಾರ್ ಹಾಕಿದ್ದಾರೆ. ಕಾಂಗ್ರೆಸ್ ಸರ್ಕಾರ ಬಂದ ಮೇಲೆ ಅಪರಾಧ ಚಟುವಟಿಕೆಗಳು ಹೆಚ್ಚಾಗಿವೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈಗ ಸುಧಾರಿತ ಬಾಂಬ್ ತಯಾರಿ ಮಾಡುತ್ತಿದ್ದಾರೆ. ಬಳ್ಳಾರಿಯಲ್ಲಿ ಮೊಹ್ಮದ್ ಸುಲೇಮಾನ್ ಎಂಬ ಕಿಂಗ್‌ಪಿನ್ ಇದ್ದಾನೆ. ಅಮಾಯಕ ಯುವಕರನ್ನು ಟಾರ್ಗೆಟ್ ಮಾಡಿ ಅವರಿಂದ ಕೃತ್ಯ ಮಾಡಿಸುತ್ತಾನೆ. ಶಿವಾಜಿನಗರದಲ್ಲೂ ಒಬ್ಬನನ್ನು ಎನ್?ಐಎ ಬಂಧಿಸಿದೆ. ಕರ್ನಾಟಕದಲ್ಲಿ ಇಂತಹವರು ಸ್ಲೀಪರ್ ಸೆಲ್ ಆಗಿ ಕೆಲಸ ಮಾಡುತ್ತಿದ್ದಾರೆ. ಸ್ಲೀಪರ್ ಸೆಲ್?ಗಳಿಗೆ ಎಲ್ಲಿಂದ ಹಣ ಬರುತ್ತದೆ, ಯಾರು ಕೊಡ್ತಾರೆ ಎಂಬುದು ಅವರಿಗೆ ಗೊತ್ತಿರಲ್ಲ. ರಾಜ್ಯದಲ್ಲಿ ಗುಪ್ತಚರ ಇಲಾಖೆ ಕೆಲಸ ಮಾಡುತ್ತಿದೆಯೋ, ಇಲ್ಲವೋ ಗೊತ್ತಿಲ್ಲ. ಅದು ಐಸಿಯುನಲ್ಲಿ ಇದೆಯೋ, ಚಿಕಿತ್ಸೆ ಕೊಡಲಾಗ್ತಿದೆಯೋ ಗೊತ್ತಿಲ್ಲ ಎಂದು ಅವರು ಕಿಡಿಕಾರಿದರು. ಪೊಲೀಸ್ ಇಲಾಖೆಯವರು ಚಿಕ್ಕಮಗಳೂರಿನಲ್ಲಿ ಸ್ಟ್ರೈಕ್ ಮಾಡಿದರೆ ಆ ಮಾಹಿತಿಯೇ ಸರ್ಕಾರಕ್ಕೆ ಗೊತ್ತಿಲ್ಲ. ಸ್ಟ್ರೈಕ್ ಮಾಡಿದವರ ಮೇಲೆ ಸರ್ಕಾರ ಕ್ರಮವನ್ನು ತೆಗೆದುಕೊಂಡಿಲ್ಲ. ಬೆಳಗಾವಿಯಲ್ಲಿ ನಾವು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದೆವು. ಆದರೆ, ಬೆಳಗಾವಿಯಲ್ಲಿ ಚಳಿ ಜಾಸ್ತಿ ಇತ್ತೇನೋ, ನೀವು ನಮ್ಮ ಕಡೆ ತಿರುಗಿಯೂ ನೋಡಲಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಬೆಂಗಳೂರಲ್ಲಿ 3 ದಿನ ಅಲ್ಲ, 2 ದಿನ ಮಾತ್ರ ಮದ್ಯ ಮಾರಾಟ ಬಂದ್



**ಬೆಂಗಳೂರು:** ಬೆಂಗಳೂರು ಶಿಕ್ಷಕರ ಕ್ಷೇತ್ರದ ಉಪ ಚುನಾವಣೆ ಹಿನ್ನೆಲೆ ಮದ್ಯ ಮಾರಾಟಕ್ಕೆ ವಿಧಿಸಿದ್ದ ನಿರ್ಬಂಧದಲ್ಲಿ ಮಾರ್ಪಾಡು ಮಾಡಲಾಗಿದೆ. ಮತದಾನದ ದಿನ ಮತ್ತು ಎಣಿಕೆ ದಿನದಂದು ಮಾತ್ರ ಮದ್ಯ ಮಾರಾಟಕ್ಕೆ ಹೈಕೋರ್ಟ್ ನಿರ್ಬಂಧ ವಿಧಿಸಿ ಆದೇಶ ಪ್ರಕಟಿಸಿದೆ.

ಫೆ.16ರ ಬೆಳಗ್ಗೆ 6 ಗಂಟೆಯಿಂದ ಮಧ್ಯರಾತ್ರಿವರೆಗೆ ಮತ್ತು ಫೆ.20 ರ ಬೆಳಗ್ಗೆ 6 ಗಂಟೆಯಿಂದ ಮಧ್ಯರಾತ್ರಿವರೆಗೆ ಮಾತ್ರ ಮದ್ಯ ಮಾರಾಟ ನಿರ್ಬಂಧ ಹೇರಿ ನ್ಯಾ. ಎಸ್.ಆರ್. ಕೃಷ್ಣಕುಮಾರ್ ಅವರಿದ್ದ ಹೈಕೋರ್ಟ್ ಏಕಸದಸ್ಯ ಪೀಠ ಮಧ್ಯಂತರ ಆದೇಶ ಪ್ರಕಟಿಸಿದೆ ಆಹಾರ ಪೂರೈಸಲು ರೆಸ್ಟೋರೆಂಟ್‌ಗಳಿಗೆ ನಿರ್ಬಂಧವಿಲ್ಲ. ಮದ್ಯಪಾನ ನಿರ್ಬಂಧಿಸದಿದ್ದರೆ ಶಿಕ್ಷಕರು ಮದ್ಯ ಸೇವಿಸುತ್ತಾರೆಂದು ಭಾವಿಸಬೇಕಿಲ್ಲ. ಮುಕ್ತ, ನ್ಯಾಯಸಮ್ಮತ ಮತದಾನಕ್ಕೆ ಇ?ಟು ದಿನದ ನಿರ್ಬಂಧ ಅಗತ್ಯವಿಲ್ಲ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ಈ ಆದೇಶ ಬೆಂಗಳೂರು ಮತ್ತು ಬೆಂಗಳೂರು ಗ್ರಾಮಾಂತರಕ್ಕೂ ಅನ್ವಯವಾಗುತ್ತದೆ. 10 ಸಾವಿರ ಮಹಿಳೆಯರು ಹಾಗೂ 6,000 ಪುರು?ರು ಇರುವ ಒಂದೇ ಒಂದು ಶಿಕ್ಷಣ ಕ್ಷೇತ್ರಕ್ಕೆ 16ನೇ ತಾರೀಖು ನಡೆಯುವ ಚುನಾವಣೆಗೆ 3600 ಕ್ಕೂ ಹೆಚ್ಚಿಗೆ ಸನ್ನದುಗಳನ್ನು ಮುಚ್ಚಲು ಆದೇಶ ಕೊಟ್ಟಿರುವುದು ಅನಗತ್ಯ ಹಾಗೂ ಅವೈಜ್ಞಾನಿಕ. ಇದನ್ನು ಮರು ಪರಿಶೀಲಿಸಲೆಂದು ಖುದ್ದು ಚುನಾವಣಾ ಅಧಿಕಾರಿಗಳನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದೆವು. ಆದರೆ ನಮ್ಮ ಪರವಾಗಿ ಸೂಕ್ತ ಆದೇಶ ಬಂದಿರುವುದಿಲ್ಲ. ಈ ಕಾರಣದಿಂದ ನಾವು ಹೈಕೋರ್ಟ್ ಮೊರೆ ಹೋಗಿದ್ದೆವು. ನ್ಯಾಯಾಧೀಶರು ನಮ್ಮ ಪರ ವಾದವನ್ನು ಆಲಿಸಿದ ನಂತರ 16 ಮತ್ತು 20 ನೇ ತಾರೀಕು ಎರಡು ದಿನಗಳು ಮಾತ್ರ ಬಂದ್ ಮಾಡಬೇಕೆಂಬ ಆದೇಶವನ್ನುಹೊರಡಿಸಿರುತ್ತಾರೆ. ಈ ಸಮಂಜಸವಾದ ನ್ಯಾಯ ಸಿಕ್ಕಿರುವುದು ಸಂತಸದ ವಿ?ಯ. ವಕೀಲರಾದ ಅರುಣ್ ಶ್ಯಾಮರವರ ಜೊತೆ ಸಹಕರಿಸಿದ ಎಲ್ಲರಿಗೂ ಧನ್ಯವಾದಗಳು ಎಂದು ಹೋಟೆಲ್ ಅಸೋಸಿಯೇ?ನ್ ಅಧ್ಯಕ್ಷ ಪಿಸಿ ರಾವ್ ಹೇಳಿದ್ದಾರೆ. ಉಪ ಚುನಾವಣೆ ಹಿನ್ನೆಲೆ ಫೆಬ್ರವರಿ 14ರ ಸಂಜೆಯಿಂದ 16ರ ಮಧ್ಯರಾತ್ರಿವರೆಗೆ ಮದ್ಯ ಮಾರಾಟ ನಿ?ೇಧಿಸಿ ಜಿಲ್ಲಾಡಳಿತ ಆದೇಶ ಪ್ರಕಟಿಸಿತ್ತು. ಬೆಂಗಳೂರು ನಗರ ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳ ಶಿಕ್ಷಕರು (ಯಲಹಂಕ, ಬ್ಯಾಟರಾಯನಪುರ, ಯಶವಂತಪುರ, ದಾಸರಹಳ್ಳಿ, ಮಹದೇವಪುರ, ಬೆಂಗಳೂರು ದಕ್ಷಿಣ ಮತ್ತು ಆನೇಕಲ್) ಶಿಕ್ಷಕರು ಮತದಾನ ಮಾಡಲಿದ್ದಾರೆ. ಮಾದರಿ ನೀತಿ ಸಂಹಿತೆ ಫೆ.23ರವರೆಗೆ ಜಾರಿಯಾಲ್ಲಿರಲಿದೆ.

# ದೇವಾಲಯಗಳ ಅಭಿವೃದ್ಧಿಗಾಗಿ ಪ್ರಾಧಿಕಾರ ರಚನೆ: ರಾಮಲಿಂಗಾರೆಡ್ಡಿ



**ಬೆಂಗಳೂರು:** ಹೆಚ್ಚು ಭಕ್ತಾದಿಗಳು ಬರುವ ರಾಜ್ಯದ ದೇವಾಲಯಗಳ ಅಭಿವೃದ್ಧಿಗಾಗಿ ದೇವಾಲಯಗಳಿಗೆ ಪ್ರಾಧಿಕಾರ ರಚನೆ ಮಾಡುವುದಾಗಿ ಮುಜರಾಯಿ ಸಚಿವರ ರಾಮಲಿಂಗಾ ರೆಡ್ಡಿ ಘೋ?ಣೆ ಮಾಡಿದರು. ವಿಧಾನ ಪರಿಷತ್ ಕಲಾಪದಲ್ಲಿ ಕಾಂಗ್ರೆಸ್‌ನ ರವಿ ಬದಲಿಗೆ ಯುಬಿ ವೆಂಕಟೇಶ್ ಘಾಟಿ ಸುಬ್ರಹ್ಮಣ್ಯ ದೇವಾಲಯದ ಅಭಿವೃದ್ಧಿ ಬಗ್ಗೆ ಪ್ರಶ್ನೆ ಕೇಳಿದರು. ಇದಕ್ಕೆ ಉತ್ತರ ನೀಡಿದ ಸಚಿವರು, ಘಾಟಿ ಸುಬ್ರಹ್ಮಣ್ಯ ದೇವಾಲಯ ಅಭಿವೃದ್ಧಿಗೆ ಕ್ರಮವಹಿಸಲಾಗುತ್ತದೆ. ಘಾಟಿ ಸುಬ್ರಹ್ಮಣ್ಯ ದೇವಾಲಯಕ್ಕೆ ಪ್ರಾಧಿಕಾರ ನಿರ್ಮಾಣ ಮಾಡುತ್ತೇವೆ. ಪಾರ್ಕಿಂಗ್ ಸಮಸ್ಯೆ ಇದೆ ಎಂದು ಹೇಳಿದ್ದಾರೆ. ಪಾರ್ಕಿಂಗ್ ಅಗತ್ಯ ಸ್ಥಳ ಗುರುತಿಸಲಾಗಿದೆ. ದೇವಾಲಯಕ್ಕೆ 10 ಕೋಟಿ ರೂ. ವಾರ್ಷಿಕ ಆದಾಯ ಬರುತ್ತದೆ. ಹಣದ ಕೊರತೆ ಇಲ್ಲ. ಅಭಿವೃದ್ಧಿ ಕಾಮಗಾರಿಗಳನ್ನು ಮಾಡುತ್ತೇವೆ ಜೊತೆಗೆ ಘಾಟಿ ಸುಬ್ರಹ್ಮಣ್ಯ ದೇವಾಲಯಕ್ಕೆ ಪ್ರಾಧಿಕಾರ ಮಾಡುತ್ತೇವೆ ಎಂದರು.

ಇದೇ ವೇಳೆ ಮಾತನಾಡಿದ ಸಚಿವರು, ಹೆಚ್ಚು ಭಕ್ತರು ಬರುವ ಎಲ್ಲಾ ದೇವಾಲಯಗಳಿಗೆ ವಿಶೇ? ಪ್ರಾಧಿಕಾರ ರಚನೆ ಮಾಡಲು ಸರ್ಕಾರ ನಿರ್ಧಾರ ಮಾಡಿದೆ. ಈ ವಿಚಾರ ಮುಂದಿನ ಕ್ಯಾಬಿನೆಟ್ ಮುಂದೆ ಬರಲಿದೆ. ಕ್ಯಾಬಿನೆಟ್ ನಲ್ಲಿ ದೇವಾಲಯಗಳ ಅಭಿವೃದ್ಧಿಗೆ ಪ್ರಾಧಿಕಾರ ರಚನೆಗೆ ಒಪ್ಪಿಗೆ ಕೊಡುತ್ತೇವೆ. ಪ್ರಾಧಿಕಾರದಲ್ಲಿ ಜಿಲ್ಲಾ ಉಸ್ತುವಾರಿ ಮಂತ್ರಿಗಳು, ಶಾಸಕರು ಇರಲಿದ್ದು, ದೇವಾಲಯಗಳ ಅಭಿವೃದ್ಧಿಗೆ ಪ್ರಾಧಿಕಾರಗಳು ಅನುಕೂಲ ಆಗಲಿವೆ ಎಂದರು.

# ರಾಜ್ಯದಲ್ಲಿ ಮಜಾ ಮಾಡಿ ಮೋದಿ ಬಳಿ ಹೋಗಿ ಹಣ ಕೇಳುತ್ತಿದ್ದಾರೆ

**ಶಿವಮೊಗ್ಗ:** ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯದಲ್ಲಿ ಮಜಾ ಮಾಡಿ ಪ್ರಧಾನಿ ನರೇಂದ್ರ ಮೋದಿ ಬಳಿ ಹೋಗಿ ಹಣ ಕೇಳುತ್ತಿದ್ದಾರೆ ಎಂದು ವಿಜಯಪುರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಾಗ್ದಾಳಿ ನಡೆಸಿದರು. ಶಿವಮೊಗ್ಗದಲ್ಲಿ ಬುಧವಾರ ಮಾತನಾಡಿದ ಅವರು, ತೆರಿಗೆ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ ನೀಡಬೇಕು. ಲೋಕಸಭೆ ಚುನಾವಣೆ ಬಳಿಕ ಕಾಂಗ್ರೆಸ್ ಪಕ್ಷಕ್ಕೆ ವಾರಂಟಿಯೇ ಇರಲ್ಲ. ಜೆಡಿಎಸ್-ಬಿಜೆಪಿ ಸೀಟ್ ಹಂಚಿಕೆ ಕುರಿತು ಸದ್ಯ ಚರ್ಚೆ ಬೇಡ. ಈ ಬಗ್ಗೆ ಮೈಸೂರಿಗೆ ಬಂದಾಗ ಕೇಂದ್ರ ಸಚಿವ ಅಮಿತ್ ಶಾ ಸೂಚನೆ ನೀಡಿದ್ದಾರೆ. ಜೆಡಿಎಸ್ ಜೊತೆಗಿನ ಬಿಜೆಪಿ ಮೈತ್ರಿ ಚೆನ್ನಾಗಿ ಇದೆ. ರಾಜ್ಯದ 28 ಲೋಕಸಭಾ ಕ್ಷೇತ್ರಗಳಲ್ಲಿ ಗೆಲ್ಲುವುದು ಮಾತ್ರ ನಮ್ಮ ಗುರಿ ಎಂದರು. ಹೋರಾಟಕ್ಕೆ ದುಡ್ಡು ಕೊಟ್ಟು ಕರೆಯುವ ಗಿರಾಕಿಗಳು ನಾವಲ್ಲ. ಇವತ್ತು ಇಲ್ಲಿ ಸಣ್ಣ ಪ್ರಮಾಣದಲ್ಲಿ ಪ್ರತಿಭಟನೆ ಆಗಿದೆ. ಸಮಾಜದ ಭವಿಷ್ಯಕ್ಕಾಗಿ ಹೋರಾಟ ಹೊರತು ಯಾರನ್ನೋ ಮುಖ್ಯಮಂತ್ರಿ ಮಾಡಲು ಅಲ್ಲ. ನಾವು ಒಂದು ಸಮಾಜದ ಪರ ಹೋರಾಟ ಮಾಡುತ್ತಿಲ್ಲ. ಎಲ್ಲಾ ಸಮಾಜದ ಧ್ವನಿ ಆಗಿ ಹೋರಾಟ ಮಾಡುತ್ತಿದ್ದೇವೆ. ವೀರಶೈವ, ಲಿಂಗಾಯತರು ಹಿಂದೂಗಳಲ್ಲ ಅಂತ ದಾವಣಗೆರೆಯಲ್ಲಿ ಕೆಲವರು ಹೇಳಿದರು. ಈ ಹೋರಾಟವನ್ನು ಹಾಳು ಮಾಡಬೇಕು ಅಂತ ಕೆಲವರು ಸಂಚು ಮಾಡಿದರು. ಹಣ ಕೊಡುತ್ತೇವೆ, ಛಲೋಗಾಡಿ ಕೊಡಿಸುತ್ತೇವೆ ಅಂತ ಕೆಲವು ಮಂತ್ರಿಗಳು ಸ್ವಾಮೀಜಿ ಹತ್ರ ಹೋಗ್ತಾರೆ. ನಮ್ಮ ಸಮಾಜದ ಮಂತ್ರಿಯೇ ಒಬ್ಬ ಹತ್ತು ಕೋಟಿ ಚೆಕ್ ಹಿಡಿದುಕೊಂಡು ಬಂದಿದ್ದರು. ಆಗ, ಹತ್ತು ಕೋಟಿಗೆ ನನ್ನ ಸಮಾಜವನ್ನು ಮಾರಲ್ಲ ಅಂತ ಸ್ವಾಮೀಜಿ ಹೇಳಿದ್ದರು ಎಂದು ಯತ್ನಾಳ್ ಹೇಳಿದರು.

ನಾನು ಮಂತ್ರಿ ಆಗಲು, ರಾಜ್ಯಾಧ್ಯಕ್ಷ ಆಗಲು, ವಿರೋಧ ಪಕ್ಷದ ನಾಯಕ ಆಗಲು ಸ್ವಾಮೀಜಿಯಿಂದ ಲಾಬಿ ಮಾಡಲ್ಲ. ನನ್ನ ಸೋಲಿಸಲು ಕೆಲವರು ವಿಜಯಪುರಕ್ಕೆ ಬಹಳ ಹಣ ಕಳಿಸಿದ್ದರು. ಜನ ಅದಕ್ಕೆ ತಲೆ ಕಡೆಸಿಕೊಳ್ಳದೆ ಹಣ ಇಸ್ಕೊಂಡ್ರು, ನನಗೆ ಮತ ಹಾಕಿದರು. ನಾಯಕತ್ವಕ್ಕಾಗಿ ನಮ್ಮ ಹೋರಾಟ ಅಲ್ಲ. ರಾಜಕೀಯ ಮೀಸಲಾತಿ ನಾವು ಕೇಳುತ್ತಿಲ್ಲ. ಬಡ ಮಕ್ಕಳಿಗೆ ನೇಮಕಾತಿ ಮತ್ತು ಶೈಕ್ಷಣಿಕ ಮೀಸಲಾತಿಗಾಗಿ ನಮ್ಮ ಹೋರಾಟ ನಡೆಯುತ್ತಿದೆ. ಸಮಾಜವನ್ನು ಒಗ್ಗೂಡಿಸುವ ಕೆಲಸ ಮಾಡುತ್ತಿದ್ದೇವೆ ಎಂದರು.

## ಆಯ್ಕೆ ಪ್ರಕ್ರಿಯೆ ಹೇಗೆ

ಸರ್ಕಾರದ ಸಲಹೆಯ ಮೇರೆಗೆ ರಾಷ್ಟ್ರಪತಿಗಳು 12 ಸಂಸದರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡುತ್ತಾರೆ. ಇವರು ದೇಶದ ಗಣ್ಯ ವ್ಯಕ್ತಿಗಳಾಗಿರುತ್ತಾರೆ. ಪ್ರಸ್ತುತ ರಾಜ್ಯಸಭೆಯಲ್ಲಿ ಒಟ್ಟು ಸದಸ್ಯರ ಸಂಖ್ಯೆ 245 ಆಗಿದೆ.

ರಾಜ್ಯಸಭಾ ಸದಸ್ಯರ ಕನಿಷ್ಠ ವಯೋಮಿತಿಯನ್ನು 30 ವರ್ಷಕ್ಕೆ ನಿಗದಿಪಡಿಸಲಾಗಿದೆ. ಆದರೆ ಲೋಕಸಭಾ ಸದಸ್ಯರಿಗೆ ಈ ಮಿತಿ 25 ವರ್ಷಗಳು. ಚುನಾವಣಾ ಆಯೋಗವು ಅಧಿಕಾರಾವಧಿ ಕೊನೆಗೊಳ್ಳುವ ರಾಜ್ಯಸಭಾ ಸ್ಥಾನಗಳಿಗೆ ಹೊಸ ಚುನಾವಣೆಗಳನ್ನು ಘೋಷಿಸುತ್ತದೆ. ರಾಜ್ಯ ವಿಧಾನಸಭೆಗಳ ಚುನಾಯಿತ ಶಾಸಕರು ಮಾತ್ರ ಈ ಚುನಾವಣೆಯಲ್ಲಿ ಭಾಗವಹಿಸಬಹುದು. ದೇಶದ ಐದು ರಾಜ್ಯಗಳಲ್ಲಿ ರಾಜ್ಯಸಭೆಯ ರೀತಿಯಲ್ಲಿ ಕಾರ್ಯನಿರ್ವಹಿಸುವ ವಿಧಾನ ಪರಿಷತ್ತುಗಳೂ ಇವೆ. ಅವುಗಳ ಸದಸ್ಯರು ರಾಜ್ಯಸಭಾ ಚುನಾವಣೆಯಲ್ಲಿ ಭಾಗವಹಿಸುವಂತಿಲ್ಲ.

**ಚುನಾವಣೆಯಲ್ಲಿ ರಹಸ್ಯ ಮತದಾನವಿಲ್ಲ!:** ರಾಜ್ಯಸಭಾ ಚುನಾವಣೆಗೆ ಯಾವುದೇ ರಹಸ್ಯ ಮತದಾನವಿಲ್ಲ. ಇದರಲ್ಲಿ ಇವಿಎಂ ಕೂಡ ಬಳಸುವುದಿಲ್ಲ. ಈ ಚುನಾವಣೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬ ಅಭ್ಯರ್ಥಿಯ ಹೆಸರಿನ ಮುಂದೆ ಒಂದರಿಂದ ನಾಲ್ಕರವರೆಗಿನ ಸಂಖ್ಯೆಯನ್ನು ಬರೆಯಲಾಗಿದೆ. ಮತದಾರರು ಮತ್ತು ಶಾಸಕರು ತಮ್ಮ ಆದ್ಯತೆಗಳ ಆಧಾರದ ಮೇಲೆ ಆ ಸಂಖ್ಯೆಗಳನ್ನು ಗುರುತಿಸುತ್ತಾರೆ. ನಂತರ ಅವರು ತಮ್ಮ ಪಕ್ಷದ ಏಜೆಂಟರಿಗೆ ತಮ್ಮ ಮತಪತ್ರವನ್ನು ತೋರಿಸಿ ಪೆಟ್ಟಿಗೆಯಲ್ಲಿ ಹಾಕುತ್ತಾರೆ. ಈ ಮತಪತ್ರವನ್ನು ಪಕ್ಷದ ಏಜೆಂಟ್‌ಗೆ ತೋರಿಸದಿದ್ದರೆ ಅಮಾನ್ಯವಾಗುತ್ತದೆ. ಅದೇ ರೀತಿ ಮತಪತ್ರವನ್ನು ಬೇರೆ ಪಕ್ಷದ ಏಜೆಂಟರಿಗೆ ತೋರಿಸಿದರೆ ಅದು ಅಮಾನ್ಯವಾಗುತ್ತದೆ.

ಒಬ್ಬ ಅಭ್ಯರ್ಥಿ ಗೆಲ್ಲಬೇಕಿದ್ದರೆ, ಆತನಿಗೆ ಗರಿಷ್ಠ ಸಂಖ್ಯೆಯ ಮತಗಳು ಬೇಕಾಗಿರುವುದು ಮಾತ್ರವಲ್ಲ, ನಿಗದಿತ ಸೂತ್ರದ ಪ್ರಕಾರ ಕನಿಷ್ಠ ಅಗತ್ಯವಿರುವ ಮತಗಳನ್ನು ಸಹ ಪಡೆಯಬೇಕು. ಆದರೆ, ಲೋಕಸಭೆ, ವಿಧಾನಸಭೆ ಚುನಾವಣೆಯಲ್ಲಿ ಹೀಗಲ್ಲ. ಅಲ್ಲಿ ಹೆಚ್ಚು ಮತ ಪಡೆದ ಸದಸ್ಯರು ಗೆಲ್ಲುತ್ತಾರೆ.

ಉದಾಹರಣೆಗೆ, ರಾಜ್ಯಸಭೆಯ ಒಬ್ಬ ಅಭ್ಯರ್ಥಿ ಗರಿಷ್ಠ ಸಂಖ್ಯೆಯ ಮೊದಲ ಪ್ರಾಶಸ್ತ್ಯದ ಮತಗಳನ್ನು ಪಡೆಯುತ್ತಾನೆ. ಆದರೆ ಆ ಸಂಖ್ಯೆಯು ಮೇಲೆ ತಿಳಿಸಿದ ಸೂತ್ರದ ಅಡಿಯಲ್ಲಿ ಗೆಲುವಿಗೆ ಅಗತ್ಯವಿರುವ ಸಂಖ್ಯೆಗಿಂತ ಕಡಿಮೆಯಿರುತ್ತದೆ ಎಂದು ಭಾವಿಸೋಣ. ನಂತರ ಎರಡನೇ ಪ್ರಾಶಸ್ತ್ಯದ ಮತಗಳನ್ನು ಎಣಿಸಲಾಗುತ್ತದೆ. ಅಂದರೆ, ಹೆಚ್ಚಿನ ಸಂಖ್ಯೆಯ ಮತಗಳನ್ನು ಪಡೆದ ಅಭ್ಯರ್ಥಿಯು ಹೆಚ್ಚಿನ ಒಟ್ಟು ಮತಗಳನ್ನು ಹೊಂದಿದ್ದರೂ ನಿಗದಿತ ಸೂತ್ರದ ಪ್ರಕಾರ ಬೇಕಿರುವಷ್ಟು ಮತ ಗಳಿಸದಿದ್ದರೆ ಪೂರೈಸದಿದ್ದರೆ, ನಂತರ ಎರಡನೇ ಪ್ರಾಶಸ್ತ್ಯದ ಮತಗಳನ್ನು ಎಣಿಸಲಾಗುತ್ತದೆ.

ಪಡೆದ ಎರಡನೇ ಪ್ರಾಶಸ್ತ್ಯದ ಮತಗಳು ಗೆಲುವಿಗೆ ಬೇಕಾದ ಮತಗಳ ಸಂಖ್ಯೆಗೆ ಸಮನಾಗಿದ್ದರೆ ಅಥವಾ ಅದಕ್ಕಿಂತ ಹೆಚ್ಚಿದ್ದರೆ, ಅವರನ್ನು ವಿಜೇತ ಎಂದು ಘೋಷಿಸಲಾಗುತ್ತದೆ. ಇದು ಸಂಭವಿಸದಿದ್ದರೆ, ಮೂರನೇ ಪ್ರಾಶಸ್ತ್ಯದ ಮತಗಳನ್ನು ಎಣಿಸಲಾಗುತ್ತದೆ. ಅದರಲ್ಲಿಯೂ ಯಶಸ್ಸು ಸಿಗದಿದ್ದರೆ ನಾಲ್ಕನೇ ಪ್ರಾಶಸ್ತ್ಯದ ಮತಗಳನ್ನು ಎಣಿಸಲಾಗುತ್ತದೆ.

## 'ನನ್ನ ತೆರಿಗೆ ನನ್ನ ಹಕ್ಕು' ಅಭಿಯಾನ

ಕನ್ನಡದ ಮೇಲೆ ಇತರೆ ಭಾಷೆಯ ಹೇರಿಕೆ ಸಹಿಸಲು ಸಾಧ್ಯವಿಲ್ಲ ಸಿಎಂ ಸಿದ್ದರಾಮಯ್ಯ

ನಾವು ಪ್ರಜಾಪ್ರಭುತ್ವ, ಒಕ್ಕೂಟ ವ್ಯವಸ್ಥೆಯನ್ನು ಒಪ್ಪಿಕೊಂಡಿದ್ದೇವೆ. ಹೀಗಿದ್ದಾಗ ಚೀನಾ ರೀತಿಯ ಕೇಂದ್ರದ ಏಕಸ್ವಾಮ್ಯ ಮತ್ತು ಅಮೆರಿಕದ ಅಧ್ಯಕ್ಷೀಯ ಮಾದರಿಯ ಆಡಳಿತವನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ. ನಾವು ಪ್ರಜಾಪ್ರಭುತ್ವ ಮತ್ತು ಒಕ್ಕೂಟ ವ್ಯವಸ್ಥೆ ಪರವಾಗಿ ಇರುವವರು ಎಂದು ಸ್ಪಷ್ಟಪಡಿಸಿದರು. ಕನ್ನಡ ಬಾವುಟ ಮತ್ತು ದ್ವಿಭಾಷಾ ನೀತಿಯ ವಿಚಾರದಲ್ಲೂ ಜನ ಎಚ್ಚೆತ್ತುಕೊಂಡು ಹೋರಾಟ ಮಾಡುವ ಅಗತ್ಯವಿದೆ. ಭಾಷೆಯಾಗಿ ಯವ ಭಾಷೆಯನ್ನಾದರೂ ಕಲಿಯಬಹುದು ಆದರೆ ಕನ್ನಡದ ಮೇಲೆ ಹಿಂದಿ ಅಥವಾ ಇತರೆ ಭಾಷೆಯ ಹೇರಿಕೆ, ಸಾಂಸ್ಕೃತಿಕ ಹೇರಿಕೆಯನ್ನು ಸಹಿಸಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ನಾವು ಪ್ರಜಾಪ್ರಭುತ್ವ ಮತ್ತು ಒಕ್ಕೂಟ ವ್ಯವಸ್ಥೆಯನ್ನು ಒಪ್ಪಿಕೊಂಡ ಮೇಲೆ ಚೀನಾ ಮಾದರಿ ಏಕಸ್ವಾಮ್ಯವನ್ನು ಸಹಿಸಲು ಅಮೆರಿಕದ ಅಧ್ಯಕ್ಷೀಯ ಮಾದರಿ ಆಡಳಿತವನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ. ಅತಿ ಹೆಚ್ಚು ತೆರಿಗೆ ಕಟ್ಟುವ ನಮ್ಮ ರಾಜ್ಯಕ್ಕೆ ಅನ್ಯಾಯ ಆಗದಂತೆ ತಡೆಯಲು ಸಂವಿಧಾನ ತಿದ್ದುಪಡಿ ಮಾಡಿ ಸೆಸ್ ಮತ್ತು ಸರ್ ಚಾರ್ಜ್ ನಲ್ಲೂ ನಮಗೆ ಪಾಲು ಕೊಡಬೇಕೆಂದು ಒತ್ತಾಯಿಸಿದ್ದಾರೆ. ರಾಜ್ಯವನ್ನು ಪ್ರತಿನಿಧಿಸುವ ಕೇಂದ್ರ ಮಂತ್ರಿಗಳು-ನಮ್ಮ ಸಂಸದರು ನಮಗಾಗುತ್ತಿರುವ ಅನ್ಯಾಯದ ವಿರುದ್ಧ ಬಾಯಿ ಬಿಡದೆ ಅನ್ಯಾಯವನ್ನು ಸಮರ್ಥಿಸುತ್ತಿದ್ದರೆ ರಾಜ್ಯದ ಭವಿಷ್ಯದ ಗತಿ ಏನೆಂದು ಪ್ರಶ್ನಿಸಿದ್ದಾರೆ.

## ಆರೋಗ್ಯ ಇಲಾಖೆ

'ಆಶಾಕಿರಣ ಯೋಜನೆ' ಅಡಿಯಲ್ಲಿ ಕನ್ನಡಕ ವಿತರಣಾ ಕಾರ್ಯಕ್ರಮವು ಫೆಬ್ರವರಿ 18ರ ಸುಮಾರಿಗೆ ಹಾವೇರಿಯಲ್ಲಿ ನಡೆಯಲಿದೆ ಎಂದು ರಂದೀಪ್ ತಿಳಿಸಿದರು. 'ರಾಜ್ಯದಾದ್ಯಂತ ಸ್ಕ್ರೀನಿಂಗ್ ಪೂರ್ಣಗೊಂಡಿದೆ. ಈ ಯೋಜನೆಯನ್ನು ಫೆಬ್ರವರಿ 18 ರಂದು ಪ್ರಾರಂಭವಾಗಲಿದೆ' ಎಂದು ಅವರು ಹೇಳಿದರು.

ಸಮುದಾಯ ಆರೋಗ್ಯ ಕೇಂದ್ರಗಲ್ಲಿ ಅಪ್‌ಗ್ರೇಡ್ ಆಗಬೇಕಿದ್ದ 23 ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ15 ಅಗತ್ಯ ಮೂಲಸೌಕರ್ಯ ಮತ್ತು ಉಪಕರಣಗಳನ್ನು ಅಳವಡಿಸಲಾಗಿದ್ದು, ಬೇಡಿಕೆಯನ್ನು ಪೂರೈಸಲು ಮಾನವ ಸಂಪನ್ಮೂಲವನ್ನು ವಿಸ್ತರಿಸಲಾಗುತ್ತಿದೆ.

ಇಲಾಖೆಯು ರಾಜ್ಯಾದ್ಯಂತ ಮಂಜೂರಾದ 171 (168 ಚಾಲನೆಯಲ್ಲಿರುವ) ಡಯಾಲಿಸಿಸ್ ಕೇಂದ್ರಗಳ ಸಂಖ್ಯೆಯನ್ನು 219 ಕ್ಕೆ ಹೆಚ್ಚಿಸಿದ್ದರೆ, ಕಲಬುರಗಿ ವಿಭಾಗದಲ್ಲಿ ಡಯಾಲಿಸಿಸ್ ಯಂತ್ರಗಳನ್ನು ಖರೀದಿಸಲು ಟೆಂಡರ್ ಪ್ರಕ್ರಿಯೆ ಇನ್ನು ನಡೆಯುತ್ತಿದೆ.

ಕ್ಷಯರೋಗವನ್ನು (ಟಿಬಿ) ಪರೀಕ್ಷಿಸಲು 15 ಹ್ಯಾಂಡ್ ಹೆಲ್ಡ್ ಕ್ಷ-ಕಿರಣ ಯಂತ್ರಗಳನ್ನು ಖರೀದಿಸಲು ಟೆಂಡರ್ ಕರೆಯಲಾಗುತ್ತಿದೆ. 2023-24ರ ಬಜೆಟ್‌ನಲ್ಲಿ 8 ಜಿಲ್ಲೆಗಳಲ್ಲಿ ಪ್ರತಿ ಜಿಲ್ಲೆಗೆ ತಲಾ 20 ಲಕ್ಷ ರೂ. ವೆಚ್ಚದ ಎರಡು ಯಂತ್ರಗಳನ್ನು ನಿಯೋಜಿಸಲಾಗುವುದು ಎಂದು ಆಯುಕ್ತ ಡಿ ರಂದೀಪ್ ಹೇಳಿದ್ದಾರೆ.

**ಬಜೆಟ್ ನಿರೀಕ್ಷೆ:** ಬಜೆಟ್‌ನಲ್ಲಿ ಹಿರಿಯ ಆರೋಗ್ಯ ಇಲಾಖೆಯ ಅಧಿಕಾರಿಗಳು ಮೂಲಸೌಕರ್ಯಗಳ ನಿರ್ವಹಣೆ ಮತ್ತು ದುರಸ್ತಿ, ಅಸ್ತಿತ್ವದಲ್ಲಿರುವ ಸೌಲಭ್ಯಗಳ ಬಲವರ್ಧನೆಗೆ ಸಾಕಷ್ಟು ಅನುದಾನವನ್ನು ನಿರೀಕ್ಷಿಸಲಾಗುತ್ತಿದೆ. ಉತ್ತರ ಕರ್ನಾಟಕದಲ್ಲಿ ಆರೋಗ್ಯ ಸೌಲಭ್ಯಗಳ ಅಭಿವೃದ್ಧಿಗೆ ಉದ್ದೇಶಿತ ಯೋಜನೆಗಳಿಗೆ ಆದ್ಯತೆ ಮತ್ತು ಅನುಮೋದನೆಗಳನ್ನು ನಿರೀಕ್ಷಿಸುತ್ತಿದ್ದಾರೆ. ಜೊತೆಗೆ ರಾಜ್ಯದಾದ್ಯಂತ ಆಸ್ಪತ್ರೆಗಳಲ್ಲಿ ಸಾಂಕ್ರಾಮಿಕವಲ್ಲದ ರೋಗಗಳ ಚಿಕಿತ್ಸೆಗೆ ವಿಶೇಷ ಗಮನಹರಿಸಿದ್ದಾರೆ.

## ರೈತ ಮುಖಂಡರು

ಪ್ರಯತ್ನಿಸುವುದಿಲ್ಲ ಎಂದು ನಿರ್ಧರಿಸಿದ್ದೇವೆ. ನಾಳೆ ಸಂಜೆ 5 ಗಂಟೆಗೆ ಸಭೆ ಕರೆಯಲಾಗಿದೆ. ನಾವು ನಮ್ಮ ಶಾಂತಿಯುತ ಪ್ರತಿಭಟನೆಯನ್ನು ಮುಂದುವರಿಸುತ್ತೇವೆ. ಅಲ್ಲಿಯವರೆಗೆ ನಮ್ಮ ಕಡೆಯಿಂದ ಯಾವುದೇ ಕ್ರಮ ತೆಗೆದುಕೊಳ್ಳುವುದಿಲ್ಲ ಎಂದಿದ್ದಾರೆ ಪಂಧೇರ್.

ಬುಧವಾರ ಶಾಂತಿಯುತ ಪ್ರತಿಭಟನೆ ನಡೆಸಿದರೂ ಡ್ರೋನ್ ಗಳನ್ನು ಬಳಸಲಾಗಿದ್ದು, ಅಶ್ರುವಾಯು ಶೆಲ್‌ಗಳು ಮತ್ತು ರಬ್ಬರ್ ಪೆಲೆಟ್‌ಗಳನ್ನು ಹಾರಿಸಲಾಗಿದೆ ಎಂದು ರೈತ ಮುಖಂಡರು ಆರೋಪಿಸಿದ್ದಾರೆ. ''ನಮ್ಮ ಮೇಲೆ ದಾಳಿ ಮಾಡಿದ್ದು ಪೊಲೀಸರಲ್ಲ, ಅರೆಸೇನಾ ಪಡೆಗಳು. ಇಷ್ಟೆಲ್ಲಾ ಆದರೂ ನಾವು ಕೇಂದ್ರ ಸರ್ಕಾರದೊಂದಿಗೆ ಮಾತನಾಡಲು ಸಿದ್ಧರಿದ್ದೇವೆ ಎಂದಿದ್ದಾರೆ'' ಅವರು.

ಇದಕ್ಕೂ ಮುನ್ನ ಬುಧವಾರ ಕೃಷಿ ಸಚಿವ ಅರ್ಜುನ್ ಮುಂಡಾ ಅವರು ಸಂವಾದಕ್ಕೆ ಕರೆ ನೀಡಿದ್ದರು. ಸಾಮಾನ್ಯ ಜನರಿಗೆ ಅನಾನುಕೂಲವಾಗುವ ಯಾವುದನ್ನೂ ಮಾಡಬೇಡಿ ಎಂದು ಮುಂಡಾ ರೈತರಿಗೆ ಒತ್ತಾಯಿಸಿದರು.

''ನಾವು ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಈ ಬಗ್ಗೆ ಚರ್ಚಿಸಬೇಕು. ರೈತರು ಸಹಜ ಜೀವನಕ್ಕೆ ಅಡ್ಡಿಯಾಗದಂತೆ ನೋಡಿಕೊಳ್ಳಬೇಕು. ಸಾಮಾನ್ಯ ಜನರಿಗೆ ಅನಾನುಕೂಲತೆಯನ್ನು ಉಂಟುಮಾಡುವ ಯಾವುದನ್ನಾದರೂ ಮಾಡುವುದರಿಂದ ಯಾವುದೇ ಪರಿಹಾರವನ್ನು ಕಂಡುಹಿಡಿಯಲಾಗುವುದಿಲ್ಲ ಎಂದು ನಾನು ಭಾವಿಸುತ್ತೇನೆ. ಇಂತಹ ಕ್ರಮಗಳು ಹುಡುಕುವಲ್ಲಿ ಅಡೆತಡೆಗಳನ್ನು ಮಾತ್ರ ಸೃಷ್ಟಿಸುತ್ತವೆ. ಪರಿಹಾರ, ಸಂವಾದಕ್ಕೆ ಅನುಕೂಲಕರ ವಾತಾವರಣವನ್ನು ಕಾಯ್ದುಕೊಳ್ಳುವಂತೆ ನಾನು ಅವರನ್ನು ಒತ್ತಾಯಿಸುತ್ತೇನೆ ಎಂದು ಸಚಿವರು ಹೇಳಿದರು.

## ಮತಎಣಿಕೆ ದಿನದಂದು ನಿರ್ಬಂಧ

ಮತದಾನ ಹಿನ್ನೆಲೆ ಫೆ.16ರ ಬೆಳಗ್ಗೆ 6ರಿಂದ ಮಧ್ಯರಾತ್ರಿವರೆಗೆ ಮದ್ಯ ಮಾರಾಟ ನಿರ್ಬಂಧ ಹೇರಲಾಗಿದೆ. ಹಾಗೂ ಎಣಿಕೆ ದಿನವಾದ ಫೆ.20ರ ಬೆಳಗ್ಗೆ 6ರಿಂದ ಮಧ್ಯರಾತ್ರಿವರೆಗೆ ಮಾತ್ರ, ಮದ್ಯ ಮಾರಾಟ ನಿರ್ಬಂಧ ಹೇರಲಾಗಿದೆ. ಆಹಾರ ಪೂರೈಸಲು

ಮೊದಲ ಪುಟದಿಂದ...

ರೆಸ್ಟೋರೆಂಟ್‌ಗಳಿಗೆ ಯಾವುದೇ ನಿರ್ಬಂಧವಿಲ್ಲ. ಮತದಾರರು ಶಿಕ್ಷಕರಾಗಿರುವುದರಿಂದ ಮದ್ಯಪಾನದ ನಿರ್ಬಂಧ ಪರಿಶೀಲನೆ ಮಾಡಲಾಗಿದೆ. ಮದ್ಯಪಾನ ನಿರ್ಬಂಧಿಸದಿದ್ದರೆ ಶಿಕ್ಷಕರು ಮದ್ಯ ಸೇವಿಸುತ್ತಾರೆಂದು ಭಾವಿಸಬೇಕಿಲ್ಲ, ಮುಕ್ತ, ನ್ಯಾಯಸಮ್ಮತ ಮತದಾನಕ್ಕೆ ಇಷ್ಟು ದಿನದ ನಿರ್ಬಂಧ ಅಗತ್ಯವಿಲ್ಲ ಎಂದು ಹೈಕೋರ್ಟ್ ಏಕಸದಸ್ಯ ಪೀಠ ಮಧ್ಯಂತರ ಆದೇಶ ಹೊರಡಿಸಿದೆ.

ಬೆಂಗಳೂರು ನಗರ ಜಿಲ್ಲೆ ಜಿಲ್ಲಾಧಿಕಾರಿ ಇದೇ 1ರಂದು ಹೊರಡಿಸಿರುವ ಆದೇಶ ಪ್ರಶ್ನಿಸಿ ಬೃಹತ್ ಬೆಂಗಳೂರು ಹೋಟೆಲ್‌ಗಳ ಸಂಘಟನೆಯ ಕಾರ್ಯದರ್ಶಿ ವೀರೇಂದ್ರ ಎನ್.ಕಾಮತ್ ಸೇರಿದಂತೆ ಒಟ್ಟು ನಾಲ್ವರು ಅರ್ಜಿ ಸಲ್ಲಿಸಿದ್ದರು. ಅದನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್.ಆರ್.ಕೃಷ್ಣಕುಮಾರ್ ಅವರಿದ್ದ ಪೀಠ ಈ ಅಭಿಪ್ರಾಯ ತಿಳಿಸಿದೆ.

## ಸೋನಿಯಾ ಸ್ಪರ್ಧೆ

ರಾಯ್ ಬರೇಲಿ ಲೋಕಸಭಾ ಸಂಸದೀಯ ಸ್ಥಾನವನ್ನು ಪ್ರತಿನಿಧಿಸುತ್ತಿದ್ದಾರೆ. ಅಮೇಥಿಯ ಲೋಕಸಭಾ ಸದಸ್ಯರೂ ಆಗಿದ್ದಾರೆ. ಅವರು ಸಂಸತ್ತಿನ ಮೇಲ್ಮನೆಗೆ ಹೋಗುತ್ತಿರುವುದು ಇದೇ ಮೊದಲು. ಅವರು ಮಾಜಿ ಪ್ರಧಾನಿ ಇಂದಿರಾ ಗಾಂಧಿ ನಂತರ ರಾಜ್ಯಸಭೆಗೆ ಪ್ರವೇಶಿಸಿದ ಗಾಂಧಿ ಕುಟುಂಬದ ಎರಡನೇ ಸದಸ್ಯರಾಗಿದ್ದಾರೆ.

ಇಂದಿರಾ ಗಾಂಧಿ ಅವರು ಆಗಸ್ಟ್ 1964 ರಿಂದ ಫೆಬ್ರವರಿ 1967 ರವರೆಗೆ ಮೇಲ್ಮನೆಯ ಸದಸ್ಯರಾಗಿದ್ದರು. ಒಂದು ವೇಳೆ ರಾಜ್ಯಸಭೆಗೆ ಹೋದರೆ ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಸೋನಿಯಾ ಗಾಂಧಿ ಸ್ಪರ್ಧಿಸದಿರುವ ಸಾಧ್ಯತೆ ದಟ್ಟವಾಗಿದೆ. ಸೋನಿಯಾ ಗಾಂಧಿ 2019 ರಲ್ಲಿ ಇದು ಅವರ ಕೊನೆಯ ಲೋಕಸಭೆ ಚುನಾವಣೆ ಎಂದು ಘೋಷಿಸಿದ್ದರು.

## ವಿಮಾನ ಹಾರಾಟ ಸ್ಥಗಿತ

ಒಂದೇ ಒಂದು ವಿಮಾನವೂ ಕೂಡ ಹಾರಾಟ ನಡೆಸದೆ ಇರುವುದು ಜಿಲ್ಲೆಯ ಜನರ ಅಸಮಾಧಾನ ಹೆಚ್ಚುವಂತೆ ಮಾಡಿದೆ.

ಬಡವರು ಸಹ ವಿಮಾನ ಪ್ರಯಾಣ ಮಾಡಲಿ ಅನ್ನೋ ಉದ್ದೇಶದಿಂದ ಕೇಂದ್ರ ಸರ್ಕಾರ ಉಡಾನ್ ಯೋಜನೆ ಜಾರಿಗೆ ತಂದಿದೆ. ಅಡ-ತಡೆಗಳ ನಡುವೆ ಗಡಿನಾಡಿನಲ್ಲಿ ವಿಮಾನ ನಿಲ್ದಾಣ ಲೋಕಾರ್ಪಣೆಗೊಂಡು ಮೂರು ವರ್ಷದ ಕಳಿತು. ಅಷ್ಟರಲ್ಲಿಯೇ ವಿಮಾನ ಹಾರಾಟ ನಿಲ್ಲಿಸಿದೆ. ಈ ಬಗ್ಗೆ ಬೀದರ್ ಜಿಲ್ಲಾಧಿಕಾರಿಯವರು ಮಾತನಾಡಿ, ಪ್ರಯಾಣಿಕರ ಕೊರತೆಯಿಂದ ವಿಮಾನ ಹಾರಾಟ ನಿಲ್ಲಿಸಿದೆ ಶೀಘ್ರದಲ್ಲಿಯೇ ಮತ್ತೊಂದು ವಿಮಾನ ಕಂಪನಿಯ ಜೊತೆಗೆ ಮಾತುಕತೆ ನಡೆಸಿ ಪತ್ತೆ ವಿಮಾನ ಹಾರಿಸುವುದಾಗಿ ಜಿಲ್ಲಾಧಿಕಾರಿಗಳು ಹೇಳುತ್ತಿದ್ದಾರೆ.

ಬೀದರ್ ನಿಂದ ವಿಮಾನ ಹಾರಾಟ ಆರಂಭವಾಗಿ ನಾಲ್ಕು ವರ್ಷದಲ್ಲಿಯೇ ಎರಡು ಕಂಪನಿಯವರು ವಿಮಾನ ಹಾರಾಟ ನಿಲ್ಲಿಸಿವೆ. ಇನ್ಮುಂದೆ ಬೀದರ್ ನಿಂದ ಬೆಂಗಳೂರಿಗೆ ವಿಮಾನ ಹಾರಾಟ ನಡೆಸುವುದು ಅನುಮಾನವಾಗಿದ್ದು ಬೀದರ್ ವಿಮಾನ ನಿಲ್ದಾಣ ಮುಚ್ಚುವ ಎಲ್ಲಾ ಲಕ್ಷಣಗಳು ಇಲ್ಲಿ ಗೋಚರಿಸುತ್ತಿವೆ. ಪಕ್ಕದ ಕಲಬುರ್ಗಿಯಲ್ಲಿ ಬೆಂಗಳೂರು ಕಲಬುರಗಿಗೆ ಮೂರರಿಂದ ನಾಲ್ಕು ವಿಮಾನ ಹಾಗೂ ದೆಹಲಿ, ತಿರುಪತಿ ಸೇರಿದಂತೆ ಗೋವಾ ರಾಜ್ಯಗಳಿಗೂ ವಿಮಾನ ಹಾರಾಟ ನಡೆಸುತ್ತಿದೆ. ಕಲಬುರಗಿ ಸಂಸದರಿಗೆ ಇರುವ ಹುಮ್ಮಸು ಬೀದರ್ ಸಂಸದರಿಗೆ ಯಾಕೆ ಇಲ್ಲ ಎನ್ನುವ ಮಾತುಗಳು ಕೇಳಿ ಬಂದಿವೆ.

## ಪೊಲೀಸರ ಕರ್ತವ್ಯ ಪ್ರಜ್ಞೆ

ಆ ಇಬ್ಬರು ಪೊಲೀಸ್ ಕಾನ್ಸ್ ಟೇಬಲ್ ಗಳು ಸ್ಥಳಕ್ಕೆ ಹೋದಾಗಲು ಸತಃ ಅವರೇ ಹೆದರಿಸಿಕೊಳ್ಳುವ ಕೆಲಸವನ್ನು ಆರೋಪಿಗಳು ಮಾಡಿದ್ದರು. ಆದ್ರೇ ವಿಚಾರ ತಿಳಿಯುತ್ತಿದ್ದಂತೆ ಕಾಕತಿ ಠಾಣೆ ಎಎಸ್‌ಐ ಮಂಜುನಾಥ್ ಮತ್ತು ಕಾನ್ಸ್ ಟೇಬಲ್ ನಾರಾಯಣ ಚಿಪ್ಪಲಕಟ್ಟಿ ಸ್ಥಳಕ್ಕೆ ಹೋಗಿದ್ದಾರೆ. ಕೂಡಲೇ ಆರೋಪಿಗಳನ್ನ ಬೆದರಿಸುವ ಕೆಲಸ ಮಾಡಿ ಮಹಿಳೆಯನ್ನ ರಕ್ಷಣೆ ಮಾಡಿ 112 ವಾಹನದಲ್ಲೇ ಆಕೆಯನ್ನ ಅಲ್ಲಿಂದ ಕಳುಹಿಸುವ ಕೆಲಸ ಮಾಡಿದ್ದಾರೆ. ಇತ್ತ ಆರೋಪಿಗಳನ್ನ ಕೂಡ ಎಲ್ಲಿಯೂ ಹೋಗದಂತೆ ನೋಡಿಕೊಂಡ ಪೊಲೀಸರು ಬೆಳಗ್ಗೆ ಅನ್ನುವಷ್ಟರಲ್ಲಿ ಹಿರಿಯ ಅಧಿಕಾರಿಗಳ ಗಮನಕ್ಕೆ ಪ್ರಕರಣದ ಮಾಹಿತಿಯನ್ನ ತಂದಿದ್ದಾರೆ. ಇದೇ ವೇಳೆ ಸಿಪಿಐಗೂ ಪಿಎಸ್‌ಐ ಕರೆ ಮಾಡಿದ್ದರು. ಆದ್ರೇ ಅವರು ಸ್ಥಳಕ್ಕೆ ಹೋಗದೇ ಬೇಜವಾಬ್ದಾರಿ ತೋರಿದ್ದಕ್ಕೆ ಅವರನ್ನ ಈಗಾಗಲೇ ಅಮಾನತು ಕೂಡ ಮಾಡಲಾಗಿದೆ.

ಘಟನೆಯ ವಿವರ ನೋಡೊದಾದ್ರೇ ಹಲ್ಲೆಗೊಳಗಾದ ಮಹಿಳೆಯ ಮಗ ಮತ್ತು ಆರೋಪಿಗಳ ಮನೆಯ ಯುವತಿ ಡಿ. 10ರಂದು ರಾತ್ರಿ 12ಗಂಟೆ ಸುಮಾರಿಗೆ ಓಡಿ ಹೋಗ್ತಾರೆ. ಬೇರೆ ಯುವಕನ ಜತೆಗೆ ತನ್ನ ಮದುವೆ ನಿಶ್ಚಯ ಆಯ್ತು ಅನ್ನೋ ಕಾರಣಕ್ಕೆ ಮನೆ ಬಿಟ್ಟು ಬಂದ ಯುವತಿ ಯುವಕನೊಂದು ಪರಾರಿಯಾಗ್ತಾಳೆ. ಈ ವಿಚಾರ ಗೊತ್ತಾಗುತ್ತಿದ್ದಂತೆ ಯುವತಿಯ ತಂದೆ, ತಾಯಿ, ಅಜ್ಜಿ, ಸಹೋದರ, ಚಿಕ್ಕಮ್ಮ, ಚಿಕ್ಕಪ್ಪ ಸೇರಿದಂತೆ ಸುಮಾರು 14 ಜನ ಗುಂಪು ಕಟ್ಟಿಕೊಂಡು ಬಂದು ಯುವಕನ ಮನೇ ಮೇಲೆ ಕಲ್ಲು ತೂರಿ ದಾಳಿ ಮಾಡ್ತಾರೆ.

ಮನೆಯಲ್ಲಿ ಮಲಗಿದ್ದ ಮಹಿಳೆಯನ್ನ ಎಬ್ಬಿಸಿ ಹೊಡೆದುಬಡಿದು, ಸೀರೆ ಬಿಚ್ಚಿ ವಿವಸ್ತ್ರಗೊಳಿಸಿ ಮನೆಯಿಂದಲೇ ಮೆರವಣಿಗೆ ಮಾಡ್ತಾ ಎರಡನೂರು ಮೀಟರ್ ದೂರದ ವರೆಗೂ ಕರೆತಂದು ಅಲ್ಲಿ ಕಂಬಕ್ಕೆ ಕಟ್ಟಿಹಾಕಿ ಅಮಾನವೀಯವಾಗಿ ನಡೆದುಕೊಳ್ತಾರೆ. ಇನ್ನು ಬೆಳಗ್ಗೆ ಆಗುವುದನ್ನೇ ಕಾಯುತ್ತಿದ್ದ ಇವರು ಮಹಿಳೆಯ ತಲೆ ಬೋಳಿಸಿ ಅಲ್ಲೇ ಇದ್ದ ಎತ್ತಿನ ಬಂಡಿಯಲ್ಲಿ ಮೆರವಣಿಗೆ ಕೂಡ ಮಾಡಲು ಪ್ಲ್ಯಾನ್ ಮಾಡಿಕೊಂಡಿರುತ್ತಾರೆ. ಆದ್ರೆ ಸಮಯಕ್ಕೆ ಸರಿಯಾಗಿ ಹೋದ ಪೊಲೀಸರು ಮುಂದೆ ಆಗಬಹುದಾದ ದೊಡ್ಡ ಅನಾಹುತ ತಡೆದು ಮಹಿಳೆ ರಕ್ಷಣೆಯನ್ನ ಮಾಡಿರುತ್ತಾರೆ

ಇನ್ನು ಘಟನೆಯನ್ನ ಗಂಭೀರವಾಗಿ ಪರಿಗಣಿಸಿದ ಸರ್ಕಾರ ಸಿಐಡಿಗೆ ಕೇಸ್ ವರ್ಗಾವಣೆ ಮಾಡುತ್ತೆ. ತನಿಖೆ ನಡೆಸಿ ಸಿಐಡಿ ಇದೀಗ ನ್ಯಾಯಾಲಯಕ್ಕೆ ಜಾರ್ಜ್ ಶೀಟ್ ಸಲ್ಲಿಕೆ ಮಾಡಿದೆ. ಪ್ರಕರಣದ ಇದು ಒಂದು ಭಾಗ ಅಂದ್ರೆ ಇದಕ್ಕಿಂತ ಇನ್ನೊಂದು ಅತೀ ದೊಡ್ಡ ಕೆಲಸವನ್ನ ಈ ನಾಲ್ಕು ಜನ ಪೊಲೀಸ್ ಸಿಬ್ಬಂದಿ ಮಾಡಿದ್ದಾರೆ. ಅವರ ಈ ಕೆಲಸಕ್ಕೆ ಸರ್ಕಾರ ಮತ್ತು ಕೋರ್ಟ್ ಮೆಚ್ಚುಗೆ ವ್ಯಕ್ತಪಡಿಸಿದೆ. ಹೌದು ಮಹಿಳೆ ವಿವಸ್ತ್ರಗೊಳಿಸಿ ಮೆರವಣಿಗೆ ಮಾಡಿ ಬಳಿಕ ಕಂಬಕ್ಕೆ ಕಟ್ಟಿಹಾಕಿ ಹಲ್ಲೆ ಮಾಡಿ ರಾಕ್ಷಸಿಯ ವರ್ತನೆ ತೋರಿದ್ದು ಗ್ರಾಮದ ಬಹುತೇಕ ಜನರ ಮೊಬೈಲ್ ನಲ್ಲಿ ಸೆರೆಯಾಗಿತ್ತು. ಆ ವಿಡಿಯೋ ಏನಾದ್ರೂ ವೈರಲ್ ಆಗಿದ್ರೇ ಇಡೀ ರಾಜ್ಯದ ಮಾನವೇ ರಾಷ್ಟ್ರೀಯ ಮಟ್ಟದಲ್ಲಿ ಹರಾಜಾಗಿ ಹೋಗುತ್ತಿತ್ತು. ಆದ್ರೇ ಇದು ಆಗದಿರಲು ಕಾರಣವೇ ಬೆಳಗಾವಿ ನಗರ ಪೊಲೀಸ್ ಆಯುಕ್ತ ಸಿದ್ದರಾಮಪ್ಪ ಅವರ ಅದೊಂದು ಆಲೋಚನೆ

ಹೌದು ಘಟನೆ ನಡೆದು ಮಹಿಳೆಯನ್ನ ಆಸ್ಪತ್ರೆಗೆ ಶಿಫ್ಟ್ ಮಾಡ್ತಾರೆ, ಇದಾದ ಬಳಿಕ ಅಂದೇ ಏಳು ಜನ ಆರೋಪಿಗಳ ಬಂಧನ ಕೂಡ ಆಗುತ್ತೆ. ವಿಷಯ ತಿಳಿದು ಖುದ್ದು ಗೃಹ ಸಚಿವ ಡಾ. ಜಿ ಪರಮೇಶ್ವರ ಅವರು ಕೂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾಹಿತಿಯನ್ನ ಪಡೆದುಕೊಳ್ತಾರೆ. ಕೂಡಲೇ ಕಠಿಣ ಕ್ರಮ ತೆಗೆದುಕೊಂಡು ಕುಟುಂಬಕ್ಕೆ ರಕ್ಷಣೆ ಕೊಡುವಂತೆ ಸೂಚನೆ ನೀಡಿರುತ್ತಾರೆ. ಇದೆಲ್ಲ ಬೆಳವಣಿಗೆ ಮುನ್ನ ನಗರ ಪೊಲೀಸ್ ಆಯುಕ್ತ ಸಿದ್ದರಾಮಪ್ಪ ನಾಲ್ಕು ಜನ ಸಿಬ್ಬಂದಿಗೆ ಅದೊಂದು ಟಾಸ್ಕ್ ನೀಡಿರ್ತಾರೆ. ಅದುವೇ ಬೆತ್ತಲೆಗೊಳಿಸಿದ ವಿಡಿಯೋ ಎಲ್ಲಿಯೂ ಹೊರ ಬರದಂತೆ ವೈರಲ್ ಆಗದಂತೆ ನೋಡಿಕೊಳ್ಳಲು. ಹೌದು ಆ ಒಂದು ವಿಡಿಯೋ ಹೊರ ಬಂದಿದ್ದೇ ಆಗಿದ್ದರೆ ಇಡೀ ಸರ್ಕಾರ ತಲೆ ತಗ್ಗಿಸಬೇಕಾಗಿತ್ತು, ರಾಜ್ಯದ ಜನರು ತಲೆ ತಗ್ಗಿಸಬೇಕಿತ್ತು ಆ ಹೇಯ ಕೃತ್ಯಕ್ಕೆ.

ನಗರ ಪೊಲೀಸ್ ಆಯುಕ್ತರ ಸೂಚನೆ ಮೇರೆಗೆ ಅಂದು ಬೆಳಗ್ಗೆಯೇ ಅಖಾಡಕ್ಕಿಳಿದ ಪೊಲೀಸರು ಮನೆ ಮನೆಗೆ ಹೋಗಿ ಎಲ್ಲರ ಮೊಬೈಲ್ ಪರಿಶೀಲನೆ ಮಾಡ್ತಾರೆ. ಖುದ್ದು ಇವರೇ ಮೊಬೈಲ್ ನಲ್ಲಿನ ವಿಡಿಯೋ ಡಿಲಿಟ್ ಮಾಡುತ್ತಾರೆ, ಕೆಲ ಯುವಕರು ಊರು ಬಿಟ್ಟಿದ್ದು ಅವರನ್ನೂ ಕರೆಯಿಸಿ ಮೊಬೈಲ್ ನಲ್ಲಿ ವಿಡಿಯೋ ಡಿಲಿಟ್ ಮಾಡಿಸ್ತಾರೆ. ಯಾರಾದ್ರೂ ವೈರಲ್ ಮಾಡಿದ್ರೇ ಅವರ ವಿರುದ್ಧ ಕೇಸ್ ದಾಖಲಿಸಿ ಜೈಲಿಗೆ ಕಳುಹಿಸುವುದಾಗಿ ಇವರೇ ಊರ ತುಂಬ ಅನೌನ್ಸ್ ಕೂಡ ಮಾಡಿರುತ್ತಾರೆ.

ಸೋಶಿಯಲ್ ಮೀಡಿಯಾ ಇದೀಗ ಸಾಕಷ್ಟು ಸ್ಟ್ರಾಂಗ್. ಹಾಗಾಗಿ ಪ್ರತಿ ಮನೆ ಮನೆಯಲ್ಲೂ ಸ್ಮಾರ್ಟ್ ಫೋನ್ ಗಳಿದ್ದು ಬಹಳಷ್ಟು ಜನ ವಿಡಿಯೋ ಮಾಡಿಕೊಂಡಿದ್ರೂ ಅದನ್ನ ಹುಡುಕಿ ಹುಡುಕಿ ಡಿಲಿಟ್ ಮಾಡಿಸಿ ಎಲ್ಲಿಯೂ ಒಂದು ವಿಡಿಯೋ ಅಗಲೀ ಅಥವಾ ಒಂದೇ ಒಂದು ಫೋಟೊ ಕೂಡ ವೈರಲ್ ಆಗದಂತೆ ನೋಡಿಕೊಂಡಿರುತ್ತಾರೆ. ಇದರ ಜತೆಗೆ ಮಧ್ಯರಾತ್ರಿಯಾದ್ರೂ ಒಂದು ಕ್ಷಣವೂ ತಡ ಮಾಡದೇ ಸ್ಥಳಕ್ಕೆ ಹೋಗಿ ತಮ್ಮ ಜೀವ ಪಣಕ್ಕಿಟ್ಟು ಮಹಿಳೆಯನ್ನ ರಕ್ಷಣೆ ಮಾಡಿ ಮಾನವೀಯತೆ ಮೆರೆದಿರುತ್ತಾರೆ. ಬರೀ ಮಹಿಳೆಯನ್ನ ಕಾಪಾಡುವುದಷ್ಟೇ ಅಲ್ಲದೇ ಏಳು ಜನ ಆರೋಪಿಗಳನ್ನ ಕೂಡ ಬೆಳಗ್ಗೆ ಅಗುವಷ್ಟರಲ್ಲಿ ಬಂಧಿಸುವಲ್ಲಿ ಯಶಸ್ವಿಯಾಗಿರುತ್ತಾರೆ.

## ಅಮಾನತು

**ಏನಿದು ಪ್ರಕರಣ:** ಸಂತ್ರಸ್ಥ ಮಹಿಳೆ ರೂಪದೇವಿ ಅವರು ತನ್ನ ಕುಟುಂಬಸ್ಥರ ಜೊತೆ ಮಂಡ್ಯದ ಅಶೋಕ್ ನಗರದಲ್ಲಿ ವಾಸವಿದ್ದು, ನಗರ ಪ್ರದೇಶದಲ್ಲೇ ಹಸುಗಳನ್ನು ಸಾಕಾಣಿಕೆ ಮಾಡಿಕೊಂಡು ಬದುಕು ಸಾಗಿಸುತ್ತಿದ್ದಾರೆ. ಆದರೆ, ರಸ್ತೆಯಲ್ಲಿ ಹಸುಗಳನ್ನ ಬಿಡುತ್ತಾರೆ ಎಂಬ ದೂರುಗಳು ಬಂದ ಹಿನ್ನೆಲೆಯಲ್ಲಿ ನಿನ್ನೆ ಸಂಜೆ ಏಕಾಏಕಿ ಜೀಪ್ ನಲ್ಲಿ ಬಂದಿದ್ದ ಮಂಡ್ಯದ ಪೂರ್ವ ಠಾಣೆ ಪಿಎಸ್ ಐ ಅಯ್ಯನಗೌಡ, ಯಾವುದೇ ಮಹಿಳೆ ಪೇದೆ ಇಲ್ಲದೇ ಜೀಪ್ ನಲ್ಲಿಯೇ ರೂಪದೇವಿಯನ್ನ ಠಾಣೆಗೆ ಕರೆದುಕೊಂಡು ಹೋಗಿ ಠಾಣೆಯಲ್ಲಿಯೇ ಹಲ್ಲೆ ಮಾಡಿದ್ದಾರೆ. ಇನ್ನು ಈ ವಿಚಾರ ತಿಳಿಯುತ್ತಿದ್ದಂತೆ ಕೆಲ ಸಂಘಟನೆ ಕಾರ್ಯಕರ್ತರು ಠಾಣೆಯ ಬಳಿ ಹೋಗಿ ಪಿಎಸ್ ಐ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಮಹಿಳೆಯನ್ನ ವಾಪಾಸ್ ಕರೆದುಕೊಂಡು ಬಂದು ಆಸ್ಪತ್ರೆಗೆ ದಾಖಲು ಮಾಡಿದ್ದಾರೆ.

ಅಂದಹಾಗೆ ಹಸುಗಳನ್ನ ರಸ್ತೆಗೆ ಕಟ್ಟುತ್ತಾರೆ ಎಂಬ ದೂರು ಒಂದು ಕಡೆಯಾದರೇ, ಅದೇ ಪೂರ್ವ ಠಾಣೆಯ ಮಹಿಳೆ ಪೇದೆಯೊಬ್ಬರು ಹಸುಗೆ ಸಿಲುಕಿ ಗಾಡಿಯಿಂದ ಬಿದ್ದಿದ್ದರು. ಈ ವಿಚಾರವಾಗಿ ಮಹಿಳೆಯ ಬಳಿ ಪರಿಹಾರ ಹಣವನ್ನ ಮಹಿಳೆ ಪೇದೆ ಕೂಡ ಕೇಳಿದ್ದರು. ಆ ಪರಿಹಾರ ಹಣವನ್ನ ಕೂಡ ಕೊಟ್ಟಿರಲಿಲ್ಲ, ಈ ವಿಚಾರವಾಗಿಯೂ ಕೂಡ ಮಹಿಳೆಯ ಮೇಲೆ ಪಿಎಸ್ ಐ ಗೆ ಕೋಪ ಇತ್ತು. ಈ ಹಿನ್ನೆಲೆಯಲ್ಲಿ ನಿನ್ನೆ ಸಂಜೆ ಮಹಿಳೆಯನ್ನ ಠಾಣೆಗೆ ಕರೆತಂದು ಹಲ್ಲೆ ಮಾಡಿದ್ದಾರೆ. ಇದರಿಂದಲೇ ಮಹಿಳೆಯ ತಾಯಿ ಠಾಣೆಗೆ ದೂರು ನೀಡಿದ್ದರು. ಇದರ ಪರಿಣಾಮ ಪಿಎಸ್ ಐ ರನ್ನ ಅಮಾನತು ಮಾಡಿ ಮಂಡ್ಯ ಎಸ್ ಪಿ ಆದೇಶಿಸಿದ್ದಾರೆ.

**ದರ್ಪ ಖಂಡಿಸಿ ವಿವಿಧ ಸಂಘಟನೆ ಕಾರ್ಯಕರ್ತರಿಂದ ಪ್ರತಿಭಟನೆ:** ಇನ್ನು ಪಿಎಸ್ ಐ ದರ್ಪ ಖಂಡಿಸಿ ವಿವಿಧ ಸಂಘಟನೆ ಕಾರ್ಯಕರ್ತರು ಪೂರ್ವ ಪೊಲೀಸ್ ಠಾಣೆಯ ಮುಂದೆ ಪ್ರತಿಭಟನೆ ನಡೆಸಿದ್ದರು. ಒಟ್ಟಾರೆ ಅಧಿಕಾರಿ ಬಳಸಿಕೊಂಡು ಒಂಟಿಯಾಗಿ ಮಹಿಳೆಯನ್ನ ಕರೆದುಕೊಂಡು ಬಂದು ಪಿಎಸ್ ಐ ಹಲ್ಲೆ ಮಾಡುವ ಮೂಲಕ ದರ್ಪ ಮೆರೆದಿದ್ದು, ಇದೀಗ ಪಿಎಸ್‌ಐ ವಿರುದ್ಧ ಮಂಡ್ಯದಲ್ಲಿ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ.

## ಘೋಷಣೆ

ಅನುದಾನಿತ ಮತ್ತು ಅನುದಾನರಹಿತ ಶಿಕ್ಷಣ ಸಂಸ್ಥೆಗಳು ಸೇರಿದಂತೆ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುವ ಅರ್ಹ ಮತದಾರರಿಗೆ ಈ ರಜೆ ಆದೇಶ ಅನ್ವಯವಾಗಲಿದೆ. ಉಪ ಚುನಾವಣೆಯಲ್ಲಿ ಮತದಾನದಲ್ಲಿ ಭಾಗವಹಿಸಲು ಪೂರ್ವಾನುಮತಿ ಪಡೆಯಬೇಕೆಂದು ಷರತ್ತಿಗೆ ಒಳಪಟ್ಟು ಈ ರಜೆ ಮಂಜೂರು ಮಾಡುವಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಸಂಬಂಧಿಸಿದ ಅಧಿಕಾರಿಗಳಿಗೆ ಆದೇಶದಲ್ಲಿ ಸೂಚಿಸಿದೆ.

ಶಿಕ್ಷಕರ ಕ್ಷೇತ್ರದಲ್ಲಿ ಒಟ್ಟು 14,432 ಮತದಾರಾರು ಇದ್ದಾರೆ. ಫೆಬ್ರವರಿ 16ರ ಬೆಳಗ್ಗೆ 8 ಗಂಟೆಯಿಂದ ಸಂಜೆ 4 ಗಂಟೆವರೆಗೆ ಒಟ್ಟು 45 ಮತಗಟ್ಟೆಗಳಲ್ಲಿ ಮತದಾನ ನಡೆಯಲಿದ್ದು, ಮತಗಟ್ಟೆಗಳ ಬಳಿ 144 ಸೆಕ್ಷನ್ ಇರಲಿದೆ.ಇನ್ನು ಫೆಬ್ರವರಿ 20 ರಂದು ಬೆಂಗಳೂರಿನ ನೃಪತುಂಗ ರಸ್ತೆಯ ಸರ್ಕಾರಿ ಕಲಾ ಕಾಲೇಜಿನಲ್ಲಿ ಮತ ಎಣಿಕೆ ಕಾರ್ಯ ನಡೆಯಲಿದ್ದು, ಮತದಾನದ ಮೇಲ್ವಿಚಾರಣೆಗೆ ಈಖಖಿ,ಖಖಿ ಟೀಂ ರಚನೆ ಮಾಡಲಾಗಿದೆ.

'ಮತದಾನದ ದಿನ ಫೆ.16 ರ ಬೆಳಗ್ಗೆ 6 ಗಂಟೆಯಿಂದ ಮಧ್ಯರಾತ್ರಿವರೆಗೆ ಹಾಗೂ ಮತ ಎಣಿಕೆ ನಡೆಯುವ ಫೆ.20 ರ ಬೆಳಗ್ಗೆ 6 ಗಂಟೆಯಿಂದ ಮಧ್ಯರಾತ್ರಿವರೆಗೆ ಮಾತ್ರ ಮದ್ಯ ಮಾರಾಟ ನಿರ್ಬಂಧಿಸಲಾಗಿದೆ.

# ಗುಂಡು ಹಾರಿಸಿಕೊಂಡು ಆತ್ಮಹತ್ಯೆಗೆ ಯತ್ನಿಸಿದ ಕಾನ್ಸ್‌ಟೇಬಲ್

**ದಾವಣಗೆರೆ:** ಸಶಸ್ತ್ರ ಮೀಸಲು ಪಡೆಯ ಕಾನ್ಸ್‌ಟೇಬಲ್ ಗುಂಡು ಹಾರಿಸಿಕೊಂಡು ಆತ್ಮಹತ್ಯೆಗೆ ಯತ್ನಿಸಿದ ಘಟನೆ ದಾವಣಗೆರೆ ಮಹಾನಗರ ಪಾಲಿಕೆಯ ಸ್ಟ್ರಾಂಗ್ ಬಳಿ ನಡೆದಿದೆ. ವಿಜಯನಗರ ಜಿಲ್ಲೆಯ ಹರಪನಹಳ್ಳಿ ನಿವಾಸಿ ಗುರುಮೂರ್ತಿ (34) ಆತ್ಮಹತ್ಯೆಗೆ ಯತ್ನಿಸಿದ ಪೇದೆ. ಗುಂಡು ಹಾರಿಸಿಕೊಂಡು ರಸ್ತದ ಮಡುವಿನಲ್ಲಿ ಬಿದ್ದ ಗುರುಮೂರ್ತಿಯನ್ನ ಕೂಡಲೇ ಸಿಟಿ ಸೆಂಟ್ರಲ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದ್ದು, ಸ್ಥಿತಿ ಗಂಭೀರವಾಗಿದೆ. ಕಳೆದ ಕೆಲ ದಿನಗಳಿಂದ ಇವಿಎಂ ಮಷಿನ್ ಕಾವಲು ಸೇವೆಯಲ್ಲಿದ್ದ ಗುರುಮೂರ್ತಿ, ಇದೀಗ ಏಕಾಏಕಿ ಆತ್ಮಹತ್ಯೆಗೆ ಯತ್ನಿಸಿರುವುದು ಹಲವಾರು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ. ಮೇಲ್ನೋಟಕ್ಕೆ ಕೌಟುಂಬಿಕ ಕಲಹದ ಶಂಕೆ ವ್ಯಕ್ತವಾಗಿದ್ದು, ಬಡಾವಣೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ನೀರು ಅಮೂಲ್ಯವಾಗಿದ್ದು, ಅನಗತ್ಯವಾಗಿ ಪೋಲಾಗುವುದನ್ನು ತಡೆಗಟ್ಟಿ

**ಮೈಸೂರು:** ರೈತರು ನೀರು ಪೋಲಾಗುವುದನ್ನು ತಡೆಯಲು ಸೂಕ್ಷ್ಮ ನೀರಾವರಿ, ಹನಿ ನೀರಾವರಿ ಪದ್ಧತಿಗಳನ್ನು ಅನುಸರಿಸಿ ?ಪ್ರತಿ ಹನಿ ಅಧಿಕ ಬೆಳೆ? ಆಶಯವನ್ನು ಈಡೇರಿಸುವ ನಿಟ್ಟಿನಲ್ಲಿ ರೈತರು ತಮ್ಮ ತಮ್ಮ ಕ್ಷೇತ್ರಗಳಲ್ಲಿ ಕಾರ್ಯಪ್ರವೃತ್ತರಾಗಬೇಕು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಪ್ರಭಾರ ಉಪ ಕೃಷಿ ನಿರ್ದೇಶಕರಾದ ಡಾ. ಧನಂಜಯಬಿ.ಎನ್ ರವರು ರೈತರಿಗೆ ಕರೆನೀಡಿದರು.

ನಾಗನಹಳ್ಳಿ ಜಿಲ್ಲಾ ಕೃಷಿ ತರಬೇತಿ ಕೇಂದ್ರ ವತಿಯಿಂದ ಬನ್ನೂರು ಹೋಬಳಿಯ ಯಾಚೇನಹಳ್ಳಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಹೆಚ್.ಎಸ್. ಮಹದೇವ ಪ್ರಸಾದ ಸಭಾಂಗಣದಲ್ಲಿ ನಡೆದ ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಕೃಷಿ ಸಿಂಚಾಯ ಯೋಜನೆಯಡಿ ?ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ಸೂಕ್ಷ್ಮ ನೀರಾವರಿ ಮತ್ತು ರಸಾವರಿ ತಾಂತ್ರಿಕತೆಗಳ ಅಳವಡಿಕೆ ಮೂಲಕ ಅಧಿಕ ಲಾಭ? ವಿಷಯ ಕುರಿತ ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಭತ್ತದ ಬೆಳೆಗೆ ಕಟ್ಟುನೀರು ಪದ್ಧತಿಯನ್ನು ಅನುಸರಿಸಿರುವುದರಿಂದ ನೀರಿನ ಮಿತಬಳಕೆಯಾಗಿ ಉತ್ತಮ ಇಳುವರಿ ಪಡೆದಿರುವ ರೈತರು ಇದ್ದು, ಅವರನ್ನು ಅನುಸರಿಸುವ ಮೂಲಕ ಹೆಚ್ಚಿನ ಇಳುವರಿ ಪಡೆಯುವತ್ತ ಗಮನಹರಿಸಬೇಕು ಎಂದು ರೈತರಿಗೆ ಸಲಹೆ ನೀಡಿದರು.



ತರಬೇತಿ ಕಾರ್ಯಕ್ರಮದ ಅಧ್ಯಕ್ಷತೆಯನ್ನುವಹಿಸಿದ ಯಾಚೇನಹಳ್ಳಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾದ ಶಂಕರೇಗೌಡರು ಮಾತನಾಡಿ ರೈತರು ಇಸ್ರೇಲ್ ದೇಶದ ಕೃಷಿಯನ್ನು ಮಾದರಿಯಾಗಿಟ್ಟುಕೊಂಡು ಆಧುನಿಕ ತಾಂತ್ರಿಕತೆಗಳನ್ನು ಅಳವಡಿಸಿಕೊಂಡು ಸುಸ್ಥಿರ ಕೃಷಿಯನ್ನು ಮಾಡಬೇಕು ಎಂದು ರೈತರಿಗೆ ಸಲಹೆ ನೀಡಿದರು.

ನೆಟಾಫಿನ್ ಸಂಸ್ಥೆಯ ಬೇಸಾಯ ಶಾಸ್ತ್ರಜ್ಞರಾದ ಅಂಜನಪ್ಪನವರು ಹನಿ ನೀರಾವರಿ ಪದ್ಧತಿಯಲ್ಲಿ ಕೃಷಿ ಬೆಳೆಗಳಿಗೆ ಹಾಗೂ ತೋಟಗಾರಿಕಾ ಬೆಳೆಗಳಿಗೆ ರಸಗೊಬ್ಬರ ನೀಡುವ ವಿಧಾನ ಹಾಗೂ ಹನಿ ನೀರಾವರಿ ಘಟಕಗಳ ನಿರ್ವಹಣೆ ಬಗ್ಗೆ ರೈತರಿಗೆ ತರಬೇತಿ ನೀಡಿದರು.

ಸಹಾಯಕ ತೋಟಗಾರಿಕಾ ಅಧಿಕಾರಿ ತಿರುವಂಕೂರ್ ಅರಸ್ ರವರು ತೋಟಗಾರಿಕೆ ಇಲಾಖೆಯಲ್ಲಿ ರೈತರಿಗೆ ಸಿಗುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು.

ನಿವೃತ್ತ ಕೃಷಿ ಅಧಿಕಾರಿಯಾದ ಸ್ವಾಮಿರವರು ಮಾತನಾಡಿ ರೈತರಿಗೆ ಮಣ್ಣಿನ ಫಲವತ್ತತೆ ಕಾಪಾಡಲು ರೈತರು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಬನ್ನೂರು ರೈತ ಸಂಪರ್ಕ ಕೇಂದ್ರ ಕೃಷಿ ಅಧಿಕಾರಿ ವಿಶಾಲುರವರು ರೈತರಿಗೆ ಕೃಷಿ ಭಾಗ್ಯಯೋಜನೆ ಹಾಗೂ ಕೃಷಿ ಯಾಂತ್ರೀಕರಣ ಯೋಜನೆ ಬಗ್ಗೆ ರೈತರಿಗೆ ಮಾಹಿತಿ ನೀಡಿದರು. ತರಬೇತಿ ಕಾರ್ಯಕ್ರಮದಲ್ಲಿ ಸಹಾಯಕ ಕೃಷಿ ನಿರ್ದೇಶಕರಾದ ಮಧುಲತಾ ಹೆಚ್.ಬಿ., ಹೆಚ್.ಆರ್. ರಾಜಶೇಖರ, ಬನ್ನೂರು ರೈತ ಸಂಪರ್ಕ ಕೇಂದ್ರದ ಆತ್ಮಸಿಬ್ಬಂದಿ ಶಿವರಾಮು, ಸಂಘದ ನಿರ್ದೇಶಕರು ಸೇರಿದಂತೆ ಜಿಲ್ಲೆಯ ವಿವಿಧ ಗ್ರಾಮಗಳ 100 ಜನ ರೈತರು ಭಾಗವಹಿಸಿದ್ದರು.

## ಹುಲಿ ಪ್ರತ್ಯಕ್ಷ: ಕೂಂಬಿಂಗ್ ಕಾರ್ಯಾಚರಣೆ ಆರಂಭ!

**ಮೈಸೂರು:** ಜಿಲ್ಲೆಯ ನರಸೀಪುರ ತಾಲೂಕಿನ ಬನ್ನೂರು ಪಟ್ಟಣದ ಸೇತುವೆ ಬಳಿ ಹುಲಿಯೊಂದು ಕಾಣಿಸಿಕೊಂಡಿದೆ. ಕಾಣಿಸಿಕೊಂಡಿರುವ ಹುಲಿಯನ್ನು ಹಿಡಿಯಲು ತಕ್ಷಣವೇ ಅರಣ್ಯ ಇಲಾಖೆ ಕೂಂಬಿಂಗ್ ಕಾರ್ಯಾಚರಣೆಯನ್ನು ಆರಂಭಿಸಿದೆ. ಸ್ಥಳೀಯ ಕುಮಾರ್ ಎಂಬುವರಿಗೆ ಸೇರಿದ ಜಮೀನಿನಲ್ಲಿ ಹುಲಿ ಕಾಣಿಸಿಕೊಂಡಿದ್ದು, ಅದನ್ನು ಕಂಡ ದಿವಾಕರ್ ಎಂಬುವರು ಫೋಟೋ ತೆಗೆದು ಅರಣ್ಯ ಇಲಾಖೆ ಸಿಬ್ಬಂದಿಗೆ ಕಳುಹಿಸಿದ್ದಾರೆ. ಈ ಸುದ್ದಿ ಆಧರಿಸಿ ತಿ. ನರಸೀಪುರ ವಲಯದಲ್ಲಿ ವಲಯ ಅರಣ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳು ಭೇಟಿ ನೀಡಿ ಸ್ಥಳ ಪರಿಶೀಲನೆ ಮಾಡಿದ್ದಾರೆ. ಪರಿಶೀಲನೆ ವೇಳೆ ಹುಲಿ ಹೆಜ್ಜೆ ಗುರುತು ಪತ್ತೆ ಆಗಿದೆ. ಕೂಡಲೆ ಹೆಚ್ಚೆತ್ತಾ ಅರಣ್ಯ ಇಲಾಖೆ ಸಿಬ್ಬಂದಿಗಳು ಕೂಡಲೇ ಸುತ್ತಮುತ್ತಲಿನ ಪ್ರದೇಶದಲ್ಲಿ ಕೂಂಬಿಂಗ್ ಕಾರ್ಯಾಚರಣೆ ನಡೆಸುತ್ತಿದ್ದಾರೆ.



## ಗ್ರೇಡೆಡ್ ಪೇ ನೌಕರಿಗೆ ಮಧ್ಯಂತರ ಪರಿಹಾರ ಭತ್ಯೆಗೆ ಸರಕಾರದ ತಡೆ!

**ಮೈಸೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಗ್ರೇಡೆಡ್ ಪೇ ನೌಕರಿಗೆ ಮೂಲವೇತನದ ಶೇಕಡ 17ರಷ್ಟು ಮಧ್ಯಂತರ ಪರಿಹಾರ ಭತ್ಯೆ ನೀಡುವನಿರ್ಣಯಕ್ಕೆ ರಾಜ್ಯ ಸರಕಾರ ತಡೆಯೊಡ್ಡಿದೆ.

ಈ ಸಂಬಂಧ ಉನ್ನತ ಶಿಕ್ಷಣ ಇಲಾಖೆ ಅಧೀನ ಕಾರ್ಯದರ್ಶಿ ಶಶಿಕಲಾ ಸಿ, ಅವರು ಫೆ. 03 ರಂದು ಮುಕ್ತ ವಿವಿ ಕುಲಸಚಿವರಿಗೆ ಪತ್ರ ಬರೆದಿದ್ದಾರೆ. ಈ ಪತ್ರದ ಒಟ್ಟು ಸಾರಾಂಶ ಹೀಗಿದೆ?: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ದಿನಾಂಕ:01.12.2023ರಂದು ನಡೆದ ವ್ಯವಸ್ಥಾಪನ ಮಂಡಳಿ 175ನೇ ಸಾಮಾನ್ಯ ಸಭೆಯಯಲ್ಲಿ ತೆಗೆದುಕೊಂಡ ನಿರ್ಣಯದ ನಡವಳಿಗೆ ಸಂಬಂಧಿಸಿದಂತೆ, ಉಲ್ಲೇಖಿತ ಸುತ್ತೋಲೆಯ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ.

ದಿನಾಂಕ:01.12.2023ರಂದು ನಡೆದ ವ್ಯವಸ್ಥಾಪನ ಮಂಡಳಿ 175ನೇ ಸಾಮಾನ್ಯ ಸಭೆಯಲ್ಲಿ ವಿಶ್ವವಿದ್ಯಾಲಯದ 121 ಗ್ರೇಡೆಡ್ ಪೇ ನೌಕರರುಗಳಿಗೆ ಮೂಲವೇತನದ ಶೇಕಡ 17ರಷ್ಟು ಮಧ್ಯಂತರ ಪರಿಹಾರ ಭತ್ಯೆಯನ್ನು 2023ರ ಡಿಸೆಂಬರ್ ಮಾಹೆಯಿಂದ ಜಾರಿಗೆ ಬಂದಂತೆ ನೀಡಲು ತೀರ್ಮಾನಿಸಲಾಗಿರುತ್ತದೆ.

ಆದರೆ, ಉಲ್ಲೇಖಿತ ದಿನಾಂಕ:15.12.2023ರ ಆರ್ಥಿಕ ಇಲಾಖೆಯ ಸುತ್ತೋಲೆಯಲ್ಲಿ ಹೊರಸಂಪನ್ಮೂಲ ನೌಕರರುಗಳಿಗೆ ಕಾರ್ಮಿಕ ಇಲಾಖೆಯಿಂದ Minimum Wages Act ಪ್ರಕಾರ ವೇತನ ನಿಗಧಿಪಡಿಸಿ ಹೊರಡಿಸಲಾದ ಅಧಿಸೂಚನೆಗನುಸಾರವಾಗಿ ವೇತನ ನಿಗಧಿಪಡಿಸಲು ಕ್ರಮವಹಿಸುವಂತೆ ತಿಳಿಸಿದೆ.

ಒಂದು ವೇಳೆ, ಈ ಅಧಿಸೂಚನೆಗೆ ವಿರುದ್ಧವಾದ ಅಧಿಕೃತ ಜ್ಞಾಪನ/ಸರ್ಕಾರಿ ಆದೇಶ ಈಗಾಗಲೇ ಹೊರಡಿಸಿದ್ದಲ್ಲಿ, ಕೂಡಲೇ ಹಿಂಪಡೆಯುವಂತೆ ತಿಳಿಸಲಾಗಿರುತ್ತದೆ. ಈ ಅಧಿಸೂಚನೆಗೆ ವಿರುದ್ಧವಾಗಿ ಅಧಿಕೃತ ಜ್ಞಾಪನ/ಸರ್ಕಾರಿ ಆದೇಶ ಈಗಾಗಲೇ ಹೊರಡಿಸಿದ್ದಲ್ಲಿ ಕೂಡಲೇ ಹಿಂಪಡೆಯುವಂತೆ ತಿಳಿಸಲಾಗಿರುತ್ತದೆ. ಆದ್ದರಿಂದ, ಉಲ್ಲೇಖಿತ ಸುತ್ತೋಲೆಯನ್ವಯ ಪರಿಶೀಲಿಸಿ ಸದರಿ ಸಭೆಯಲ್ಲಿನ ನಡವಳಿಯಲ್ಲಿರುವಂತೆ ಚರ್ಚಿಸಿ ನಿರ್ಣಯ ಕೈಗೊಂಡಿರುವ ಕುರಿತು ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ಎಲ್ಲಾ ಅಧಿಸೂಚನೆ/ಆದೇಶ/ಸುತ್ತೋಲೆಗಳನ್ನು ಅನುಸರಿಸಿ ಕ್ರಮವಹಿಸಲಾಗಿರುವ ಕುರಿತು ಸಂಬಂಧಪಟ್ಟ ವಿಷಯಗಳಿಗೆ ಅಂಶವಾರು ಅಗತ್ಯ ದಾಖಲೆಗಳೊಂದಿಗೆ ವರದಿ ಸಲ್ಲಿಸುವಂತೆ ತಿಳಿಸಲು ನಿರ್ದೇಶಿತನಾಗಿದ್ದೇನೆ.



### ಕುಲಪತಿ ಸ್ಪಷ್ಟನೆ :

**ಸರಕಾರದ ಈ ಆದೇಶದ ಬಗ್ಗೆ ಮುಕ್ತ ವಿವಿ ಕುಲಪತಿ ಪ್ರೊ.ಶರಣಪ್ಪ ಹಲಸೆ ಅವರನ್ನು ಜಸ್ಟ್ ಕನ್ನಡ ಸಂಪರ್ಕಿಸಿದಾಗ, ಸರಕಾರದ ಆದೇಶ ತಲುಪಿದೆ. ಅದನ್ನು ಪಾಲಿಸಲಾಗುತ್ತದೆ. ವ್ಯವಸ್ಥಾಪನ ಮಂಡಳಿಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಇನ್ನು ಯಾವುದೇ ಅಧಿಕೃತ ಜ್ಞಾಪನ/ಸರ್ಕಾರಿ ಆದೇಶವನ್ನು ವಿಶ್ವವಿದ್ಯಾನಿಲಯ ಹೊರಡಿಸಿಲ್ಲ ಎಂದು ಸ್ಪಷ್ಟಪಡಿಸಿದರು.**

## ಜಿಲ್ಲಾಧಿಕಾರಿಗಳಾದ ಡಾ. ಕೆ.ವಿ ರಾಜೇಂದ್ರ ಸಲಹೆ

# ಸಂಚಾರಿ ನಿಯಮ ಪಾಲಿಸಿ

**ಮೈಸೂರು:** ಪ್ರತಿಯೊಂದು ಜೀವವೂ ಅಮೂಲ್ಯವಾದದ್ದು. ಉತ್ತಮ ರಸ್ತೆಗಳು, ಸಂಚಾರಿ ನಿಯಮಗಳನ್ನು ಹಾಗೂ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವ ಮೂಲಕ ಅಪಘಾತದಿಂದ ಸಾವುಗಳು ಆಗದಂತೆ ತಡೆಗಟ್ಟುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಜಿಲ್ಲಾಧಿಕಾರಿಗಳಾದ ಡಾ. ಕೆ.ವಿ ರಾಜೇಂದ್ರ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮೈಸೂರು ನಗರದಲ್ಲಿ ವಿಶಾಲವಾದ ರಸ್ತೆಗಳು ಇವೆ. ಆದರೆ ಸರಿಯಾಗಿ ನಿರ್ವಹಣೆ ಮಾಡುತ್ತಿಲ್ಲ, ಇದರಿಂದ ಅಪಘಾತಗಳು ಆಗುತ್ತಿವೆ. ಇತ್ತೀಚೆಗೆ ಮೈಸೂರು ವಿಶ್ವವಿದ್ಯಾಲಯದ ಜೆಸಿ ಕಾಲೇಜು ರಸ್ತೆಯಲ್ಲಿ ಅವೈಜ್ಞಾನಿಕ ಹಂಪ್ ಅಳವಡಿಸುವುದರಿಂದ 3 ಜನ ಅಪಘಾತಕ್ಕೆ ಬಲಿಯಾಗಿದ್ದಾರೆ. ಈ ಅವೈಜ್ಞಾನಿಕ ಹಂಪ್ ಅಳವಡಿಸಿ ಅವಘಡಕ್ಕೆ ಕಾರಣರಾದ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು. ರಸ್ತೆಗಳನ್ನು ರಿಪೇರಿ ಹಾಗೂ ಕಾಮಗಾರಿ ಮಾಡುವಾಗ ಈ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಬೇಕು. ರಸ್ತೆ ವೈಟ್‌ಟ್ಯಾಪ್‌ಗಳು, ಸೂಚನಾ ಫಲಕಗಳನ್ನು ಹಾಕಬೇಕು. ಬದಲಿ ರಸ್ತೆ ಬಳಕೆ ಕುರಿತು ಮಾಹಿತಿ ನೀಡಬೇಕು ಎಂದು ಸೂಚನೆ ನೀಡಿದರು.

ಮೈಸೂರು ಪ್ರವಾಸೋದ್ಯಮಕ್ಕೆ ಹೆಸರಾದ ಜಿಲ್ಲೆ. ಯಾವ ಯಾವ ಪ್ರವಾಸಿ ತಾಣಗಳಿಗೆ ಯಾವ ರಸ್ತೆಯಲ್ಲಿ ಹೋಗಬೇಕು ಎಂಬ ಸೈನ್‌ಬೋರ್ಡ್‌ಗಳನ್ನು ಅಳವಡಿಸಬೇಕು. ಇದರಿಂದ ಪ್ರವಾಸಿಗರಿಗೆ ಸೂಕ್ತ ಮಾಹಿತಿ ದೊರೆಯುತ್ತದೆ. ಪುಟ್‌ಪಾತ್‌ಗಳ ಮೇಲೆ ಬೀದಿಬದಿ ವ್ಯಾಪಾರಿಗಳು ಅತಿಕ್ರಮ ಮಾಡಿರುತ್ತಾರೆ. ಇದನ್ನು ತೆರವುಗೊಳಿಸಿ ಜನರು ಸಂಚಾರ ಮಾಡಲು ಅವಕಾಶ ಮಾಡಿಕೊಡಬೇಕು ಎಂದು ಸೂಚನೆ ನೀಡಿದರು.



ಅಪಾಯಕಾರಿ ಮರಗಳು ಹಾಗೂ ಕೊಂಬೆಗಳನ್ನು ತೆರವುಗೊಳಿಸಲು ವರದಿಯನ್ನು ಅರಣ್ಯ ಇಲಾಖೆಗೆ ನೀಡಿ, ಸಾರ್ವಜನಿಕರಿಂದ ಅಹವಾಲುಗಳನ್ನು ಪಡೆದು ಅಗತ್ಯವಿರುವ ಅಪಾಯಕಾರಿ ಮರಗಳನ್ನು ತೆರವು ಗೊಳಿಸಲು ಕ್ರಮವಹಿಸಬೇಕು. ನಗರದಲ್ಲಿರುವ ಅವೈಜ್ಞಾನಿಕ ಹಂಪ್‌ಗಳ ಕುರಿತು ಸ್ಥಳ ಪರಿಶೀಲನೆ ಮಾಡಿ ವರದಿಯನ್ನು ತಯಾರಿಸಿ ಒಂದು ವಾರದಲ್ಲಿ ನೀಡಬೇಕು ಎಂದು ಪೊಲೀಸ್ ಇಲಾಖೆಗೆ ಸೂಚನೆ ನೀಡಿದರು.

ಮೈಸೂರು ಗ್ರಾಮಾಂತರದಲ್ಲಿ 31 ನಗರ ವ್ಯಾಪ್ತಿಯಲ್ಲಿ 16 ಜನರು ಜನವರಿ ತಿಂಗಳಲ್ಲಿ ಅಪಘಾತ ಪ್ರಕರಣಗಳಿಂದ ಮರಣ ಹೊಂದಿದ್ದಾರೆ. ಈ ಅಪಘಾತಗಳು ಸಂಭವಿಸಲು ಕಾರಣಗಳು ಏನು ಎಂಬುವುದನ್ನು ವರದಿ ನೀಡಬೇಕು. ಶಿವರಾಂಪೇಟೆ ಸರ್ಕಲ್‌ನಲ್ಲಿ ಗೂಡ್ಸ್ ವಾಹನಗಳನ್ನು ರಸ್ತೆ ಬದಿಯಲ್ಲೇ ನಿಲ್ಲಿಸಿಕೊಂಡು ಲೋಡಿಂಗ್, ಅನ್‌ಲೋಡಿಂಗ್ ಮಾಡುತ್ತಾ ಇರುತ್ತಾರೆ. ಇದರಿಂದ ಅಲ್ಲಿ ಟ್ರಾಫಿಕ್ ಜಾಮ್ ಆಗಿ ವಿಳಂಬ ಆಗುತ್ತದೆ. ಈ ಸಮಯವನ್ನು ಸರಿದೂಗಿಸಲು ವಾಹನ ಸವಾರರು ಮುಂದಿನ ಸಿಗ್ನಲ್‌ಗಳಿಂದ ವೇಗವಾಗಿ ಚಾಲನೆ ಮಾಡುತ್ತಾರೆ. ಇದರಿಂದ ಅಪಘಾತಗಳು ಸಂಭವಿಸುತ್ತಿವೆ. ಆದ್ದರಿಂದ ಶಿವರಾಂಪೇಟೆ ಸರ್ಕಲ್‌ನಲ್ಲಿ ಪೀಕ್ ಸಮಯದಲ್ಲಿ ಗೂಡ್ಸ್ ವಾಹನಗಳನ್ನು ನಿಲ್ಲಿಸದಂತೆ ಕ್ರಮವಹಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹೆಲ್ಮೆಟ್ ಧರಿಸದೆ ಇರುವವರು ಹಾಗೂ ಸಂಚಾರಿ ನಿಯಮಗಳನ್ನು ಪಾಲಿಸದೆ ಇರುವವರಿಗೆ ದಂಡ ವಿಧಿಸಿ. ಅವೈಜ್ಞಾನಿಕ ಹಂಪ್‌ಗಳನ್ನು ತೆರವುಗೊಳಿಸಿ. ಆಟೋ ಚಾಲಕರು, ಗೂಡ್ಸ್ ವಾಹನಗಳ ಚಾಲಕರು, ಬಸ್ ಚಾಲಕರು ಇವರಿಗೆ ನಿಯಮಿತವಾಗಿ ಕಾರ್ಯಾಗಾರಗಳನ್ನು ಮಾಡಿ ಸುರಕ್ಷತಾ ಚಾಲನಾ ನಿಯಮಗಳ ಕುರಿತು ತರಬೇತಿ ನೀಡಬೇಕು ಎಂದರು.

ಸಭೆಯಲ್ಲಿ ಮೈಸೂರು ಮಹಾನಗರ ಪಾಲಿಕೆಯ ಆಯುಕ್ತರಾದ ಅರ್ಷದ್ ಉರ್ ರೆಹಮಾನ್, ಉಪ ಪೊಲೀಸ್ ಆಯುಕ್ತರಾದ ಜಾಹ್ನವಿ, ಲೋಕೋಪಯೋಗಿ ಇಲಾಖೆಗೆ ಕಾರ್ಯಪಾಲಕ ಅಭಿಯಂತರರಾದ ರಾಜು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಕೇಂದ್ರ ಆದಷ್ಟು ಬೇಗ ಶೇ. 33 ಮಹಿಳಾ ಮೀಸಲಾತಿ ತರಲಿ

ಮೈಸೂರು: ರಾಜಕೀಯ ಪ್ರಾತಿನಿಧ್ಯದಲ್ಲಿ ಮಹಿಳೆಯರಿಗೆ ಅನ್ಯಾಯವಾಗುತ್ತಿದೆ. ಕೇಂದ್ರ ಸರ್ಕಾರ ಆದಷ್ಟು ಬೇಗ ಶೇ. 33 ರಷ್ಟು ಮಹಿಳಾ ಮೀಸಲಾತಿ ಜಾರಿಗೆ ತರಬೇಕು ಎಂದು ರಾಜ್ಯ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಡಾ. ಪುಷ್ಪಾ ಅಮರನಾಥ್ ಒತ್ತಾಯಿಸಿದರು. ಮೈಸೂರಿನಲ್ಲಿ ಇಂದು ಮಾತನಾಡಿದ ಡಾ.ಪುಷ್ಪಾ ಅಮರನಾಥ್, ಬಿಜೆಪಿ ಸರ್ಕಾರ ಮಹಿಳಾ ಮೀಸಲಾತಿ ಜಾರಿ ಮಾಡುತ್ತೇವೆ ಅಂತ ಹೇಳಿ ಇನ್ನೂ ಮೀನಾಮೇಷ ಎಣಿಸುತ್ತಿದೆ. ಈಗ ಜಾರಿ ಮಾಡಿದ್ರೆ ನನ್ನಂತಹ ಎಷ್ಟೋ ಹೆಣ್ಣು ಮಕ್ಕಳಿಗೆ ಅನುಕೂಲವಾಗುತಿತ್ತು. ಈಗ ನಾನು ಚಾಮರಾಜನಗರ ಲೋಕಸಭಾ ಕ್ಷೇತ್ರದ ಟಿಕೆಟ್ ಆಕಾಂಕ್ಷಿ. ಆದರೆ ಈ ಪುರುಷ ಪ್ರಧಾನ ಸಮಾಜದಲ್ಲಿ ನಾವು ಸ್ಪರ್ಧೆ ಮಾಡುವುದಕ್ಕೆ ಆಗುತ್ತಿಲ್ಲ. ಈಗ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಜಿಲ್ಲಾ ಪಂಚಾಯಿತಿ ಎಲ್ಲಾ ಕಡೆ ಮಹಿಳೆಯರಿಗೆ ಒಂದಷ್ಟು ಮೀಸಲಾತಿ ಇರುವುದರಿಂದ ನಮ್ಮಂತ ಮಹಿಳೆಯರಿಗೆ ಅಧಿಕಾರ ದಕ್ಕಿದೆ. ಇಲ್ಲೂ ಕೂಡ ಆ ಕೆಲಸ ಆಗಬೇಕು. ನಿಜವಾಗಿಯೂ ಕೆಲವೊಮ್ಮೆ ಮಹಿಳೆಯರನ್ನ ಕಡೆಗಣಿಸುತ್ತಿರುವುದು ಬೇಸರ ತರಿಸುತ್ತೆ. ಹೀಗಾಗಿ ಕೇಂದ್ರ ಸರ್ಕಾರ ಆದಷ್ಟು ಬೇಗ ಶೇ. 33 ರಷ್ಟು ಮಹಿಳಾ ಮೀಸಲಾತಿ ತರಬೇಕು ಎಂದು ನಾನು ಒತ್ತಾಯಿಸುತ್ತೇನೆ ಎಂದು ಪುಷ್ಪಾ ಅಮರನಾಥ್ ತಿಳಿಸಿದರು. ಅಕ್ಕಿ ಮಾರಾಟ ಮಾಡುವ ಮೂಲಕ ಜನರ ಅಕ್ಕಿಲೂ ಬಿಜೆಪಿ ವ್ಯಾಪಾರ. ಕೇಂದ್ರ ಸರ್ಕಾರದಿಂದ ಭಾರತ್ ಬ್ರಾಂಡ್ ಅಕ್ಕಿ ವಿತರಣೆ ವಿಚಾರ ಕುರಿತು ಪ್ರತಿಕ್ರಿಯಿಸಿದ ಡಾ.ಪುಷ್ಪಾ ಅಮರನಾಥ್, ಅಕ್ಕಿ ಕೊಡೋದು ಸರಿ ಅದನ್ನ ಉಚಿತವಾಗಿ ಕೊಡಬೇಕಿತ್ತು. ಅಕ್ಕಿ ಮಾರಾಟ ಮಾಡುವ ಮೂಲಕ ಜನರ ಅಕ್ಕಿಲೂ ಬಿಜೆಪಿ ವ್ಯಾಪಾರ ಶುರು ಮಾಡಿದೆ. ನಮ್ಮ ರಾಜ್ಯ ಸರ್ಕಾರ ಹಣ ಕೊಟ್ಟು ಅಕ್ಕಿ ಕೇಳಿದ್ರೆ ಕೊಡಲಿಲ್ಲ. ಈಗ ಬಿಜೆಪಿಯವರು ಅಕ್ಕಿ ಮಾರಾಟ ಶುರು ಮಾಡಿದ್ದಾರೆ. ಇದು ಆಘಾತಕಾರಿ ವಿಚಾರ. ಇವರಿಗೆ ನಾಚಿಕೆ ಆಗಬೇಕು. ನಾವು ಕೇಳಿದಾಗ ಅಕ್ಕಿ ಕೊಡದೇ ಈಗ 29 ರೂ. ಗೆ ಮಾರಾಟ ಮಾಡಲು ಹೋಗಿದ್ದಾರೆ. ಮುಂದೊಂದು ದಿನ ಎಲ್ಲವನ್ನೂ ಮಾರಿ ಬಿಡ್ತಾರೆ. ಜನ ಇದರ ಬಗ್ಗೆ ಯೋಚನೆ ಮಾಡಬೇಕು ಎಂದು ತಿಳಿಸಿದರು. ನಮ್ಮ ರಾಜ್ಯದ ಸಂಸದರು ನಾಲಾಯಕ್ ಸಂಸದರು. ನಮ್ಮ ರಾಜ್ಯಕ್ಕೆ ಆಗುವ ಅನ್ಯಾಯವನ್ನ ಕೇಳುವ ಧೈರ್ಯ ಮಾಡಲಿಲ್ಲ. ಇಂತವರನ್ನ ಮುಂದಿನ ಚುನಾವಣೆಯಲ್ಲಿ ಮನೆಗೆ ಕಳುಹಿಸಿ ಕನ್ನಡ ನಾಡು, ನುಡಿ ಜಲಕ್ಕಾಗಿ ಹೋರಾಡುವ ನಮ್ಮ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳ ಗೆಲ್ಲಿಸಿ ಕಳುಹಿಸಿಕೊಡಬೇಕು ಎಂದು ಪುಷ್ಪಾ ಅಮರನಾಥ್ ಮನವಿ ಮಾಡಿದರು.



» ಡಾ. ಪುಷ್ಪಾ ಅಮರನಾಥ್ ಒತ್ತಾಯ

## ಯುವಕ/ಯುವತಿ ಸಂಘ ಸಂಸೆಗಳ ನವೀಕರಣ, ನೋಂದಣಿಗೆ ಅವಕಾಶ

**ಮಂಡ್ಯ:** ಯುವಜನರು ಕ್ರೀಡೆ, ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಸಮುದಾಯ ಚಟುವಟಿಕೆಗಳಲ್ಲಿ ಕ್ರಿಯಾಶೀಲವಾಗಿ ತೊಡಗಿಸಿಕೊಂಡಿರುವ 18 ರಿಂದ 35 ವಯೋಮಿತಿಯ ಯುವಕ/ಯುವತಿ ಸಂಘಗಳು ತುರ್ತಾಗಿ ಇಲಾಖೆಯ ಹೊಸ ಕಾರ್ಯವಿಧಾನ/ಮಾರ್ಗಸೂಚಿಯನ್ವಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ನಿಯಮಾನುಸಾರ ಸಂಘಗಳನ್ನು ನವೀಕರಣ ಹಾಗೂ ಹೊಸದಾಗಿ ನೋಂದಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಜಿಲ್ಲೆಯಲ್ಲಿ ಕ್ರಿಯಾಶೀಲವಾಗಿರುವ ಆಯ್ದ ಯುವಕ/ಯುವತಿ ಸಂಘಗಳಿಗೆ ನಿಯಮಾನುಸಾರ ಆದ್ಯತೆಯ ಮೇರೆಗೆ ಇಲಾಖೆಯಿಂದ ಯುವ ಚೈತನ್ಯ ಯೋಜನೆಯಡಿ ಕೇಂದ್ರ ಕಛೇರಿಯಿಂದ ಕ್ರೀಡಾ ಕಿಟ್ ವಿತರಿಸಲು ಯೋಜನೆ ರೂಪಿಸುತ್ತಿದ್ದು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ಮಾನ್ಯತೆ ಪಡೆಯದ ಯಾವುದೇ ಸಂಘಗಳು ಇಲಾಖೆಯ ವತಿಯಿಂದ ದೊರೆಯಬಹುದಾದ ಯಾವುದೇ ಸೌಲಭ್ಯ ಪಡೆಯಲು ಅರ್ಹರಾಗಿರುವುದಿಲ್ಲ ಎಂದು ಮಂಡ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ರೈತ ಸಂಘದ ಅಧ್ಯಕ್ಷ ಹೊಸಹಳ್ಳಿ ಚಂದ್ರಣ್ಣ ಒತ್ತಾಯ

# ಹಾಲಿನ ಡೇರಿಯ ರೀತಿ ನೀರಾ ಡೇರಿ ಆರಂಭಿಸಿ

**ಹುಳಿಯಾರು:** ತೆಂಗು ಬೆಳೆಗಾರರ ಬದುಕು ಹಸನಾಗಬೇಕಾದರೆ ಹಾಲಿನ ಡೇರಿಯ ರೀತಿ ನೀರಾ ಡೇರಿ ಆರಂಭಿಸಿ ಎಂದು ಹೊಸಹಳ್ಳಿ ಚಂದ್ರಣ್ಣ ಬಣದ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಹೊಸಹಳ್ಳಿ ಚಂದ್ರಣ್ಣ ಸರ್ಕಾರಕ್ಕೆ ಸಲಹೆ ನೀಡಿದ್ದಾರೆ.

ಹುಳಿಯಾರಿನಲ್ಲಿ ನಡೆದ ರೈತರ ಸಭೆಯಲ್ಲಿ ಅವರು ಮಾತನಾಡಿ ನೀರಾ ಒಂದು ಆರೋಗ್ಯಕರ ಹಾಗೂ ನೈಸರ್ಗಿಕ ಪಾನೀಯ. ಅದರಲ್ಲಿ ಅನೇಕ ಬಗೆಯ ಪೌಷ್ಠಿಕಾಂಶಗಳಿವೆ. ಹಾಗಾಗಿ ನೀರಾ ಇಳಿಸಲು ಎಲ್ಲಾ ರೈತರಿಗೂ ಅನುಮತಿ ನೀಡಿ ನಿತ್ಯ ಮುಂಜಾನೆ ಹಾಲು ಸಂಗ್ರಹಿಸುವಂತೆ ರೈತರಿಂದ ನೀರಾ ಸಂಗ್ರಹಿಸಿ ಪಟ್ಟಣದಲ್ಲಿ ಮಾರಬಹುದು. ಮಾರಾಟವಾಗದೆ ಉಳಿದ ನೀರಾದಿಂದ ಬೆಲ್ಲ, ಮಿಠಾಯಿ ಸೇರಿದಂತೆ ಅನೇಕ ಮೌಲ್ಯವರ್ದಿತ ಆಹರೋತ್ಪನ್ನಗಳನ್ನು ಮಾಡಿ ಮಾರಬಹುದು. ಇದರಿಂದ ತೆಂಗು ಬೆಳೆಗಾರದ ಆರ್ಥಿಕ ಸಮಸ್ಯೆಗೆ ಶಾಶ್ವತ ಪರಿಹಾರ ಕೊಟ್ಟಂತ್ತಾಗುತ್ತದೆ ಎಂದು ತಿಳಿಸಿದರು. ಕೃಷಿ ಬಿಟ್ಟು ಬೇರೇ ಯಾವುದೇ ವ್ಯಾಪಾರ ಆರಂಭಿಸಿದರೂ 10 ವರ್ಷದಲ್ಲಿ ಮನೆ, ಕಾರು ಖರೀಧಿಸಿ ಶ್ರೀಮಂತರಾಗುತ್ತಾರೆ. ಆದರೆ ಮೂರ್ನಲ್ಕು ತಲೆಮಾರಿನಿಂದ ಕೃಷಿ ಮಾಡುತ್ತಾ ಬಂದಿದರೂ ರೈತ ಶ್ರೀಮಂತನಾದ ನಿದರ್ಶನವಿಲ್ಲ. ಇದಕ್ಕೆ ಮಾರುಕಟ್ಟೆಯ ಮೋಸದ ಜಾಲವೇ ಕಾರಣ ಬೆಳೆ ಇಲ್ಲದಾಗ ಬೆಲೆ ಹೆಚ್ಚಿಸಿ ಮತ್ತೆ ಬೆಳೆ ಬೆಳೆಯುವ ಆಸೆ ಹುಟ್ಟಿಸುತ್ತಾರೆ. ಹಗಲುರಾತ್ರಿ ನಿದ್ರಾಹಾರ ಬಿಟ್ಟು ವಿಷಜಂತುಗಳ ಕಾಟ ಲೆಕ್ಕಿಸದೆ ಯತ್ತೇಚ್ಚವಾಗಿ ಬೆಳೆ ಬೆಳೆದರೆ ಬೆಲೆ ಕುಸಿಸುತ್ತಾರೆ. ಇನ್ನು ಸರ್ಕಾರ ರಾಜ್ಯದ ನೀರನ್ನು ಸರಿಯಾಗಿ ಹಂಚಿಕೆ ಮಾಡದೆ ಪ್ರಭಾವ ಮತ್ತು ಜಾತಿ ಇರುವ ಕಡೆ ಹೆಚ್ಚು ಹರಿಸುತ್ತಾರೆ. ಸಮರ್ಪಕ ವಿದ್ಯುತ್ ನೀಡದೆ ಬೆಳೆಗೆ ವೈಜ್ಞಾನಿಕ ಬೆಲೆ ನೀಡದೆ ತಾರತಮ್ಯ ಮಾಡುತ್ತಾರೆ ಎಂದು ಆರೋಪಿಸಿದರು. ಈ ಸಂದರ್ಭದಲ್ಲಿ ಕೋಡಿಹಳ್ಳಿ ಚಂದ್ರಶೇಖರ್ ಬಣದ ರೈತ ಸಂಘದ ಜಿಲ್ಲಾಧ್ಯಕ್ಷ ಕೆ.ಎಸ್.ಧನಂಜಯಾರಾಧ್ಯ, ಉಪಾಧ್ಯಕ್ಷ ಕೆ.ತೋಂಟಾರಾಧ್ಯ, ಮತ್ತೋರ್ವ ಜಿಲ್ಲಾ ಉಪಾಧ್ಯಕ್ಷ ಬಂಡಿಮನೆ ಲೋಕಣ್ಣ ವಕೀಲರಾದ ರಮೇಶ್, ಕಾಡಿನರಾಜ ನಾಗಣ್ಣ, ಹುಳಿಯಾರು ರೈತ ಸಂಘದ ಕರಿಯಣ್ಣ, ನೀರಾಈರಣ್ಣ, ಪೆದ್ದಾಬೋವಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



**ಕೋವಿಡ್ ನಂತರ ಎಲ್ಲಾ ಅಗತ್ಯ ವಸ್ತುಗಳ ಬೆಲೆಯು ಶೇ.30 ರಷ್ಟು ಹೆಚ್ಚಾಗಿದೆ. ಇದರಂತೆ ಕೊಬ್ಬರಿ ಬೆಲೆಯೂ ಹೆಚ್ಚಾದರೆ ಕ್ವಿಂಟಲ್‌ಗೆ 14 ಸಾವಿರ ರೂ ಎಂಎಸ್‌ಪಿ ನಿಗಧಿ ಮಾಡಬೇಕಿತ್ತು. ಆದರೆ 11,700 ರೂ. ಇದಿದ್ದನ್ನು 12 ಸಾವಿರ ರೂ ಮಾಡಿದ್ದಾರೆ. ಅಂದರೆ ಕೆಜಿಗೆ ಕೇವಲ 2.50 ರೂ. ಮಾತ್ರ ಹೆಚ್ಚಿಸಿದ್ದಾರೆ. ಬೆಲೆ ಆಯೋಗ ಕೊಬ್ಬರಿಗೆ ಕ್ವಿಂಟಲ್‌ಗೆ 17 ಸಾವಿರ ರೂ. ಶಿಫಾರಸ್ಸು ಮಾಡಿದ್ದರೂ ಈ ಬೆಲೆ ಕೊಡುತ್ತಿಲ್ಲ. ಮಾರುಕಟ್ಟೆಯಲ್ಲಿ ಬೆಲೆ ಕುಸಿಯಲು ಸರ್ಕಾರ ಹೊರ ದೇಶಗಳಿಂದ ಎಣ್ಣೆ ಆಮದು ಮಾಡಿಕೊಳ್ಳುತ್ತಿರುವುದು ಕಾರಣವಾಗಿದೆ. ಇವರ ರೈತ ವಿರೋಧಿ ನಿಯಮದಿಂದ ತೊಂದರೆಯಾಗಿರುವ ಎಲ್ಲಾ ರೈತರಿಗೂ ಎಂಎಸ್‌ಪಿ ನೆರವು ಸಿಗುವ ದೃಷ್ಟಿಯಿಂದ ಎಲ್ಲಾ ರೈತರ ಕೊಬ್ಬರಿ ಖರೀಧಿ ಮಾಡಬೇಕು.**

| ಕೆ.ಎಸ್.ಧನಂಜಯಾರಾಧ್ಯ ಜಿಲ್ಲಾಧ್ಯಕ್ಷರು, ರೈತ ಸಂಘ

# ನಾಳೆ ಮಳವಳ್ಳಿ ಪುರಸಭೆಯ ಬಜೆಟ್ ಪೂರ್ವಭಾವಿ ಸಭೆ

**ಮಂಡ್ಯ:** ಫೆಬ್ರವರಿ 16 ರಂದು ಮಧ್ಯಾಹ್ನ 3 ಗಂಟೆಗೆ ಮಳವಳ್ಳಿ ಪುರಸಭೆಯ 2024-25 ನೇ ಸಾಲಿನ ಆಯ-ವ್ಯಯ(ಬಜೆಟ್)ದ ಬಗ್ಗೆ ಚರ್ಚಿಸಲು ಪುರಸಭಾ ಕಾರ್ಯಾಲಯದ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ. ಮಳವಳ್ಳಿ ಪುರಸಭೆಯ ಚುನಾಯಿತ ಪ್ರತಿನಿಧಿಗಳು, ಮಾಜಿ ಅಧ್ಯಕ್ಷರುಗಳು, ಮಾಜಿ ಉಪಾಧ್ಯಾಕ್ಷರುಗಳು, ಮಾಜಿ ಸದಸ್ಯರುಗಳು, ನಗರದ ನೊಂದಾಯಿತ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಸಂಘಟನೆಗಳ ಪ್ರತಿನಿಧಿಗಳು, ಹಿರಿಯ ನಾಗರೀಕರು, ಸಮಾಜ ಸೇವಕರು ಮತ್ತು ಗಣ್ಯರು ಹಾಗೂ ಎಲ್ಲಾ ಆಸಕ್ತಿ ನಾಗರೀಕರು ಸಭೆಗೆ ಆಗಮಿಸಿ ತಮ್ಮ ಸೂಕ್ತ ಸಲಹೆಗಳನ್ನು ನೀಡಬೇಕೆಂದು ಮಳವಳ್ಳಿ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ವಯಂ ಉದ್ಯೋಗ; ಅರ್ಜಿ

**ಮಂಡ್ಯ:** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ 2023-24 ನೇ ಸಾಲಿನ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಸ್ವಯಂ ಉದ್ಯೋಗ ಯೋಜನೆಯಡಿ ಸಹಾಯಧನಕ್ಕೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ವ್ಯಾಪಾರ, ಕೃಷಿ ಮತ್ತು ಸೇವಾವಲಯದಲ್ಲಿ ಬರುವ ಆರ್ಥಿಕ ಚಟುವಟಿಕೆಗಾಗಿ ಬ್ಯಾಂಕುಗಳ ಸಹಯೋಗದೊಂದಿಗೆ ಪಡೆಯುವ ಸಾಲಕ್ಕಾಗಿ ನಿಗಮದಿಂದ ಸಹಾಯಧನ ಸೌಲಭ್ಯ ಘಟಕದ ವೆಚ್ಚ ಶೇ.33 ರ ಅಥವಾ ಗರಿಷ್ಠ ರೂ. 1.00 ಲಕ್ಷಗಳ ಸಹಾಯಧನ ನೀಡಲಾಗುವುದು. ಆಸಕ್ತ ಅಲ್ಪಸಂಖ್ಯಾತ ಫಲಾನುಭವಿಗಳು ಎಲ್ಲಾ ದಾಖಲೆಗಳ ಸಹಿತ www.kmdc.karnataka.gov.in ವೆಬ್ ಸೈಟ್ ಮೂಲಕ ಆನ್ ಲೈನ್ ಅರ್ಜಿ ಸಲ್ಲಿಸಬಹುದಾಗಿದ್ದು, ಫೆಬ್ರವರಿ 29 ಕೊನೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ. ಸಂ:08232-220186 ಅಥವಾ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಯನ್ನು ಸಂಪರ್ಕಿಸಬಹುದು.

## ಇಂದು ಬಹಿರಂಗ ಹರಾಜು

**ಮೈಸೂರು:** ಆಡಳಿತ ತರಬೇತಿ ಸಂಸ್ಥೆಯ ಗಣಕ ಶಾಖೆಯಲ್ಲಿನ ಅನುಪಯುಕ್ತ ವಸ್ತುಗಳನ್ನು ಬಹಿರಂಗ ಹರಾಜಿನ ಮೂಲಕ ವಿಲೇವಾರಿ ಮಾಡಲು ಫೆ. 15 ರಂದು ಮಧ್ಯಾಹ್ನ 12 ಗಂಟೆಗೆ ಆಡಳಿತ ತರಬೇತಿ ಸಂಸ್ಥೆ ಆವರಣದಲ್ಲಿ ಬಹಿರಂಗ ಹರಾಜು ಮಾಡಲಾಗುತ್ತಿದೆ. ಹರಾಜಿಗೆ ಇಟ್ಟಿರುವ ಗಣಕ ಶಾಖೆಯಲ್ಲಿನ ಅನುಪಯುಕ್ತ ವಸ್ತುಗಳನ್ನು ಫೆ. 12 ರಿಂದ ಫೆ. 15 ರೊಳಗೆ ಪರಿವೀಕ್ಷಿಸಬಹುದಾಗಿರುತ್ತದೆ. ಆಸಕ್ತರು ಮುಂಗಡವಾಗಿ ರೂ.1,500 ಠೇವಣಿ ಭರಿಸಿ ಬಹಿರಂಗ ಹರಾಜಿನಲ್ಲಿ ಭಾಗವಹಿಸಬಹುದು.

# ಯುವ 2.0 ಯೋಜನೆಗೆ ಮೈಸೂರಿನ ಯುವ ಬರಹಗಾರ ಆಯ್ಕೆ

**ಮೈಸೂರು:** ಭಾರತದ ಸರ್ಕಾರದ ಅಧೀನದ ಕೇಂದ್ರ ಶಿಕ್ಷಣ ಸಚಿವಾಲಯವು ಭಾರತದಲ್ಲಿರುವ ಯುವ ಬರಹಗಾರರನ್ನು ಉತ್ತೇಜಿಸುವ ನಿಟ್ಟಿನಲ್ಲಿ PMs Scheme for Mentoring Young Authors ಎಂಬ ಯೋಜನೆಯನ್ನು ರೂಪಿಸಿದ್ದು, ರಾಷ್ಟ್ರೀಯ ಮಟ್ಟದಲ್ಲಿ ನಡೆದ ಈ ಯೋಜನೆಗೆ ಕರ್ನಾಟಕದಿಂದ ಮಹೇಶ್ ಹಿರೇಮಠ ಎಂಬ ಮೈಸೂರಿನ ಯುವ ಬರಹಗಾರ ಆಯ್ಕೆಯಾಗಿದ್ದಾರೆ.

ಈ ಸ್ಪರ್ಧೆಗೆ ಭಾರತದ ವಿವಿಧ ಭಾಷೆಗಳಿಂದ ಸುಮಾರು 30 ಸಾವಿರಕ್ಕೂ ಅಧಿಕ ಯುವ ಬರಹಗಾರರ ಪ್ರಸ್ತಾವನೆಗಳು ಬಂದಿದ್ದವು. ಅವುಗಳಲ್ಲಿ ಅಂತಿಮವಾಗಿ 200 ಪ್ರಸ್ತಾವನೆಗಳನ್ನು ಆಯ್ಕೆ ಮಾಡಿ, 2023ರ ಅಕ್ಟೋಬರ್ 25 ಮತ್ತು 26 ರಂದು ನವದೆಹಲಿಯ ನ್ಯಾಷನಲ್ ಬುಕ್ ಟ್ರಸ್ಟ್ ನಲ್ಲಿ ಉನ್ನತ ತಜ್ಞರ ಸಮಿತಿಯು 200 ಯುವ ಬರಹಗಾರರ ನೇರ ಸಂದರ್ಶನ ನಡೆಸಿತು. ಅಂತಿಮವಾಗಿ 41 ಯುವ ಬರಹಗಾರರನ್ನು ಮಾತ್ರ ಆಯ್ಕೆ ಮಾಡಿತು. ಹೀಗೆ ಆಯ್ಕೆಯಾದ ಯುವ ಬರಹಗಾರರಲ್ಲಿ ಕನ್ನಡ ಭಾಷೆಯಿಂದ ಮಹೇಶ್ ಹಿರೇಮಠ ಅವರು ಮಾತ್ರ ಆಯ್ಕೆಯಾಗಿದ್ದಾರೆ.

**ವಿಶೇಷತೆ :** ಭಾರತದ ಗೌರವಾನ್ವಿತ ರಾಷ್ಟ್ರಪತಿಗಳು ಯುವ 2.0 ಯೋಜನೆಗೆ ಆಯ್ಕೆಯಾದ 41 ಯುವ ಬರಹಗಾರರನ್ನು ಫೆಬ್ರುವರಿ 10ರಂದು ನವದೆಹಲಿಯಲ್ಲಿರುವ ರಾಷ್ಟ್ರಪತಿ ಭವನಕ್ಕೆ ಆಹ್ವಾನಿಸಿ ವಿಶೇಷ ಔತಣಕೂಟ ಏರ್ಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ. ಹೀಗೆ ಭಾರತದ ಗೌರವಾನ್ವಿತ ರಾಷ್ಟ್ರಪತಿಗಳಿಂದ ಅಭಿನಂದನೆಗೆ ಪಾತ್ರರಾದ ವಿವಿಧ ಭಾಷೆಗಳ ಯುವ ಬರಹಗಾರರಲ್ಲಿ ಮಹೇಶ್ ಹಿರೇಮಠ ಅವರು ಮಾತ್ರ ಕನ್ನಡ ಭಾಷೆಯನ್ನು ಪ್ರತಿನಿಧಿಸಿದ್ದರು.



» **ಸುಮಾರು 30 ಸಾವಿರಕ್ಕೂ ಅಧಿಕ ಯುವ ಬರಹಗಾರರ ಪ್ರಸ್ತಾವನೆ**

### ಯೋಜನೆ ಕುರಿತು :

**ಈ ಯೋಜನೆಯಲ್ಲಿ ಆಯ್ಕೆಯಾಗುವ ಯುವ ಬರಹಗಾರರಿಗೆ ಪ್ರತಿ ತಿಂಗಳು 50 ಸಾವಿರ ರೂ. ಗಳ ಗೌರವಧನವನ್ನು 6 ತಿಂಗಳುಗಳ ಕಾಲ ಪುಸ್ತಕ ಬರವಣಿಗೆಗಾಗಿ ನೀಡಲಾಗುತ್ತದೆ. ನಂತರ ನ್ಯಾಷನಲ್ ಬುಕ್ ಟ್ರಸ್ಟ್ ನವದೆಹಲಿ ಈ ಸಂಸ್ಥೆ ಪುಸ್ತಕ ಪ್ರಕಟಿಸಿ, ಭಾರತದ 22 ಭಾಷೆಗಳಿಗೆ ಈ ಪುಸ್ತಕವನ್ನು ಅನುವಾದ ಕೂಡಾ ಮಾಡಲಾಗುತ್ತದೆ.**

### ಪುಸ್ತಕ ಪ್ರಸ್ತಾವನೆಯ ವಿಶೇಷತೆ

ಈ ಸ್ಪರ್ಧೆಗೆ ಯುವ ಬರಹಗಾರ ಮಹೇಶ್ ಹಿರೇಮಠ ಅವರ ?ಪ್ರಜಾಪ್ರಭುತ್ವದ ರಾಯಭಾರಿಗಳು?ಎಂಬ ಪ್ರಸ್ತಾವನೆ ಆಯ್ಕೆಯಾಗಿದೆ. ಪ್ರಜಾಪ್ರಭುತ್ವದ ರಾಯಭಾರಿಗಳು ಪ್ರಸ್ತಾವನೆಯು ಕನ್ನಡ ವಚನ ಸಾಹಿತ್ಯದಲ್ಲಿರುವ ಪ್ರಜಾತಾಂತ್ರಿಕ ಮೌಲ್ಯಗಳ ಮೇಲೆ ಬೆಳಕು ಚೆಲ್ಲುತ್ತದೆ. 12ನೇ ಶತಮಾನದ ಸುಮಾರು 211ಕ್ಕೂ ಹೆಚ್ಚು ವಚನಕಾರರ 25 ಸಾವಿರಕ್ಕೂ ಹೆಚ್ಚು ವಚನಗಳಲ್ಲಿ ಅಡಗಿರುವ ಪ್ರಜಾತಾಂತ್ರಿಕ ವಿಚಾರಧಾರೆಗಳನ್ನು 21ನೇ ಶತಮಾನದ ಯುವ ಪೀಳಿಗೆಗೆ ತಲುಪಿಸುವ ಮಹತ್ವದ ಉದ್ದೇಶವನ್ನು ?ಪ್ರಜಾಪ್ರಭುತ್ವದ ರಾಯಭಾರಿಗಳು ಪುಸ್ತಕ ಹೊಂದಿದೆ. ಅಗಾಧವಾದ ವಚನ ಸಾಹಿತ್ಯದ ವಿಚಾರಧಾರೆಯಲ್ಲಿ ಹೆಕ್ಕಿದಷ್ಟು ಹೊಸ ವಿಚಾರಗಳು ಹರಿದು ಬರುತ್ತವೆ. ಕನ್ನಡ ವಚನಕಾರರ ವಿಚಾರಧಾರೆಗಳು ಎಲ್ಲ ದೃಷ್ಟಿಯಿಂದಲೂ ವಿಶ್ವಮಾನ್ಯವಾಗಿವೆ. ಪ್ಲೇಟೋನ ಚಿಂತನೆಗಳು ಮತ್ತು ಬುದ್ಧನ ಸಂಘಜೀವನ ಕ್ರಮ ಬಿಟ್ಟರೆ ವಿಶ್ವಕ್ಕೆ ಪ್ರಜಾಪ್ರಭುತ್ವದ ಕಲ್ಪನೆಯೇ ಇರಲಿಲ್ಲ. 12ನೇ ಶತಮಾನದಲ್ಲಿ ಅಮೆರಿಕ ದೇಶವೇ ಇರಲಿಲ್ಲ. ಇಂಗ್ಲೇಂಡ್, ಫ್ರಾನ್ಸ್, ಜರ್ಮನಿ, ಚೀನಾ, ರಷ್ಯಾ ಹೀಗೆ ಎಲ್ಲೆಡೆ ರಾಜಪ್ರಭುತ್ವದ ಅಟ್ಟಹಾಸವೇ ಮೆರೆಯುತ್ತಿತ್ತು. ಆ ಮಧ್ಯಯುಗದಲ್ಲಿ ಕನ್ನಡ ವಚನಕಾರರು ಪ್ರಜಾಪ್ರಭುತ್ವದ ಕನಸು ಕಂಡರು. ರಾಜ್ಯಶಕ್ತಿಯನ್ನು ಪ್ರಜಾಪ್ರಭುತ್ವ ಶಕ್ತಿಯಾಗಿ ಪರಿವರ್ತಿಸುವ ಮೊದಲು ಜನರಲ್ಲಿ ಪ್ರಜಾಪ್ರಭುತ್ವದ ಪ್ರಜ್ಞೆ ತುಂಬ ಬಯಸಿದರು. ಆ ಮೂಲಕ ಇದ್ದ ಸಂಪ್ರದಾಯಬದ್ಧ ಸಮಾಜದಲ್ಲೇ ಪ್ರಜಾಪ್ರಭುತ್ವವಾದಿ ಪರ್ಯಾಯ ಸಮಾಜ ರಚಿಸುವ ಮಹತ್ವದ ಕಾರ್ಯಕ್ಕೆ 12ನೇ ಶತಮಾನದಲ್ಲೇ ವಚನಕಾರರು ಮುನ್ನಡಿ ಬರೆದರು. 12ನೇ ಶತಮಾನದಲ್ಲಿ ವಚನಗಳನ್ನು ಬರೆದು ಪ್ರಜಾತಾಂತ್ರಿಕ ಮೌಲ್ಯಗಳ ನವಸಮಾಜದ ರೂಪುರೇಷೆಗಳನ್ನು ತೋರಿಸಿಕೊಟ್ಟರು. ಈ ಎಲ್ಲ ಹೊಸ ವಿಚಾರಧಾರೆಯನ್ನು ಹೆಕ್ಕಿ ತೆಗೆಯುವ, ಆ ಮೂಲಕ ವಚನಗಳಲ್ಲಿ ಅಡಗಿರುವ ಪ್ರಜಾತಾಂತ್ರಿಕ ಮೌಲ್ಯಗಳನ್ನು ಮತ್ತು ಪರಿಕಲ್ಪನೆಗಳನ್ನು ಗುರುತಿಸುವುದೇ ಈ ಪುಸ್ತಕದ ಮುಖ್ಯ ಆಶಯವಾಗಿದೆ.

# ಬಸವೇಶ್ವರರ ಭಾವಚಿತ್ರ ಅಳವಡಿಕೆ ಆದೇಶ ಲಿಂಗಾಯತ ಮಹಾಸಭಾ ಸ್ವಾಗತ

ಮಂಡ್ಯ : ವಿಶ್ವಗುರು ಬಸವೇಶ್ವರರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಬಸವಣ್ಣನವರ ಭಾವಚಿತ್ರವನ್ನು ಹಾಕಬೇಕೆಂದು ಆದೇಶಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಐತಿಹಾಸಿಕ ನಡೆಯನ್ನು ಲಿಂಗಾಯತ ಮಹಾಸಭಾ ಅಧ್ಯಕ್ಷ ಎಂ.ಎಸ್.ಮಂಜುನಾಥ್ ಬೆಟ್ಟಹಳ್ಳಿ ಸ್ವಾಗತಿಸಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಜಾತಿ, ವರ್ಗ, ವರ್ಣರಹಿತ ಮಾನವೀಯ ಧರ್ಮಸಹಿತ ಲಿಂಗಾಯತ ಧರ್ಮ ಸ್ಥಾಪನೆಯ ಮೂಲಕ ಸರ್ವರನ್ನೂ ಒಪ್ಪಿ ಅಪ್ಪಿಕೊಂಡ ಮಹಾಮಾನವತಾವಾದಿ ಬಸವಣ್ಣನವರ ಆದರ್ಶವನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಂಡು ಸ್ವಾಸ್ಥ್ಯ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದವರು ತಿಳಿಸಿದ್ದಾರೆ.




ಮಂಡ್ಯ ಜಿಲ್ಲೆಯ ಜಿಲ್ಲಾಪಂಚಾಯತ್ ಸಭಾಂಗಣ, ಡಿಸಿ, ಎಸಿ, ತಹಸೀಲ್ದಾರ್, ಗ್ರಾಮಪಂಚಾಯಿತಿ ಕಚೇರಿ, ಪೊಲೀಸ್ ಠಾಣೆಗಳು ಸೇರಿದಂತೆ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಸಾಂಸ್ಕೃತಿಕ ನಾಯಕ ಬಸವೇಶ್ವರರ ಭಾವಚಿತ್ರವನ್ನು ಅಳವಡಿಸಬೇಕೆಂದು ಆಗ್ರಹಿಸಿರುವ ಅವರು, ಸಿಎಂ ಸಿದ್ದರಾಮಯ್ಯನವರು ಹನ್ನೆರಡನೇ ಶತಮಾನದ ಶಿವಶರಣರ ಆಶಯದಂತೆ ಕಾಯಕ, ದಾಸೋಹ, ಸರ್ವರಿಗೂ ಸಮಪಾಲು ನೀಡುವ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿರುವುದು ಅಭಿನಂದನೀಯ ಎಂದು ತಿಳಿಸಿದ್ದಾರೆ. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಕಚೇರಿ ಎದುರು ಬಸವಣ್ಣನವರ ಅಶ್ವರೂಢ ಪುತ್ಥಳಿಯನ್ನು ಸ್ಥಾಪಿಸಬೇಕು. ಕನ್ನಡ ಭಾಷೆಗೆ ಮೆರಗು ತಂದುಕೊಟ್ಟ ವಚನಸಾಹಿತ್ಯದ ಅಧ್ಯಯನಕ್ಕೆ ವಚನ ವಿಶ್ವವಿದ್ಯಾನಿಲಯವನ್ನು ತೆರೆಯಬೇಕು. ಮಠಾಧಿಪತಿಗಳು ಬಸವಣ್ಣನವರ ವಿಚಾರವನ್ನು ಪ್ರಚಾರ ಮಾಡಲು ಇನ್ನಾದರೂ ಮುಂದಾಬೇಕೆಂದು ಆಗ್ರಹಿಸಿದ್ದಾರೆ. ಲಿಂಗಾಯತ ಮಠಗಳ ಪೀಠಾಧಿಪತಿಗಳು ಹನ್ನೆರಡನೇ ಶತಮಾನದ ಶಿವಶರಣರ ವಿಚಾರಗಳನ್ನು ಜನತೆಗೆ ಮುಟ್ಟಿಸಲು ಮುಂದಾಗಬೇಕಾದ ಅನಿವಾರ್ಯತೆ ಎದುರಾಗಿದೆ. ಬಸವಣ್ಣ ಎಂದರೆ ನಾಲ್ಕು ಕಾಲಿನ ಎತ್ತುಗಳನ್ನು ತೋರಿಸುವ ಪೂಜಿಸುವ ಮೌಢ್ಯದ ಬಗ್ಗೆ ಮಠಾಧೀಶರು ಜನರಲ್ಲಿ ಜಾಗೃತಿ ಮೂಡಿಸಬೇಕು. ಲಿಂಗಾಯತ ಮಠಗಳಲ್ಲಿ ವಿಶ್ವಗುರು ಬಸವಣ್ಣನವರ ಪ್ರತಿಮೆಯನ್ನು ಸ್ಥಾಪಿಸುವ ಮೂಲಕ ಬಸವಪ್ರಜ್ಞೆಯನ್ನು ಹೆಚ್ಚಿಸಬೇಕೆಂದು ಮಂಜುನಾಥ್ ಮನವಿ ಮಾಡಿದ್ದಾರೆ.

## ವಿಕಲಚೇತನರಿಂದ ಅರ್ಜಿ

**ಮಂಡ್ಯ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ವಿಕಲಚೇತನರ ಗ್ರಾಮೀಣ ಪುನರ್ವಸತಿ ಯೋಜನೆಯಡಿ ನಗರ ಪುನರ್ವಸತಿ ಕಾರ್ಯಕರ್ತರನ್ನು ಆಯ್ಕೆ ಮಾಡಲು ಶ್ರೀರಂಗಪಟ್ಟಣ ಪುರಸಭೆ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ವಿಕಲಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಎಸ್ ಎಸ್ ಎಲ್ ಸಿ ಯಲ್ಲಿ ಉತ್ತೀರ್ಣರಾದ 18 ರಿಂದ 45 ವರ್ಷದೊಳಗಿನ ಅಂಗವಿಕಲರು ನಗರ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಫೆಬ್ರವರಿ 22 ರೊಳಗೆ ಶ್ರೀರಂಗಪಟ್ಟಣ ತಾಲೂಕಿನ ವಿವಿಧ ದೇಶ ಪುನರ್ವಸತಿ ಕಾರ್ಯಕರ್ತರು ತಾಲೂಕು ಪಂಚಾಯತ್ ಕಾರ್ಯಾಲಯದಿಂದ ಅರ್ಜುನ ಮೂಲೆ ಪಡೆದು ಅಗತ್ಯ ದಾಖಲೆಗಳೊಂದಿಗೆ ನಿಗದಿತ ಅವಧಿ ಒಳಗೆ ಅರ್ಜಿ ಸಲ್ಲಿಸಬೇಕೆಂದು ಅರ್ಜಿ ಸಲ್ಲಿಸಬೇಕು ಹೆಚ್ಚಿನ ಮಾಹಿತಿಗಾಗಿ ದೂ. ಸಂ: 8453609826 ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

## ಪ್ರವೇಶಾತಿ ಪ್ರಾರಂಭ

**ರಾಮನಗರ:** ಸ್ನಾತಕ/ಸ್ನಾತಕೋತ್ತರ ಪದವಿಗಳಾದ ಬಿ.ಎ., ಬಿ.ಕಾಂ.,(ಮೂರು ವರ್ಷ/ವಾರ್ಷಿಕ ಪರೀಕ್ಷೆ) ಬಿ.ಲಿಬ್.ಐ.ಎಸ್ಸಿ., ಬಿ.ಬಿ.ಎ., ಬಿ.ಎಸ್ಸಿ., ಬಿ.ಸಿ.ಎ., ಬಿ.ಎಸ್.ಡಬ್ಲ್ಯೂ?ಯ., ಎಂ.ಎ., ಎಂ.ಕಾಂ., ಎಂ.ಬಿ.ಎ., ಎಂ.ಎಸ್ಸಿ., ಎಂ.ಎಸ್.ಡಬ್ಲ್ಯೂ?ಯ., ಎಂ.ಸಿ.ಎ., ಎಂ.ಲಿಬ್.ಐ.ಎಸ್.ಸಿ., ಪಿ.ಜಿ. ಡಿಪ್ಲೊಮಾ, ಡಿಪ್ಲೊಮಾ ಮತ್ತು ಸರ್ಟಿಫಿಕೇಟ್ ಕೋರ್ಸ್ಗಳಿಗೆ ಪ್ರವೇಶಾತಿಯು ಜನವರಿ 9 ರಿಂದ ಪ್ರಾರಂಭವಾಗಿದ್ದು, ಪ್ರವೇಶಾತಿ ಬಯಸುವ ವಿದ್ಯಾರ್ಥಿಗಳು ಕರ್ನಾಟಕ ರಾಜ್ಯ ಮುಕ್ತ ವಿದ್ಯಾವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್ತಿತಿತಿ. ಇರಣಟಥಿಣಡಿಣ.ಚಿಛಿ.ಟಿನಲ್ಲಿ ಆನ್‌ಲೈನ್ ಅಡ್ಮಿಷನ್ ಪೋರ್ಟಲ್ ಮುಖಾಂತರ ಪ್ರವೇಶಾತಿ ಅರ್ಜಿಯನ್ನು ಭರ್ತಿ ಮಾಡಿ, ಅಗತ್ಯ ದಾಖಲೆಗಳನ್ನು ಶಾಂತಿನಿಕೇತನ ಸಮೂಹ ಶಿಕ್ಷಣ ಸಂಸ್ಥೆಯಲ್ಲಿರುವ ಕರಾಮುವಿನ ರಾಮನಗರ ಪ್ರಾದೇಶಿಕ ಕೇಂದ್ರಕ್ಕೆ ಸಲ್ಲಿಸಿ ಇದೇ ಮಾರ್ಚ್ 31ರೊಳಗಾಗಿ ಪ್ರವೇಶಾತಿ ಪಡೆಯಬಹುದಾಗಿರುತ್ತದೆ. ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಎಲ್ಲಾ ಭಾನುವಾರಗಳು, ಎರಡನೇ ಮತ್ತು ನಾಲ್ಕನೇ ಶನಿವಾರಗಳಂದು ರಾಮನಗರ ಪ್ರಾದೇಶಿಕ ಕೇಂದ್ರ ಕಚೇರಿಯು ಎಂದಿನಂತೆ ಕಾರ್ಯನಿರ್ವಹಿಸುತ್ತಿದ್ದು, ಇದರ ಸದುಪಯೋಗವನ್ನು ಹೆಚ್ಚಿನ ವಿದ್ಯಾರ್ಥಿಗಳು ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ನಿರ್ದೇಶಕರು, ಕರಾಮುವಿ ರಾಮನಗರ ಪ್ರಾದೇಶಿಕ ಕೇಂದ್ರ, ನಂ. 103, ಇ ಬ್ಲಾಕ್, ಶಾಂತಿನಿಕೇತನ ಸಮೂಹ ಶಿಕ್ಷಣ ಸಂಸ್ಥೆ, ಬಿ.ಎಂ.ರಸ್ತೆ, ವಿವೇಕಾನಂದನಗರ, ರಾಮನಗರ-562159. ದೂ. ಸಂಖ್ಯೆ:-9448668880, 8861732487, 9743184848 9900356226 ಹಾಗೂ 8618501602 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಾದೇಶಿಕ ನಿರ್ದೇಶಕ ಗಿರೀಶ್ ಎಚ್.ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಚಾರಿ ನಿಯಮ ಪಾಲಿಸಿ, ಜೀವ ಉಳಿಸಿ

**ಚಿಕ್ಕಬಳ್ಳಾಪುರ:** ಜೀವನದ ಸುಸ್ತಿರ ಭವಿಷ್ಯಕ್ಕಾಗಿ ರಸ್ತೆ ಸುರಕ್ಷತೆಯು ಬಹಳ ಮುಖ್ಯ. ಹೆಚ್ಚಿನ ರಸ್ತೆ ಅಪಘಾತಗಳಿಗೆ ಕಾರಣ ರಸ್ತೆ ನಿಯಮಗಳನ್ನು ಪಾಲಿಸದೆ ಉಲ್ಲಂಘಿಸುತ್ತಿರುವುದು ಎಂದು ವಿದ್ಯಾರ್ಥಿಗಳಿಗೆ ಬೆಂಗಳೂರು ಗ್ರಾಂಮಾತರ ಜಂಟಿ ಸಾರಿಗೆ ಅಧಿಕಾರಿ ಗಾಯಿತ್ರಿ ದೇವಿ ಸಲಹೆ ನೀಡಿದರು.

ಮಂಗಳವಾರ ಸಾರಿಗೆ ಇಲಾಖೆ, ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ, ಚಿಕ್ಕಬಳ್ಳಾಪುರ ಹಾಗೂ ಬಿ.ಜಿ.ಎಸ್. ಶಿಕ್ಷಣ ಸಂಸ್ಥೆ ಇವರ ಸಹಯೋಗದೊಂದಿಗೆ ಬಿ.ಜಿ.ಎಸ್ ಕಾಲೇಜಿನ ಸಂಭಾಗಣದಲ್ಲಿ ನಡೆದ 35ನೇರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸದ ಸಮರೋಪ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ಸರ್ಕಾರದ ಆದೇಶದಂತೆ ಪ್ರತಿವರ್ಷವೂ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸ ಆಚರಿಸಲಾಗುತ್ತದೆ. ಜನವರಿ 15 ರಿಂದ ಫೆಬ್ರವರಿ 14 ವರೆಗೂ ಒಂದು ತಿಂಗಳ ಕಾಲ ಕಾರ್ಯಕ್ರಮದ ಅಂಗವಾಗಿ ಚಾಲಕರಿಗೆ ಮತ್ತು ವಾಹನ ಮಾಲೀಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ರಸ್ತೆ ನಿಯಮಗಳ ಕುರಿತು ಜಾಗೃತಿ ಮೂಡಿಸಲಾಯಿತು ಎಂದರು.

ಚಾಲಕರು ಮಾಡುವ ತಪ್ಪುಗಳಿಂದ ಅಪಘಾತಗಳಾಗಿ ಅಮಾಯಕರು ಜೀವ ಕಳೆದುಕೊಂಡು ಅವರ ಅವಲಂಬಿತರು ಬೀದಿ ಪಾಲಾಗುತ್ತಿದ್ದಾರೆ. ಆದ್ದರಿಂದ ಚಾಲಕರು ವಾಹನದಲ್ಲಿ ಕುಳಿತ ಕೂಡಲೇ ತಮ್ಮ ಕುಟುಂಬ ಮತ್ತು ಅವಲಂಬಿತರನ್ನು ನೆನಪಿಸಿಕೊಳ್ಳಬೇಕು. ಎಲ್ಲಕ್ಕಿಂತ ಜೀವ ಮುಖ್ಯ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು. ಕುಡಿದು ವಾಹನ ಚಾಲನೆ ಮಾಡುವುದು, ಮೊಬೈಲ್‌ನಲ್ಲಿ ಮಾತನಾಡುತ್ತಾ ಚಾಲನೆ ಮಾಡುವುದನ್ನು ಕಡ್ಡಾಯವಾಗಿ ನಿಲ್ಲಿಸಬೇಕು ಎಂದು ತಿಳಿಸಿದರು.

ಪೊಲೀಸ್ ಇಲಾಖೆಯ ಉಪಾಧೀಕ್ಷಕ ಶಿವಕುಮಾರ್ ಅವರು ಮಾತನಾಡಿ, ಶಿಸ್ತು ಬದ್ದ ಚಾಲನೆ ಹಾಗೂ ಮಿತ ಚಾಲನೆ ಮಾಡಬೇಕು. ಚಾಲಕರು ರಸ್ತೆ ನಿಯಮಗಳನ್ನು ಹಾಗೂ ಸಂಚಾರಿ ಚಿಹ್ನೆಗಳನ್ನು ಚೆನ್ನಾಗಿ ಅರಿತುಕೊಳ್ಳಬೇಕು. ಸ್ವಲ್ಪವೂ ಬೇಜವಾಬ್ದಾರಿ ಹಾಗೂ ನಿರ್ಲಕ್ಷ್ಯತೆ ತೋರದೆ ನಿಯಮ ಪಾಲನೆ ಮಾಡಬೇಕು. ದ್ವಿಚಕ್ರ ವಾಹನ ಸವಾರರು ಹೆಲ್ಮೆಟ್ ಧರಿಸಿರಬೇಕು. ವೇಗದ ಮಿತಿ ಇರಬೇಕು. ಬೈಕ್ ಚಲಾಯಿಸುವಾಗ ವೀಲಿಂಗ್ ಮಾಡಬಾರದು. ಮದ್ಯಪಾನ ಮಾಡಿ ವಾಹನ ಚಾಲನೆ ಮಾಡಬಾರದು. ಸಂಚಾರ ನಿಯಮಗಳನ್ನು ಪಾಲನೆ ಮಾಡಿದರೆ ಸಾಕಷ್ಟು ಅಪಘಾತಗಳನ್ನು ತಡೆಗಟ್ಟಬಹುದು ಮತ್ತು ವಿದ್ಯಾರ್ಥಿಗಳು ಮೊಬೈಲ್ ಬಳಕೆ ಮಾಡುವುದರಿಂದಾಗುವ ದುಷ್ಪರಿಣಾಮಗಳ ಬಗ್ಗೆ ಮಾಹಿತಿ ನೀಡಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ಎ.ವಿವೇಕಾನಂದ ರವರು ಮಾತನಾಡಿ, ವಿದ್ಯಾರ್ಥಿಗಳಿಗೆ ಮೊಬೈಲ್ ನಲ್ಲಿ ಎಲ್.ಎಲ್ ಪರವಾನಗಿ, ಆರ್.ಟಿ.ಓ ಸೌಲಭ್ಯಗಳನ್ನು ಪಡೆಯುವ ಬಗ್ಗೆ ವಿವರಿಸಿದರು. ಎಲ್ಲ ವಾಹನ ಚಾಲಕರು ಹಾಗೂ ಮಾಲೀಕರು ವಾಹನಗಳಿಗೆ ಸಂಬಂಧಪಟ್ಟ ದಾಖಲೆಗಳ ಒಂದು ಸೆಟ್ ಅನ್ನು ವಾಹನದಲ್ಲಿ ಜೋಪಾನವಾಗಿ ಇಟ್ಟಿರಬೇಕು. ದಾಖಲೆಗಳು ಇಲ್ಲದೆ ರಸ್ತೆಗೆ ಬರಬಾರದು. ಚಾಲನಾ ಪರವಾನಗಿ, ವಾಹನದ ಆರ್ .ಸಿ, ವಿಮೆ ದಾಖಲೆ, ಎಮಿಷನ್ ಪ್ರಮಾಣ ಪತ್ರ, ಮತ್ತಿತರ ವಿವರ ಹೊಂದಿರಬೇಕು. ಡ್ರೈವಿಂಗ್ ಒಂದು ಕಲೆ ಎಂದು ತಿಳಿಸಿ, ಕಾನೂನುಗಳ ಬದಲಾಗಿ ಕಾನೂನಿನ ನಿಯಮಗಳು ಬದಲಾಗಿದ್ದು, ಉಲ್ಲಂಘನೆಗೆ ದಂಡ ಹೆಚ್ಚಿಸಲಾಗಿದೆ ಎಂದು ತಿಳಿಸಿದರು.

ಬಿ.ಜಿ.ಎಸ್ ಕಾಲೇಜಿನ ಆವರಣದಲ್ಲಿ 35ನೇರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಪ್ರಯುಕ್ತ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಹಿರಿಯ ಮೋಟಾರ್ ವಾಹನ ನೀರಿಕ್ಷಕ ಮಹದೇವಪ್ಪ, ಕಾಲೇಜಿನ ಪ್ರಾಂಶುಪಾಲರಾದ ಜಿ.ಟಿ.ರಾಜು ಹಾಗೂ ಸಾರಿಗೆ ಇಲಾಖೆಯ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದರು.

# ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗಬಾರದು

**ಕೋಲಾರ:** ಪ್ರಸ್ತುತ ಬೇಸಿಗೆ ಶುರುವಾಗಿದ್ದು, ಜಿಲ್ಲೆಯಲ್ಲಿ ಯಾವ ಗ್ರಾಮಗಳಲ್ಲೂ ಜಾನುವಾರುಗಳು ಹಾಗೂ ಜನರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಹಾಗೂ ಬರಗಾಲವನ್ನು ಸಮರ್ಥವಾಗಿ ಎದುರಿಸಲು ಜಿಲ್ಲೆಯ ಎಲ್ಲಾ ಇಲಾಖೆಗಳು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಹೇಳಿದರು.



ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪ್ರಸ್ತುತ ಜಿಲ್ಲೆಯ ಆರೂ ತಾಲ್ಲೂಕುಗಳನ್ನೂ ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ. ಸದ್ಯದ ಪರಿಸ್ಥಿತಿಯಲ್ಲಿ ಜಿಲ್ಲೆಯಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳ ಮೇವು ಸಂಬಂಧ ಸಮಸ್ಯೆ ಕಾಣುತ್ತಿಲ್ಲ ಆದರೆ ಮಾರ್ಚ್ ಮತ್ತು ಏಪ್ರಿಲ್ ಅಂತ್ಯದ ವೇಳೆಗೆ ಕೊಂಚ ಸಮಸ್ಯೆ ಕಾಣಬಹುದು ಅದಕ್ಕೆ ಮುಂಚೆಯೇ ಯಾವ ಯಾವ ಗ್ರಾಮಗಳಲ್ಲಿ ನೀರಿನ ಕೊರತೆ ಇದೆ ಅದನ್ನು ಪರಿಶೀಲಿಸಿ ತಕ್ಷಣ ಪಟ್ಟಿ ನೀಡಬೇಕು. ಯಾವ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು, ಟ್ಯಾಂಕರ್‌ಗಳು, ಬೋರ್‌ವೆಲ್‌ಗಳು ಕೆಟ್ಟಿವೆಯೋ ಅವುಗಳು ದುರಸ್ತಿಯಾಗಿ ಸಮರ್ಪಕವಾಗಿ ನೀರು ಪೂರೈಕೆಯಾಗಬೇಕು. ಜೊತೆಗೆ ಜಾನುವಾರುಗಳ ಕುಡಿಯುವ ನೀರಿನ ಮೂಲಗಳು ಹಾಗೂ ಸಾರ್ವಜನಿಕ ತೊಟ್ಟಿಗಳನ್ನು ಶುಚಿಗೊಳಿಸಿ ನೀರು ತುಂಬಿಸಬೇಕು. ಜಾನುವಾರುಗಳ ಮೇವಿಗೆ ಸಂಬಂಧಿಸಿದಂತೆ ಪಶು ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿ ಸಾಕಷ್ಟು ಮೇವಿನ ಕಿಟ್‌ಗಳ ಸಂಗ್ರಹಣೆ ಮಾಡಿಟ್ಟುಕೊಳ್ಳುವಂತೆ ಸೂಚಿಸಿದರು

ಸರ್ಕಾರದ ಮಹತ್ವಕಾಂಕ್ಷೆ ಯೋಜನೆಗಳಾದ ಐದು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶವನ್ನು ಹೋಬಳಿ ಮಟ್ಟದಲ್ಲಿ ಸ್ಥಳೀಯ ಶಾಸಕರ ಸಹಕಾರದೊಂದಿಗೆ ಆಯೋಜಿಸಬೇಕೆಂದು ಅವರು ಹೇಳಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಣಾಧಿಕಾರಿ ಪದ್ಮ ಬಸವಂತಪ್ಪ, ಅಪರ ಜಿಲ್ಲಾಧಿಕಾರಿ ಡಾ. ಶಂಕರ್ ವಣಿಕ್ಯಾಳ್, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

### ನಿವೃತ್ತ ಪ್ರಾಂಶುಪಾಲ ನಿಂಗೇಗೌಡರು(ಎನ್‌ಜಿ) ಸಲಹೆ

# ಹೋರಾಟ ನಿರಂತರವಾಗಿರಲಿ

**ಚನ್ನಪಟ್ಟಣ:** ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ರಮೇಶ್‌ಗೌಡರು ನಡೆಸುತ್ತಿರುವ ಹೋರಾಟ ಮುಂದಿನ ದಿನಗಳಲ್ಲಿ ಯಶಸ್ವಿಯಾಗುತ್ತದೆ. ಈನಿಟ್ಟಿನಲ್ಲಿ ಹೋರಾಟ ನಿರಂತರವಾಗಿರಲಿ ಎಂದು ನಿವೃತ್ತ ಪ್ರಾಂಶುಪಾಲರಾದ ನಿಂಗೇಗೌಡರು(ಎನ್‌ಜಿ) ಅಭಿಪ್ರಾಯಿಸಿದರು.



ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಬುಧವಾರ ನಡೆದ 133 ನೇ ದಿನದ ಹೋರಾಟದಲ್ಲಿ ಭಾಗವಹಿಸಿ ಮಾತನಾಡಿದ ಅವರು ಕಾವೇರಿ ನೀರು ಉಳಿಸಿಕೊಂಡು ಮೇಕೆದಾಟು ಅಣೆಕಟ್ಟೆಯಲ್ಲಿ ನೀರು ಸಂಗ್ರಹಿಸಿ ಬರದ ವೇಳೆ ಸದ್ಬಳಕೆ ಮಾಡಿಕೊಳ್ಳುವಂತೆ ರಮೇಶ್‌ಗೌಡರು ನಡೆಸುತ್ತಿರುವ ಹೋರಾಟ ಜನರ ಹಿತಕ್ಕಾಗಿ ನಡೆಸುತ್ತಿದ್ದು,

ಇಂತಹ ಹೋರಾಟಗಳಿಗೆ ಫಲಸಿಗುವುದರಲ್ಲಿ ಯಾವುದೆ ಅನುಮಾನ ಇಲ್ಲ. ಯಾವುದೇ ಸಮಸ್ಯೆಗಳ ಬಗ್ಗೆ ಅಧಿಕಾರಿವರ್ಗ ಹೇಳಿದಾಗ ಮಾತ್ರ ಜನತೆ ಎಚ್ಚೆತ್ತುಕೊಳ್ಳುತ್ತಾರೆ ಎಂಬುದಕ್ಕೆ ಇಷ್ಟು ದಿನಗಳಿಂದ ಹೋರಾಟ ಮಾಡುತ್ತಿರುವ ಬಗ್ಗೆ ಕಂಡೂ ಕಾಣದಂತೆ ಓಡಾಡಿದ ಜನತೆಗೆ ಇಂದು ಪಟ್ಟಣದಲ್ಲಿ ಕುಡಿಯುವ ನೀರಿಗೆ ಅಭಾವ ಉಂಟಾಗಿರುವ ಬಗ್ಗೆ ಜಲಮಂಡಳಿ ಮತ್ತು ನಗರಸಭೆಯಿಂದ ಪ್ರಚಾರ ಮಾಡಿದ ಬಳಿಕ ಜನರಿಗೆ ಹೋರಾಟದ ಬಗ್ಗೆ ಅರಿವಾಗುತ್ತಿದೆ. ಮುಂದಾದರೂ ಜನತೆ ಬೆಂಬಲ ನೀಡುವ ವಿಶ್ವಾಸ ಇದೆ ಎಂದು ಅಭಿಪ್ರಾಯಿಸಿದರು.

ವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡ ಮಾತನಾಡಿ, ರಾಜ್ಯದಲ್ಲಿ ಜುಲೈವರೆಗೆ ಮಳೆಯ ಅಭಾವ ಇರುತ್ತದೆ. ಈ ನಿಟ್ಟಿನಲ್ಲಿ ಸರ್ಕಾರವು ಈ ಅವಧಿಯಲ್ಲಿ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕಿ ತಳಪಾಯ ಹಾಕಲು ಸೂಕ್ತ ಕ್ರಮಕ್ಕೆ ಮುಂದಾಗಬೇಕು, ಈ ನಿಟ್ಟಿನಲ್ಲಿ ಬಿಜೆಪಿ ಸಂಸದರು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹಾಕಿ ಅರಣ್ಯ ಮತ್ತು ಪರಿಸರ ಇಲಾಖೆ ಮತ್ತಿತರ ಇಲಾಖೆಯಿಂದ ಎದುರಾಗಿರುವ ಸಮಸ್ಯೆಗಳಿಗೆ ಪರಿಹಾರ ಮಾಡಿ ಯೋಜನೆಗೆ ಅನುಮತಿ ಪಡೆಯಲು ಪಕ್ಷಾತೀತವಾಗಿ ಶ್ರಮಿಸಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ವೇದಿಕೆ ರಾಜ್ಯ ಉಪಾಧ್ಯಕ್ಷ ಬೆಳಕು ಶ್ರೀಧರ್, ತಾಲೂಕು ಗೌರವಾಧ್ಯಕ್ಷ ಚಿಕ್ಕಣ್ಣಪ್ಪ, ಹನುಮಂತನಗರ ವೆಂಕಟರಮಣ, ಚಿಕ್ಕಣ್ಣಪ್ಪನವರ ಕುಟುಂಬದ ಹೆಣ್ಣುಮಕ್ಕಳಾದ ಅನು, ಪವಿತ್ರ, ಮದು, ಸಾನ್ವಿ, ಪುನೀತ್, ರಾಜು, ರಮೇಶ್, ಮೆಣಸಿಗನಹಳ್ಳಿ ರಾಮಕೃಷ್ಣಪ್ಪ, ಸಿದ್ದಪ್ಪಾಜಿ, ಸಯ್ಯದ್ ಇತರರು ಇದ್ದರು.

# ಶಾಲೆ ಅಭಿವೃದ್ಧಿಗೆ ಸಹಕರಿಸಿ

**ಪಿರಿಯಾಪಟ್ಟಣ:** ಪಂಚಾಯಿತಿ ವ್ಯಾಪ್ತಿಯ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಅಗತ್ಯ ಸಹಕಾರ ಮತ್ತು ಪ್ರೋತ್ಸಾಹ ನೀಡಲು ಸಿದ್ಧರಿದ್ದೇವೆ ಎಂದು ಗ್ರಾಪಂ ಅಧ್ಯಕ್ಷ ಹೆಚ್.ಎನ್.ಕಾಮರಾಜ್ ತಿಳಿಸಿದರು. ಪಟ್ಟಣದ ಸರಕಾರಿ ಹಿರಿಯ ತಾಲೂಕಿನ ಹಿಟ್ನೆಹೆಬ್ಬಾಗಿಲು ಗ್ರಾಮ ಪಂಚಾಯಿತಿ ವತಿಯಿಂದ ಪ್ರೌಢಶಾಲಾ ಹಾಗೂ ಸರ್ಕಾರಿ ಹಿರಿಯ ಶಾಲೆಗಳಿಗೆ ಡ್ರಮ್ ಸಟ್ , ಕ್ರೀಡಾ ಸಾಮಾಗ್ರಿಗಳು ಹಾಗೂ ಲೇಖನಿ ಸಾಮಾಗ್ರಿಗಳನ್ನು ವಿತರಿಸಿ ಮಾತನಾಡಿದರು.

ಸರ್ಕಾರಿ ಶಾಲೆ ಅಭಿವೃದ್ಧಿ ಆಗುವುದರಿಂದ ಬಡವರ ಮಕ್ಕಳಿಗೂ ಶಿಕ್ಷಣಕ್ಕೆ ಅನುವುಮಾಡಿಕೊಟ್ಟಂತೆ ಆಗುತ್ತದೆ. ಈ ನಿಟ್ಟಿನಲ್ಲಿ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದು, ಸರ್ಕಾರ ಸಂಘ?ಸಂಸ್ಥೆಗಳು ನೀಡುವ ಅನುದಾನದ ಪ್ರೋತ್ಸಾಹದಿಂದ ಹೆಚ್ಚಿನ ಶಾಲೆಗಳು ಅಭಿವೃದ್ಧಿಗೊಳ್ಳಲಿವೆ. ಶಾಲಾ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆ, ಶೌಚಾಲಯ ನಿರ್ಮಾಣ, ಶಾಲಾ ಕಾಂಪೌಂಡ್, ಅಡುಗೆ ಮನೆ ನಿರ್ಮಾಣ, ಆಟದ ಮೈದಾನ ಸೇರಿದಂತೆ ರಾಜ್ಯದ ಗ್ರಾಮೀಣ ಪ್ರದೇಶದ ಶಾಲೆಗಳಿಗೆ ಹಲವು ಸೌಕರ್ಯಗಳನ್ನು ಒದಗಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಗ್ರಾಮ ಪಂಚಾಯಿತಿಗಳಿಗೆ ಅವಕಾಶ ಕಲ್ಪಿಸಿ, ಮಕ್ಕಳ ಭವಿಷ್ಯಕ್ಕೆ ಆಶಾದಾಯಕವಾಗಿ ಎಂದರು.

ಕೆಪಿಸಿಸಿ ಸದಸ್ಯ ಅನಿಲ್ ಕುಮಾರ್ ಮಾತನಾಡಿ ಶಿಕ್ಷಣವು ಮಕ್ಕಳನ್ನು ರೂಪಿಸು ಅಡಿಗಲ್ಲು ಇದ್ದಂತೆ, ವ್ಯಕ್ತಿತ್ವದ ಸಮಗ್ರ ಅಭಿವೃದ್ಧಿಯ ಗುರಿಯನ್ನು ಹೊಂದಿರುವ ಶೈಕ್ಷಣಿಕ ವ್ಯವಸ್ಥೆಗೆ ಸಮಾಜದ ವಿವಿಧ ಸಂಘಸಂಸ್ಥೆಗಳು ಶಿಕ್ಷಣ ಇಲಾಖೆಯ ಜೊತೆಗೆ ಕೈಜೋಡಿಸುವ ಮೂಲಕ ಶಿಕ್ಷಣ ಕ್ಷೇತ್ರವನ್ನು ಬಲಪಡಿಸಬೇಕು ಎಂದರು. ಪ್ರೌಢಶಾಲಾ ಮುಖ್ಯ ಶಿಕ್ಷಕ ಶ್ರೀನಿವಾಸ್ ಮಾತನಾಡಿ ಶಾಲೆಗಳು ಮತ್ತು ಸಮುದಾಯದ ಬಾಂಧವ್ಯ ವೃದ್ಧಿಗೆ ಗ್ರಾಮ ಪಂಚಾಯಿತಿ ಸಹಕಾರವಾಗುತ್ತದೆ ಎಂಬುದಕ್ಕೆ ಇಲ್ಲಿನ ಗ್ರಾಮ ಪಂಚಾಯಿತಿ ಶಿಕ್ಷಣ ವ್ಯವಸ್ಥೆಗೆ ನೀಡಿರುವ ಸಹಕಾರ ಸಾಕ್ಷಿಯಾಗಿದೆ. ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ಬೇಕೆಂದು ಅಪೇಕ್ಷಿಸುವ ಪ್ರತಿಯೊಬ್ಬರು ಉತ್ತಮ ಶಾಲೆಯ ನಿರ್ಮಾಣಕ್ಕೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಗ್ರಾಪಂ ಉಪಾಧ್ಯಕ್ಷೆ ಸಾಕಮ್ಮ, ಮಾಜಿ ಅಧ್ಯಕ್ಷೆ ಮೀನಾಕ್ಷಮ್ಮ, ಪಿಡಿಓ ರಾಮಕೃಷ್ಣ ಸದಸ್ಯರಾದ ಸೀಗೂರು ವಿಜಯಕುಮಾರ್, ಬಿಲ್ಲಹಳ್ಳಿ ಮಹಾದೇವ್, ರವಿಕುಮಾರ್, ಸುಧಾ, ಯಶೋದಮ್ಮ, ಶಾಲಾ ಮುಖ್ಯೋಪಾಧ್ಯಾಯ ಸೋಮೇಶ್, ಶಿಕ್ಷಕರಾದ ರುದ್ರಪ್ಪ, ತಾಂಡವ ಮೂರ್ತಿ, ಮಂಗಳಾ, ಸುಧಾ, ಮಹಾದೇವಿ , ಮಮತಾ ಇದ್ದರು.



# ಅಂತಾರಾಷ್ಟ್ರೀಯ ಸಮ್ಮೇಳನಕ್ಕೆ ಆಯ್ಕೆ

**ವಿಜಯಪುರ:** ನೇಪಾಳ ದೇಶದ ರಾಜಧಾನಿ ಕಟ್ಮಂಡುವಿನಲ್ಲಿ ಇದೇ ತಿಂಗಳ 15 ರಿಂದ 19ರವರೆಗೆ ಮಧ್ಯ ಪ್ರದೇಶದ ಭೂಪಾಲ್ ನ ಏಕತಾ ಪರಿಷತ್ ಹಾಗೂ ವರ್ಲ್ಡ್ ಸೋಶಿಯಲ್ ಫೋರಮ್ ನೇಪಾಳ ಇವರು ಆಯೋಜಿಸಿರುವ ಗಾಂಧಿ ಯಿಂದ ಬುದ್ಧನವರೆಗೆ ವಿಶ್ವಶಾಂತಿ ಹಾಗೂ ಸೌಹಾರ್ದತೆಯ ಸಮ್ಮೇಳನಕ್ಕೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿಯ ಅಧ್ಯಕ್ಷ ಡಾ.ವಿ.ಪ್ರಶಾಂತ ಹಾಗೂ ರಾಷ್ಟ್ರೀಯ ಯುವ ಯೋಜನೆಯ ರಾಜ್ಯ ಹಿರಿಯ ಸ್ವಯಂಸೇವಕರಾದ ದೇವನಹಳ್ಳಿಯ ಎಂ.ಆರ್.ಗಿರೀಶ್ ಹಾಗೂ ಸಾವಕನಹಳ್ಳಿ ಗ್ರಾಮದ ಎನ್. ಸಂತೋಷ್ ಕುಮಾರ್ ಆಯ್ಕೆಯಾಗಿದ್ದಾರೆ ಎಂದು ರಾಷ್ಟ್ರೀಯ ಏಕತಾ ಪರಿಷತ್ತಿನ ರಾಷ್ಟ್ರೀಯ ಅಧ್ಯಕ್ಷ ರಣಸಿಂಗ್ ಫಾರ್ಮ ತಿಳಿಸಿದರು.

ಈ ಅಂತರರಾಷ್ಟ್ರೀಯ ಸಮ್ಮೇಳನಕ್ಕೆ ಭಾರತ ದೇಶದಿಂದ 300 ಮಂದಿ ಯುವ ಪ್ರತಿನಿಧಿಗಳು, ಗಾಂಧಿ ಅನುಯಾಯಿಗಳು, ದಕ್ಷಿಣ ಏಷ್ಯಾ ದ ಯುವ ಪ್ರತಿನಿಧಿಗಳು ಹಾಗೂ ವಿಶ್ವದ ವಿವಿಧ ದೇಶಗಳಿಂದ 40.000 ಯುವ ಪ್ರತಿನಿಧಿಗಳು ಆಗಮಿಸುವ ಈ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಯುವ ಪ್ರತಿನಿಧಿಗಳೊಂದಿಗೆ ವಿಶ್ವ ಶಾಂತಿ ಸೌಹಾರ್ದತೆ ಸಭೆಯ ಐದು ದಿನಗಳಲ್ಲಿ ಏಳು ಮಹತ್ವದ ಚರ್ಚಾ ಗೋಷ್ಠಿಗಳು, ಅಂತರಾಷ್ಟ್ರೀಯ ವಿಶ್ವ ಶಾಂತಿ ಮೆರವಣಿಗೆ, ಅಹಿಂಸೆಯ ಕುರಿತು ಗಾಂಧಿ ಯಿಂದ ಬುದ್ಧನವರೆಗೆ ಅಂತರಾಷ್ಟ್ರೀಯ ವಿಚಾರ ಸಂಕೀರ್ಣ, ಹಾರ್ದಿಕ ಸಬಲೀಕರಣ ಮತ್ತು ಲಿಂಗ ಸಮಾನತೆ ಚರ್ಚಾ ಗೋಷ್ಠಿ ಹಾಗೂ ಸಾಕ್ಷ ಚಿತ್ರ ಪ್ರದರ್ಶನ ಮೊದಲಾದ ಮಹತ್ವದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.




# ಬೆಂಗಳೂರು ಶಿಕ್ಷಕರ ಕ್ಷೇತ್ರದ ಚುನಾವಣೆ: ನಿಷೇಧಾಜ್ಞೆ ಜಾರಿ

**ರಾಮನಗರ:** ರಾಜ್ಯ ವಿಧಾನ ಪರಿಷತ್ತಿಗೆ ಬೆಂಗಳೂರು ಶಿಕ್ಷಕರ ಕ್ಷೇತ್ರದ ಉಪ ಚುನಾವಣೆಯ ಮತದಾನ ಫೆ.16ರಂದು ನಡೆಯಲಿರುವ ಪ್ರಯುಕ್ತ ಫೆ. 14ರ ಸಂಜೆ 4 ರಿಂದ ಫೆ. 16ರ ಮಧ್ಯರಾತ್ರಿ 12 ಗಂಟೆಯವರೆಗೆ ಭಾರತೀಯ ದಂಡ ಪ್ರಕ್ರಿಯೆ ಸಂಹಿತೆ 1973ರ ಕಲಂ 144 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಷರತ್ತುಗಳನ್ನು ವಿಧಿಸಿ ರಾಮನಗರ ಜಿಲ್ಲೆಯ ಶಿಕ್ಷಕರ ಕ್ಷೇತ್ರದ ಮತಗಟ್ಟೆಗಳ ವ್ಯಾಪ್ತಿಯಲ್ಲಿ ಪ್ರತಿಬಂಧಕಾಜ್ಞೆಯನ್ನು ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಅವರು ಆದೇಶ ಹೊರಡಿಸಿದ್ದಾರೆ.

ರಾಮನಗರ ಜಿಲ್ಲೆಯ ಶಿಕ್ಷಕರ ಕ್ಷೇತ್ರದ ಮತಗಟ್ಟೆ ವ್ಯಾಪ್ತಿಯಲ್ಲಿ 5 ಕ್ಕಿಂತ ಹೆಚ್ಚು ಜನರು ಗುಂಪು ಸೇರುವಂತಿಲ್ಲ. ಮೆರವಣಿಗೆ ಹಾಗೂ ಸಭೆ ಸಮಾರಂಭ ಜರುಗಿಸುವುದನ್ನು ನಿಷೇಧಿಸಲಾಗಿದೆ. ಚುನಾವಣಾ ಅಭ್ಯರ್ಥಿ/ಬೆಂಬಲಿಗರು ಸೇರಿ 5 ಜನರಿಗಿಂತ ಹೆಚ್ಚಿನ ಸಂಖ್ಯೆಯ ಜನರು ಸೇರುವಂತಿಲ್ಲ. ಶಸ್ತ್ರ, ಬಡಿಗೆ, ಭರ್ಜಿ, ಖಡ್ಗ, ಗದೆ, ಬಂದೂಕು, ಚೂರಿ, ಲಾಟಿ, ದೊಣ್ಣೆ, ಚಾಕು ಅಥವಾ ದೇಹಕ್ಕೆ ಅಪಾಯವನ್ನುಂಟು ಮಾಡಬಹುದಾದ ಯಾವುದೇ ಮಾರಕಾಸ್ತ್ರವನ್ನು ತೆಗೆದುಕೊಂಡು ಹೋಗುವುದನ್ನು ಮತ್ತು ಅವುಗಳೊಂದಿಗೆ ತಿರುಗಾಡುವಂತಿಲ್ಲ.

ಮತಗಟ್ಟೆಗಳ 200 ಮೀಟರ್ ವ್ಯಾಪ್ತಿಯೊಳಗೆ ಚುನಾವಣಾ ಪ್ರಚಾರ ನಿಷೇಧಿಸಲಾಗಿದ್ದು, ಈ ಪ್ರದೇಶದಲ್ಲಿ ಬರುವ ಜೆರಾಕ್ಸ್ ಅಂಗಡಿ, ಸೈಬರ್ ಕೆಫೆ, ಬುಕ್ ಸ್ಟಾಲ್ ಗಳನ್ನು ನಿರ್ಭಂಧಿಸಿದೆ. ಸ್ಫೋಟಕ ವಸ್ತುಗಳು, ಯಾವುದೇ ದಹನ ವಸ್ತುಗಳು, ಇತ್ಯಾದಿಗಳನ್ನು ಈ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಹಾಗೂ ಶೇಖರಿಸುವುದನ್ನು ನಿಷೇಧಿಸಲಾಗಿದೆ. ಕಲ್ಲುಗಳನ್ನು ಮತ್ತು ಎಸೆಯುವಂತಹ ವಸ್ತುಗಳನ್ನು ಎಸೆಯುವ ಮತ್ತು ಬಿಡುವ ಸಾಧನಗಳನ್ನು ತೆಗೆದುಕೊಂಡು ಹೋಗವುದನ್ನು ನಿಷೇಧಿಸಿದೆ.

ಈ ಸ್ಥಳದಲ್ಲಿ ಮನುಷ್ಯ ಶವಗಳ ಅಥವಾ ಅವುಗಳ ಆಕೃತಿ ಅಥವಾ ಪ್ರತಿಮೆಗಳ ಪ್ರದರ್ಶನ ಮತ್ತು ದಹನ ಮಾಡುವುದನ್ನು ಪ್ರತಿಬಂಧಿಸಲಾಗಿದೆ. ಬಹಿರಂಗವಾಗಿ ಘೋಷಣೆ ಕೂಗುವುದು, ಪದ ಹಾಡುವುದು. ವಾದ್ಯಗಳನ್ನು ಬಾರಿಸುವುದು, ವ್ಯಾಖ್ಯಾನ ಕೊಡುವುದು, ಸನ್ನೆ ಅಥವಾ ನಕಲಿ ಪ್ರದರ್ಶನವನ್ನು ಹಾಗೂ ಸಾರ್ವಜನಿಕ ಸಭ್ಯತೆ ಅಥವಾ ನೀತಿಯನ್ನು ಕೃತ್ಯಗಳನ್ನು ಮಾಡುವುದನ್ನು ನಿಷೇಧಿಸಲಾಗಿದೆ. ಆಕ್ರಮಿಸಬಹುದಾದ ಕೃತ್ಯಗಳನ್ನು ಮಾಡುವುದನ್ನು ನಿಷೇಧಿಸಲಾಗಿದೆ. ಸಾರ್ವಜನಿಕವಾಗಿ ಯಾವುದೇ ವ್ಯಕ್ತಿ ಪ್ರಚೋದನಾತ್ಮಕ ಹಾಗೂ ಉದ್ರೇಕಕಾರಿ ಹಾಡುಗಳು, ಕೂಗಾಡುವುದು ಹಾಗೂ ವ್ಯಕ್ತಿಗಳ ತೇಜೋವಧೆ ಮಾಡುವಂತಹ ಚಿತ್ರಗಳು, ಚಿಹ್ನೆಗಳು, ಪ್ರತಿಕೃತಿಗಳು, ಮುಂತಾದವುಗಳನ್ನು ಪ್ರದರ್ಶಿಸುವುದು ಹಾಗೂ ಸಾರ್ವಜನಿಕ ಗಾಂಭೀರ್ಯ ಹಾಗೂ ನೈತಿಕತೆಗೆ ಭಂಗ ತರುವಂತಹ ಹಾಗೂ ಕಾನೂನು ಸುವ್ಯವಸ್ಥೆಗೆ ಭಂಗ ತರುವಂತಹ ಯಾವುದೇ ಕೃತ್ಯಗಳಲ್ಲಿ ತೊಡಗುವುದನ್ನು ನಿಷೇಧಿಸಲಾಗಿದೆ.

# ರೈತರಿಗೆ ದಾಳಿಂಬೆ ಬೆಳೆ ತರಬೇತಿ ಕಾರ್ಯಕ್ರಮ; ಅಂಬೆ ಬಹಾರ್-2024

**ವಿಜಯಪುರ:** ಪಟ್ಟಣದ ಚನ್ನರಾಯಪಟ್ಟಣ ರಸ್ತೆಯ ವೃತ್ತದಲ್ಲಿರುವ ಶ್ರೀ ಅನ್ನಪೂರ್ಣೇಶ್ವರಿ ಕನ್ವೆನ್ಷನ್ ಹಾಲ್ನಲ್ಲಿ ಫೆಬ್ರುವರಿ 16ರ ಶುಕ್ರವಾರದಂದು ಬೆಳಗ್ಗೆ 9:00 ರಿಂದ ದಾಳಿಂಬೆ ಬೆಳೆ ತರಬೇತಿ ಕಾರ್ಯಕ್ರಮವನ್ನು ಐಸಿಎಲ್ ಮ್ಯಾನೇಜ್ಮೆಂಟ್ ಮತ್ತು ಟ್ರೇಡಿಂಗ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಹಾಗೂ ಶ್ರೀನಿಧಿ ಆಗ್ರೋಕೆಮಿಕಲ್ಸ್ ರವರುಗಳಿಂದ ಏರ್ಪಡಿಸಲಾಗಿರುತ್ತದೆ ಎಂದು ಶ್ರೀನಿಧಿ ಆಗ್ರೋಕೆಮಿಕಲ್ಸ್ನ ವಿಜಿ ರಾಘವೇಂದ್ರರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವರು. ಕಾರ್ಯಕ್ರಮದ ಮುಖ್ಯ ತರಬೇತುದಾರರಾಗಿ ದಾಳಿಂಬೆ ರತ್ನ ಪ್ರಶಸ್ತಿ ಪುರಸ್ಕೃತರಾದ ಡಿಎಸ್ ಎಸ್ ಅಗ್ರಿಟೆಕ್ ಪ್ರೈವೇಟ್ ಲಿಮಿಟೆಡ್ ಫಾರಂನ ಸಂಸ್ಥಾಪಕರಾದ ಬಿಟಿ ಗೋರೆಯವರು ರೈತರನ್ನುದ್ದೇಷಿಸಿ ಮಾತನಾಡಲಿರುವರು. ರೈತರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ತಿಳಿಸಲಾಗಿದೆ. 89043 85613 ಹಾಗೂ 70196 50950 ಸಂಪರ್ಕಿಸಲು ತಿಳಿಸಲಾಗಿದೆ.

# ಸೌಹಾರ್ದತೆ-ಹೃದಯವಂತಿಕೆ ಕನ್ನಡ ಸಂಸ್ಕೃತಿಯ ವಿಶೇಷತೆ

**ಹುಳಿಯಾರು:** ಹೃದಯವಂತಿಕೆ ಮತ್ತು ಸೌಹಾರ್ದತೆ ಕನ್ನಡ ಸಂಸ್ಕೃತಿಯ ವಿಶೇಷ ಎಂದು ನಿವೃತ್ತ ಐಎಎಸ್ ಅಧಿಕಾರಿ ಡಾ.ಚಿರಂಜೀವಿಸಿಂಗ್ ಅಭಿಪ್ರಾಯಪಟ್ಟಿದ್ದಾರೆ.

ಹುಳಿಯಾರು ಕೋಡಿಪಾಳ್ಯದ ಶ್ರೀ ಮಾತಾ ಚಾರಿಟಬಲ್ ಟ್ರಸ್ಟ್ ಬೆಂಗಳೂರಿನ ಇಂಡಿಯನ್ ಇನ್ ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್ ಸಭಾಂಗಣದಲ್ಲಿ ಮಂಗಳವಾರ ಸಂಜೆ ಹಮ್ಮಿಕೊಂಡಿದ್ದ ಸೆಂಟರ್ ಸ್ಟೇಜ್-ಕಪ್ಪಣ್ಣ ಸಾಂಸ್ಕೃತಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಜೈನ, ಬುದ್ಧ, ಲಿಂಗಾಯತ, ಸೂಫಿ ಮುಂತಾದ ದರ್ಶನಗಳ ಮಾನವೀಯತೆಯನ್ನು ಕನ್ನಡ ನಾಡು ರೂಪಿಸಿಕೊಂಡಿದೆ. ಹೃದಯವಂತಿಕೆ ಮತ್ತು ಸೌಹಾರ್ದವೇ ಕನ್ನಡ ಸಂಸ್ಕೃತಿಯ ವಿಶೇಷತೆ. ಬುದ್ಧಿವಂತಿಕೆಗಿಂತ ಹೃದಯವಂತಿಕೆಯೇ ಮುಖ್ಯ ಎಂಬುದು ನನಗೆ ಅರಿವಾಗಿದ್ದೇ ಈ ಕಲಾಜಗತ್ತಿನ ಒಡನಾಟದಿಂದ. ನಮ್ಮ ನಾಡಿನ ಕಲಾವಿದರು ಇದಕ್ಕೆ ದೊಡ್ಡ ಉದಾಹರಣೆ ಎಂದು ತಿಳಿಸಿದರು.



ಕರ್ನಾಟಕ ರಂಗಭೂಮಿ ಮತ್ತು ಜನಪದ ಕಲೆಗಳ ನಡೆದಾಡುವ ವಿಶ್ವಕೋಶ ಶ್ರೀನಿವಾಸ ಜಿ.ಕಪ್ಪಣ್ಣ, ಕನ್ನಡ ರಂಗಭೂಮಿಯ ಎಲ್ಲಾ ಗುಣಗಳನ್ನು ಯಥಾವತ್ತಾಗಿ ಪ್ರತಿಫಲಿಸುವ ವ್ಯಕ್ತಿ ಎಂದು ಬಣ್ಣಿಸಿದರಲ್ಲದೆ, ಈ ಬಾರಿಯ ಪ್ರಶಸ್ತಿ ಪುರಸ್ಕೃತರು ತಮ್ಮ ರಂಗಕಾಯಕದ ಮೂಲಕ ನಾಡಿನ ಮೌಲ್ಯಗಳನ್ನು ಸಾರದಿಂದ ಕನ್ನಡ ಸಂಸ್ಕೃತಿಯ ಮುಖ್ಯ ಎಂಬುದು ನಮ್ಮ ನಾಡಿನ ಕರ್ನಾಟಕದ ಜನಪದ ಕಲೆಗಳ ಗಟ್ಟಿಗೊಳಿಸುತ್ತಾ ಹೋಗಲಿ ಎಂದು ಹಾರೈಸಿದರು.

ರಂಗಕರ್ಮಿಗಳಾದ ಡಾ. ಜೀವರಾಂ ಸುಳ್ಯ ಹಾಗೂ ನರೇಶ್ ಡಿಂಗ್ರಿ, ಅವರಿಗೆ ಸೆಂಟರ್ ಸ್ಟೇಜ್-ಕಪ್ಪಣ್ಣ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ನಾಡೋಜ ಡಾ. ಹಂ.ಪ.ನಾಗರಾಜಯ್ಯ ಅವರು, ಅರಳುವ ಪ್ರತಿಭೆಗಳನ್ನು ಪೋಷಿಸುವ ವಿಶೇಷ ಗುಣ ಕಪ್ಪಣ್ಣ ಅವರಂತಹ ಮೇರು ಪ್ರತಿಭೆ ನಮ್ಮ ನಡುವೆ ಇರುವುದು ನಮ್ಮ ಭಾಗ್ಯ. ಅವರ ಹೆಸರಿನಲ್ಲಿ ಪ್ರಶಸ್ತಿ ನೀಡುತ್ತಿರುವುದು ಸುತ್ತಾರ್ಹ ಕಾರ್ಯ ಎಂದರು. ಪ್ರಶಸ್ತಿ ಪುರಸ್ಕೃತ ಡಾ. ಜೀವನರಾಂ ಸುಳ್ಯ ಮಾತನಾಡಿ, ಗೋಡೆಗಳೇ ಇಲ್ಲದ ಗುಡಿಸಲಿನಲ್ಲಿ ಹುಟ್ಟಿ ಬೆಳೆದವನು ನಾನು. ಇಂದು ನಾನೇನು ಆಗಿದ್ದೇನೋ ಅದಕ್ಕೆ ರಂಗಭೂಮಿಯೇ ಕಾರಣ ಎಂದರಲ್ಲದೆ, ಕೇವಲ ನಿರ್ದೇಶಕ, ನಟ ಆಗುವುದರಿಂದ ವೃತ್ತಿಪರ ಆಗಲು ಸಾಧ್ಯವಿಲ್ಲ, ಹೆಚ್ಚು ವಿಸ್ತತ ಪ್ರತಿಭೆ ಹೊಂದಿರುವುದು ಇಂದಿನ ಅವಶ್ಯತೆಯಾಗಿದೆ ಎಂದು ಕಿವಿಮಾತು ಹೇಳಿದರು.

ಹಿರಿಯ ರಂಗಕರ್ಮಿ ಶ್ರೀನಿವಾಸ ಜಿ.ಕಪ್ಪಣ್ಣ, ಶ್ರೀ ಮಾತಾ ಟ್ರಸ್ಟ್ ಅಧ್ಯಕ್ಷ ಗಂಗಾಧರ್ ಉಪಸ್ಥಿತರಿದ್ದರು. ಚಿತ್ರ ನಿರ್ದೇಶಕ- ನಾಟಕಕಾರ ಬಿ.ಸುರೇಶ್ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ರಂಗಕರ್ಮಿ-ಪ್ರಕಾಶಕ ವಿದ್ಯಾರಣ್ಯ ಕಾರ್ಯಕ್ರಮ ನಿರೂಪಿಸಿದರು. ಚಿತ್ರ ನಿರ್ದೇಶಕ ಟಿ.ಎಸ್.ನಾಗಾಭರಣ ಅಧ್ಯಕ್ಷತೆ ವಹಿಸಿದ್ದರು. ಇದಕ್ಕೂ ಮುನ್ನ ಬೆನಕ ಬ್ಯಾಂಡ್ ಪ್ರಸ್ತುತಪಡಿಸಿದ ರಂಗಗೀತೆಗಳು ನೆರೆದವರನ್ನು ಸಮ್ಮೋಹಗೊಳಿಸಿತು.

# ಮಾ.9ರಂದು ಲೋಕ್ ಅದಾಲತ್

**ಮಂಡ್ಯ:** ರಾಜ್ಯದ್ಯಾಂತ ಮಾರ್ಚ್ 9 ರಂದು ರಾಷ್ಟ್ರೀಯ ಲೋಕ್ ಅದಾಲತ್ ನ್ನು ಹಮ್ಮಿಕೊಳ್ಳಲಾಗಿದ್ದು, ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿಯೂ ಸಹ ಮಾರ್ಚ್ 9 ರಂದು ರಾಷ್ಟ್ರೀಯ ಲೋಕ್-ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಾಣಿ ಎ ಶೆಟ್ಟಿ ಅವರು ತಿಳಿಸಿದ್ದಾರೆ.

ಲೋಕ್ ಅದಾಲತ್ ಮುಖಾಂತರ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಪೂರ್ವಭಾವಿ ಬೈಠಕ್‌ಗಳನ್ನು ನಡೆಸಿದ್ದು, ಆಸ್ತಿ ವಿವಾದಗಳನ್ನು ಒಳಗೊಂಡಂತೆ ಸಿವಿಲ್ ವ್ಯಾಜ್ಯಗಳು, ಮೋಟಾರು ವಾಹನಗಳ ಪ್ರಕರಣಗಳು, ಒಎಖಅ ಪ್ರಕರಣಗಳು, ರಾಜಿ ಆಗಬಹುದಾದಂತಹ ಕ್ರಿಮಿನಲ್ ಪ್ರಕರಣಗಳನ್ನು ಮತ್ತು ಚೆಕ್ ಬೌನ್ಸ್ ಪ್ರಕರಣಗಳನ್ನು ರಾಜಿಗೆ ತೆಗೆದುಕೊಂಡು ಆಯಾ ನ್ಯಾಯಾಲಯಗಳಲ್ಲಿ ಜನತಾ ನ್ಯಾಯಾಲಯಗಳನ್ನು ಮಾಡಿ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಪ್ರಯತ್ನ ಮಾಡಲಾಗಿದೆ. ಲೋಕ ಅದಾಲತ್‌ನಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ಜೊತೆಗೆ, ನ್ಯಾಯಾಲಯಕ್ಕೆ ದಾಖಲಾಗುವ ಮುನ್ನ ಅಂದರೆ, ವ್ಯಾಜ್ಯಪೂರ್ವ ಪ್ರಕರಣಗಳು (ಬ್ಯಾಂಕ್ ವಸೂಲಾತಿ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಕಾರ್ಮಿಕ ವಿವಾದ ಪ್ರಕರಣಗಳು,) ಇಂತಹ ಪ್ರಕರಣಗಳಿಗೆ ಉಭಯ ಪಕ್ಷಗಾರರಿಗೆ ನೋಟೀಸ್ ನೀಡಿ ಕರೆಸಿ ಪ್ರಾಧಿಕಾರದ ವತಿಯಿಂದ ಪೂರ್ವಭಾವಿ ಬೈಠಕ್ ನಡೆಸಿ ಅದಾಲತ್‌ನಲ್ಲಿ ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ. ಹಾಗೂ ಇಂತಹ ಪ್ರಕರಣಗಳಿಗೆ ನ್ಯಾಯಾಲಯಕ್ಕೆ ಶುಲ್ಕ ಪಾವತಿಸುವ ಅವಶ್ಯಕತೆ ಇರುವುದಿಲ್ಲ. ವಕೀಲರ ಮುಖಾಂತರ ಅಥವಾ ಖುದ್ದಾಗಿ ಪ್ರಾಧಿಕಾರಕ್ಕೆ ಭೇಟಿ ನೀಡಿ ಪ್ರಕರಣವನ್ನು ರಾಜಿಮಾಡಿಕೊಳ್ಳಬಹುದಾಗಿರುತ್ತದೆ.

ಕಳೆದ ಬಾರಿ ಅಂದರೆ ಡಿಸೆಂಬರ್ 9 ರಲ್ಲಿ ನಡೆದ ಲೋಕ್ ಅದಾಲತ್‌ನಲ್ಲಿ 34689 ಪ್ರಕರಣಗಳು ಇತ್ಯರ್ಥವಾಗಿದ್ದು, ಅದರಲ್ಲಿ ನ್ಯಾಯಾಲಯದಲ್ಲಿ ಬಾಕಿ ಇದ್ದ ಪ್ರಕರಣಗಳಲ್ಲಿ 4341 ಪ್ರಕರಣಗಳು, ಹಾಗೂ 30,348 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಎಲ್ಲಾ ನ್ಯಾಯಾಲಯದ ಗೌರವಾನ್ವಿತ ನ್ಯಾಯಾಧೀಶರುಗಳು, ವಕೀಲರು, ಪಕ್ಷಗಾರರು, ಅಭಿಯೋಜಕರು, ಪೊಲೀಸ್ ಇಲಾಖೆಯವರುಗಳ ಸಹಯೋಗದೊಂದಿಗೆ ಇತ್ಯರ್ಥ ಪಡಿಸುವಲ್ಲಿ ಯಶಸ್ವಿಯಾಗಿದ್ದೇವೆ.

ಈ ಬಾರಿಯ ಲೋಕ್-ಅದಾಲತ್‌ನಲ್ಲಿಯೂ ಸಹ ಇನ್ನು ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥಪಡಿಸಿ ಜನ ಸಾಮಾನ್ಯರಿಗೆ ಅನುಕೂಲವಾಗುವ ರೀತಿಯಲ್ಲಿ ನ್ಯಾಯದಾನ ಮಾಡಬೇಕೆಂಬ ಇಚ್ಛೆಯಿಂದ ಪ್ರಕರಣಗಳನ್ನು ತೆಗೆದುಕೊಂಡಿದ್ದು, ಜನ ಸಾಮಾನ್ಯರು ಇದರ ಸದುಪಯೋಗವನ್ನು ಪಡೆದುಕೊಂಡು ಲೋಕ್ ಅದಾಲತ್ ನಲ್ಲಿ ಭಾಗವಹಿಸಿ ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಾಣಿ ಎ ಶೆಟ್ಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂಜೆ ಮುಗಿಲು
ಗುರುವಾರ 15.2.2024

# ಸಂಜೆ ಟಿಪ್ಸ್



## ಸಂಗೀತ ಮತ್ತು ಡ್ರೈವಿಂಗ್ ಫೆಸ್ಟಿವಲ್

BMW ಗ್ರೂಪ್ ಇಂಡಿಯಾ ತನ್ನ ಸಂಗೀತ ಮತ್ತು ಡ್ರೈವಿಂಗ್ ಫೆಸ್ಟಿವಲ್-JOYTOWNನ ಎರಡನೆಯ ಆವೃತ್ತಿಯನ್ನು ಪ್ರಸ್ತುತಪಡಿಸುತ್ತಿದೆ. ಎರಡುದಿನಗಳ ತಲ್ಲೀನಗೊಳಿಸುವ ಬ್ರಾಂಡ್ ಎಕ್ಸ್ ಪೀರಿಯನ್ಸ್ ಉತ್ಸವವು ಮುಂಬೈನ ಅಭಿಮಾನಿಗಳು ಮತ್ತು ಉತ್ಸಾಹಿಗಳನ್ನು ಏಪ್ರಿಲ್ 12-13,2024ರಂದು ಮುಂಬೈನ ಮಹಾಲಕ್ಷ್ಮಿ ರೇಸ್ ಕೋರ್ಸ್ ನಲ್ಲಿ ರಂಜಿಸಲಿದೆ. ವಿಕ್ರಮ್ ಪಾವಾಹ್, ಪ್ರೆಸಿಡೆಂಟ್, BMW ಗ್ರೂಪ್ ಇಂಡಿಯಾ, ಹೇಳಿದರು ''ನಾವು ಮುಂಬೈನಲ್ಲಿ JOYTOWNನ ಎರಡನೇ ಆವೃತ್ತಿ ತರುತ್ತಿರುವುದು ಮಹತ್ತರ ಉತ್ಸಾಹವಾಗಿದ್ದು ಇದು ಆವಿಷ್ಕಾರಕ ಉತ್ಸವವಾಗಿದ್ದು ಅದು ಉಜ್ವಲವಾದ ಸಂಗೀತದ ವಿಶ್ವವನ್ನು ಸಂಯೋಜಿಸುತ್ತದೆ. JOYTOWN ಸಂಭ್ರಮವಾಗಿದ್ದು ಅದು BMW, MINI ಮತ್ತು BMW ಮೋಟಾರ್ರಾಡ್ ತತ್ವಗಳನ್ನು ಪ್ರತಿಫಲಿಸುತ್ತಿದ್ದು, ನಮ್ಮ ಮುಂಚೂಣಿಯ ಆಟೋಮೋಟಿವ್ ಸುಧಾರಣೆಗಳನ್ನು ಖ್ಯಾತ ಸಂಗೀತಗಾರರ ರೋಮಾಂಚಕ ತಾಳಗಳೊಂದಿಗೆ ಸಂಯೋಜಿಸುತ್ತದೆ. ನಾವು ಅವಿಸ್ಮರಣೀಯ ಪ್ರಯಾಣವನ್ನು JOYTOWN ನಲ್ಲಿ ಭರವಸೆ ನೀಡುತ್ತೇವೆ, ಅದರಲ್ಲಿ ಎಂಜಿನಿಯರಿಂಗ್, ಆಕಾಂಕ್ಷೆಯನ್ನು ಭೇಟಿ ಮಾಡುತ್ತದೆ ಮತ್ತು ಪ್ರತಿ ಬೀದಿಯೂ ಅಸಾಧಾರಣ ಮತ್ತು ಸ್ಮರಣೀಯ ಅನುಭವಗಳ ರಂಗವಾಗಿ ಪರಿವರ್ತನೆಯಾಗುತ್ತದೆ ಎಂದರು. JOYTOWN ಒಟ್ಟಿಗೆ BMW, MINI ಮತ್ತು BMW ಮೋಟಾರ್ರಾಡ್ ಕಾರುಗಳು ಮತ್ತು ಬೈಕ್ ಗಳು, ಸಂಗೀತ, ಮನರಂಜನೆ ತರುವ ಪರಿಪೂರ್ಣ ಮಿಶ್ರಣದ ವಿನೂತನ ಅನುಭವ ನೀಡುತ್ತದೆ. BMWಡ್ರೈವ್ ಶಕ್ತಿ, ಚುರುಕುತನ ಮತ್ತು ಕಲಿತನವನ್ನು ಪ್ರದರ್ಶಿಸುವ ಪರಿಣಿತರು ವಿಶೇಷವಾಗಿ ವಿನ್ಯಾಸಗೊಳಿಸಲಾದ ಟ್ರ್ಯಾಕ್ ಅನ್ನು ಎಕ್ಸ್ ಪರ್ಟ್ ಮೇಲ್ವಿಚಾರಣೆಯಲ್ಲಿ ಪ್ರದರ್ಶಿಸುತ್ತಾರೆ. ಅದ್ದೂರಿ ಲೈವ್ ಕಾರ್ಯಕ್ರಮದ ವೇದಿಕೆಯು ಅವಿಸ್ಮರಣೀಯ ಸಂಜೆಗೆ ಸಜ್ಜಾಗಿದೆ. ಈ ಸರಣಿಯಲ್ಲಿ ಜಾಗತಿಕ ಸೆನ್ಸೇಷನ್ ಗಳಾದ ದಿ ಚೈನ್ ಸ್ಮೋಕರ್ಸ್, ಪವರ್ ಹೌಸ್ ಪ್ರದರ್ಶಕರಾದ ದಿಲ್ಜಿತ್ ದೋಸಾಂಜ್ ಡೈನಮಿಕ್ ಮತ್ತು ವೈವಿಧ್ಯಮಯ ಸಂಗೀತದ ಪ್ರಯಾಣ ನೀಡುತ್ತದೆ. ಪ್ರಮುಖ ಕಲಾವಿದರು ಮತ್ತು ಬ್ಯಾಂಡ್ ಗಳು ಇಂಡೀ, ಪಾಪ್ ಮತ್ತು ಎಲೆಕ್ಟ್ರಾನಿಕ್ ಸಂಗೀತವು ಆಡಿಯೊಫಿಲ್ ಗಳು ಮತ್ತು ಸಂಗೀತಪ್ರಿಯರಿಗೆ ಸಮಾನವಾಗಿ ರಂಜಿಸುತ್ತದೆ.

## ಕರಿಬೇವಿನ ಮಜ್ಜಿಗೆ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

1 ಕಪ್ ಮೊಸರು, 2 ಕಪ್ ನೀರು, ಕರಿಬೇವಿನ ಎಲೆಗಳ 2 ಚಿಗುರುಗಳು, 1 ಹಸಿರು ಮೆಣಸಿನಕಾಯಿ, 1/2 ಟೀಚಮಚ ಕರಿಮೆಣಸು ಪುಡಿ, ರುಚಿಗೆ ಸ್ವಲ್ಪ ಉಪ್ಪು

### ಮಾಡುವ ವಿಧಾನ

ಕರಿಬೇವು ಮಜ್ಜಿಗೆ ರೆಸಿಪಿ ಮಾಡಲು ಮೊದಲು ಮೊಸರನ್ನು ನೀರಿನೊಂದಿಗೆ ಬೆರೆಸಿ ಮಜ್ಜಿಗೆ ತಯಾರಿಸಿ. ನಂತರ ಮಿಕ್ಸರ್-ಜಾರ್ನಲ್ಲಿ ಕರಿಬೇವು, ಹಸಿರು ಮೆಣಸಿನಕಾಯಿ, ಕರಿಮೆಣಸು ಮತ್ತು ಉಪ್ಪನ್ನು ಹಾಕಿ ಪೇಸ್ಟ್ ಮಾಡಿಕೊಳ್ಳಿ. ನಂತರ ಈ ಕರಿಬೇವಿನ ಮಿಶ್ರಣವನ್ನು ಮಜ್ಜಿಗೆಗೆ ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ಈಗ ಆರೋಗ್ಯಕರ ಮತ್ತು ಟೇಸ್ಟಿ ಕರಿಬೇವು ಮಜ್ಜಿಗೆ ಸಿದ್ಧವಾಗಿದೆ.

## ನಾಗಚೈತನ್ಯ ಸಾಯಿ ಪಲ್ಲವಿ ಮಧ್ಯೆ ಲವ್ವಿಡವ್ವಿ



ಟಾಲಿವುಡ್ ತಾರೆಯರಾದ ಸಾಯಿ ಪಲ್ಲವಿ ಹಾಗೂ ನಾಗಚೈತನ್ಯ ಪ್ರೇಮಿಗಳ ದಿನದಂದು ಜೊತೆಯಾಗಿ ಕಾಣಿಸಿಕೊಂಡು ಅಭಿಮಾನಿಗಳಿಗೆ ಶಾಕಿಂಗ್ ಸರ್ಪ್ರೈಸ್ ನೀಡಿದ್ದು, ಇವರಿಬ್ಬರು ಜೊತೆಯಾಗಿರುವ ವೀಡಿಯೋ ಈಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ಸ್ವತಃ ಸಾಯಿ ಪಲ್ಲವಿ ಅವರೇ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಈ ವೀಡಿಯೋವನ್ನು ಪೋಸ್ಟ್ ಮಾಡಿದ್ದು, ಸ್ವಲ್ಪ ಹೊತ್ತಿನಲ್ಲೇ ಈ ವೀಡಿಯೋವನ್ನು 80 ಸಾವಿರಕ್ಕೂ ಹೆಚ್ಚು ಜನ ವೀಕ್ಷಿಸಿ ವೈರಲ್ ಮಾಡಿದ್ದಾರೆ. ಅಂದಹಾಗೆ ಸಾಯಿ ಪಲ್ಲವಿ ಹಾಗೂ ನಾಗಚೈತನ್ಯ ಜೊತೆಯಾಗಿ ನಟಿಸುತ್ತಿರುವ ತಮ್ಮ ಹೊಸ ಸಿನಿಮ ಥಾಂಡೆಲ್ಗಾಗಿ ಹೀಗೆ ಒಂದೇ ವೀಡಿಯೋದಲ್ಲಿ ಪ್ರೇಮಿಗಳಂತೆ ಪೋಸ್ ನೀಡಿದ್ದಾರೆ. ಇದರಲ್ಲಿ ನಾಗಚೈತನ್ಯ ವೀಡಿಯೋ ಕಾಲ್ನಲ್ಲಿ ಮಾತನಾಡುತ್ತಾ ಬುಜ್ಜಿ ತಲ್ಲಿ ಬಂದ್ಬಿಡುತ್ತೇನಲ್ವೆ? ನಾ ಓರೀ ಅಂತ ಕರೆಯುತ್ತಿದ್ದು, ನಾಗಚೈತನ್ಯ ಅವರ ಈ ಪ್ರೇಮ ತುಂಬಿದ ಮನವಿಗೆ ಸಾಯಿ ಪಲ್ಲವಿ ಮೊದಲಿಗೆ ಹುಸಿ ಮುನಿಸು ತೋರಿ ಕೊನೆಯಲ್ಲಿ ನಗುತ್ತಾ ಅಲ್ಲಿಂದ ಓಡುತ್ತಾರೆ. ತಮ್ಮ ಮುಂಬರುವ ಥಾಂಡೆಲ್ ಸಿನಿಮಾದ ಪ್ರಚಾರಕ್ಕಾಗಿ, ಈ ವೀಡಿಯೋ ಪೋಸ್ಟ್ ಮಾಡಿ ಪ್ರೇಮಿಗಳ ದಿನದ ಶುಭ ಹಾರೈಸಿದ್ದಾರೆ ಸಾಯಿ ಪಲ್ಲವಿ. ಇದೇ ವೀಡಿಯೋವನ್ನು ಸ್ವತಃ ನಾಗ ಚೈತನ್ಯ ಕೂಡ ತಮ್ಮ ಇನ್ಸ್ಟಾಗ್ರಾಮ್ನಲ್ಲಿ ಪೋಸ್ಟ್ ಮಾಡಿದ್ದಾರೆ. ಸಾಯಿ ಪಲ್ಲವಿ ಹಾಗೂ ನಾಗಚೈತನ್ಯ ನಟನೆಯ ಈ ಸಿನಿಮಾವನ್ನು ಕಾರ್ತಿಕೇಯ ಸಿನಿಮಾ ಖ್ಯಾತಿಯ ಚಂದೂ ಮೊಂಡೆಟಿ ನಿರ್ದೇಶಿಸುತ್ತಿದ್ದಾರೆ. ಸಾಯಿ ಪಲ್ಲವಿಗೆ ಈ ಸಿನಿಮಾದಲ್ಲಿ ಮಹಿಳಾ ಪ್ರಧಾನ್ಯತೆಯ ಪಾತ್ರವಿದ್ದು, ಇದರ ಶೇಕಡಾ 40 ರಷ್ಟು ಶೂಟಿಂಗ್ ಮುಗಿದಿದೆ. ಶ್ರೀಕಾಕುಲಂನ ಹುಡುಗಿಯಾಗಿ ಹಳ್ಳಿಯ ಸುಂದರಿಯಾಗಿ ಕಾಣಿಸಿಕೊಳ್ಳಲಿದ್ದಾರೆ. ನಾಗ ಚೈತನ್ಯ ಪ್ರಸ್ತುತ ಹೈದರಾಬಾದ್ನಲ್ಲಿದ್ದರೆ, ಸಾಯಿ ಪಲ್ಲವಿ ಬಾಲಿವುಡ್ ಸೂಪರ್ ಸ್ಟಾರ್ ಅಮೀರ್ ಖಾನ್ ಪುತ್ರ ಜುನೈದ್ ಖಾನ್ ಅವರೊಂದಿಗೆ ಜಪಾನ್ನಲ್ಲಿ ಮತ್ತೊಂದು ಚಿತ್ರದ ಚಿತ್ರೀಕರಣದಲ್ಲಿ ನಿರತರಾಗಿದ್ದಾರೆ. ಪ್ರೀತಿಯ ಹಬ್ಬದಂದು ತಮ್ಮ ಅಭಿಮಾನಿಗಳಿಗೆ ಶುಭ ಹಾರೈಸಲು ರೀಲ್ ಮೂಲಕ ಇಬ್ಬರೂ ವರ್ಚುಯಲ್ ಆಗಿ ಒಟ್ಟಿಗೆ ಬಂದಿದ್ದು, ವಿಡಿಯೋ ಸಖತ್ ಸದ್ದು ಮಾಡುತ್ತಿದೆ. ಈ ವಿಡಿಯೋಗೆ ಅಪಾರ ಸಂಖ್ಯೆಯ ಅಭಿಮಾನಿಗಳು ಸಾಥ್ ನೀಡಿದ್ದಾರೆ. ಚಂದೂ ಮೊಂಡೇಟಿ ಅವರ ಚಲನಚಿತ್ರ ನಿರ್ಮಾಣ ಸಂಸ್ಥೆಯು ಚಿತ್ರದ ಫಸ್ಟ್ ಲುಕ್ ಅನ್ನು ಇತ್ತೀಚೆಗೆ ಬಿಡುಗಡೆಗೊಳಿಸಿತ್ತು. 'ಎಸೆನ್ಸ್ ಆಫ್ ತಂಡೆಲ್' ಶೀರ್ಷಿಕೆಯ ವಿಡಿಯೋ ಸುಮಾರು ಎರಡು ನಿಮಿಷಗಳಷ್ಟಿದ್ದು, ಪಾತ್ರಗಳ ಜೊತೆಗೆ ಕಥೆಯ ಒಂದು ನೋಟವನ್ನೂ ನೀಡಿತ್ತು. ಚೈತನ್ಯ ಆಡುಭಾಷೆಯಲ್ಲಿ ಮಾಸ್ ಡೈಲಾಗ್ ಹೊಡೆದಿದ್ದು, ಆಕರ್ಷಕವಾಗಿತ್ತು. ಕೊನೆಯಲ್ಲಿ ನಾಯಕಿಯ ಎಂಟ್ರಿ ಆಗಿದ್ದು, ಒಂದೆರಡು ಡೈಲಾಗ್ಸ್ ಇದ್ದವು. ಈ ಡೈಲಾಗ್ಸ್ ಸಖತ್ ಫೇಮಸ್ ಆಗಿ ನೆಟ್ಟಿಗರು ರೀಲ್ಸ್ ಮಾಡುವ ಮೂಲಕ ಬೆಂಬಲ ಸೂಚಿಸಿದ್ದರು. ಇದೀಗ ಸ್ವತಃ ನಾಗ ಚೈತನ್ಯ ಮತ್ತು ಸಾಯಿ ಪಲ್ಲವಿ ಅದೇ ಡೈಲಾಗ್ಸ್ಗೆ ರೀಲ್ಸ್ ಮಾಡಿ ಅಭಿಮಾನಿಗಳನ್ನು ತಲುಪಿದ್ದಾರೆ.

## ಶೇಂಗಾದ ಪ್ರಯೋಜನ



### ಹೆಲ್ತ್ ಟಿಪ್ಸ್

ಶೇಂಗಾ ಪೋಷಕಾಂಶಗಳ ಮೂಲ ಎಂದು ಹೇಳಬಹುದು. ಇದನ್ನು ಬಡವರ ಬಾದಾಮಿ ಎಂದು ಕರೆಯಲಾಗುತ್ತದೆ. ಕಡಲೆಕಾಯಿಯು ವಿಟಮಿನ್ ಬಿ, ಇ, ಆರೋಗ್ಯಕರ ಕೊಬ್ಬುಗಳು, ಫೈಬರ್, ಪ್ರೋಟೀನ್, ಮೆಗ್ನೀಸಿಯಮ್, ರಂಜಕ ಮತ್ತು ಪೊಟ್ಯಾಸಿಯಮ್ನಂತಹ ವಿವಿಧ ಪೋಷಕಾಂಶಗಳಲ್ಲಿ ಸಮೃದ್ಧವಾಗಿದೆ.

ಕಡಲೆಕಾಯಿಯನ್ನು ವಿವಿಧ ರೀತಿಯಲ್ಲಿ ಆಹಾರದಲ್ಲಿ ಸೇರಿಸಬಹುದು. ನೆನೆಸಿದ ಕಡಲೆಕಾಯಿಯನ್ನು ತಿನ್ನುವುದರಿಂದ ಲೆಕ್ಕವಿಲ್ಲದಷ್ಟು ಪ್ರಯೋಜನಗಳಿವೆ ಎಂದು ಪೌಷ್ಟಿಕತಜ್ಞರು ಹೇಳುತ್ತಾರೆ.

ಕಡಲೆಕಾಯಿಯಲ್ಲಿ ಹೆಚ್ಚಿನ ಕ್ಯಾಲೋರಿಗಳಿದ್ದರೂ, ಕಡಲೆಕಾಯಿ ಚಯಾಪಚಯವನ್ನು ಹೆಚ್ಚಿಸುವ ಮೂಲಕ ಬೊಜ್ಜು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಕೊಬ್ಬನ್ನು ಸುಡಲು ಉತ್ತಮ ಚಯಾಪಚಯ ದರವನ್ನು ಹೊಂದಿರುವುದು ಮುಖ್ಯವಾಗಿದೆ. ಆದ್ದರಿಂದ ನೆನೆಸಿದ ಕಡಲೆಯನ್ನು ನಿಮ್ಮ ಆಹಾರದಲ್ಲಿ ಪ್ರತಿದಿನ ಸೇರಿಸಿ.

ನೆನೆಸಿದ ಶೇಂಗಾ ಹೃದಯದ ಆರೋಗ್ಯವನ್ನು ಸುಧಾರಿಸಲು ಉತ್ತಮವಾಗಿದೆ. ರಕ್ತ ಪರಿಚಲನೆಯನ್ನು ಹೆಚ್ಚಿಸುವ ಮೂಲಕ, ಶೇಂಗಾ ರಕ್ತವನ್ನು ಶುದ್ಧೀಕರಿಸುತ್ತದೆ. ದೇಹದಲ್ಲಿ ಕೊಬ್ಬನ್ನು ಸುಡುತ್ತದೆ. ಇದು ಆರೋಗ್ಯವನ್ನು ಕಾಪಾಡುತ್ತದೆ. ಅಲ್ಲದೆ ಶೇಂಗಾ ದೇಹಕ್ಕೆ ಶಾಖ ನೀಡಿ ಕೊಬ್ಬನ್ನು ಕರಗಿಸಿ ಕೊಲೆಸ್ಟ್ರಾಲ್ ಅನ್ನು ನಿಯಂತ್ರಿಸುತ್ತದೆ. ಕೆಟ್ಟ ಕೊಲೆಸ್ಟ್ರಾಲ್ ಅನ್ನು ಸುಡುತ್ತದೆ. ಕಡಲೆಕಾಯಿಯಲ್ಲಿ ಫೈಬರ್ ಸಮೃದ್ಧವಾಗಿದೆ. ನೆನೆಸಿದ ಕಡಲೆಕಾಯಿಯನ್ನು ಮುಂಜಾನೆ ಒಂದು ಹಿಡಿ ತಿಂದರೆ ಹೊಟ್ಟೆ ಶುದ್ಧವಾಗುತ್ತದೆ. ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ. ಇದು ಆಸಿಡಿಟಿಯನ್ನು ನಿವಾರಿಸುತ್ತದೆ. ಜೀರ್ಣಕ್ರಿಯೆ ಉತ್ತಮವಾಗಿದ್ದರೆ ವಿವಿಧ ರೋಗಗಳಿಗೆ ವಿದಾಯ ಹೇಳಬಹುದು.

## ಕೂದಲಿಗೆ ದೇಸಿ ತುಪ್ಪದ ಮಸಾಜ್

### ಬ್ಯೂಟಿ ಟಿಪ್ಸ್



ದೇಸೀ ತುಪ್ಪದ ಹತ್ತಾರು ಆರೋಗ್ಯ ಪ್ರಯೋಜನಗಳ ಬಗ್ಗೆ ಎಲ್ಲರಿಗೂ ತಿಳಿದಿದೆ. ಪ್ರತಿದಿನ ಕನಿಷ್ಠ ಒಂದು ಚಮಚ ತುಪ್ಪ ತಿನ್ನುವುದು ಆರೋಗ್ಯಕ್ಕೆ ಬಹಳ ಸೂಕ್ತ. ಕೂದಲಿನ ಸಮಸ್ಯೆಗಳನ್ನೂ ಇದು ನಿವಾರಿಸಬಲ್ಲದು. ತುಪ್ಪದಲ್ಲಿ ವಿಟಮಿನ್ ಎ, ಇ, ಜೊತೆಗೆ ಪ್ರೋಟೀನ್ ಮತ್ತು ಎಂಟಿಒಕ್ಸಿಡೆಂಟ್ಗಳಿರುತ್ತವೆ. ಇದು ಕೂದಲಿಗೆ ಪೋಷಣೆ ನೀಡುತ್ತವೆ. ತುಪ್ಪದಲ್ಲಿರುವ ವಿಟಮಿನ್ ಇ ಕೂದಲು ಉದುರುವುದನ್ನು ತಡೆಯುತ್ತದೆ ಮತ್ತು ನೆತ್ತಿಯನ್ನು ಬಲಪಡಿಸುತ್ತದೆ. ದೇಸಿ ತುಪ್ಪ ತಲೆಹೊಟ್ಟನ್ನು ಕೂಡ ಹೋಗಲಾಡಿಸುತ್ತದೆ. ವಾರಕ್ಕೊಮ್ಮೆ ನೆತ್ತಿಗೆ ತುಪ್ಪದಿಂದ ಮಸಾಜ್ ಮಾಡಿಕೊಳ್ಳಬೇಕು. ಈ ರೀತಿ ಮಾಡುವುದರಿಂದ ಡೆಡ್ ಸ್ಕಿನ್ ತೆಗೆದುಹಾಕಬಹುದು. ಇದರಿಂದ ಕೂದಲಿನಲ್ಲಿ ರಕ್ತ ಪರಿಚಲನೆ ಹೆಚ್ಚಿಸುತ್ತದೆ. ತುಪ್ಪವು ಕೂದಲಿನ ಬೆಳವಣಿಗೆಯನ್ನು ಉತ್ತೇಜಿಸುವ ಎಂಟಿಮೈಕ್ರೊಬಿಯಲ್ ಗುಣಲಕ್ಷಣಗಳನ್ನು ಹೊಂದಿದೆ. ಹಾಗಾಗಿ ದಟ್ಟನೆಯ ಕಪ್ಪು ಕೂದಲನ್ನು ಹೊಂದಲು ಬಯಸುವವರು ನಿಯಮಿತವಾಗಿ ತುಪ್ಪದ ಮಸಾಜ್ ಮಾಡಿಕೊಳ್ಳಬೇಕು. ನಿಯಮಿತವಾಗಿ ತುಪ್ಪವನ್ನು ಅನ್ವಯಿಸುವುದರಿಂದ ಕೂದಲಿನ ಹೊಳಪು ಹೆಚ್ಚಾಗುತ್ತದೆ. ಕೂದಲನ್ನು ಇದು ಮೃದುವಾಗಿಸುತ್ತದೆ.

## ವಿಶ್ವಮಾನವಶಾಸ್ತ್ರ ದಿನ




ವಿಶ್ವ ಮಾನವಶಾಸ್ತ್ರ ದಿನವು ಮಾನವೀಯತೆ, ಅದರ ಸಾಂಸ್ಕೃತಿಕ ವೈವಿಧ್ಯತೆ ಮತ್ತು ಸಾಮಾಜಿಕ ಸಂಕೀರ್ಣತೆಗಳ ಅಧ್ಯಯನದ ಆಚರಣೆಯಾಗಿದೆ. ಈ ದಿನವನ್ನು ಪ್ರತಿ ವರ್ಷ ಫೆಬ್ರವರಿ ಮೂರನೇ ಗುರುವಾರದಂದು ಆಚರಿಸಲಾಗುತ್ತದೆ. ಇದು ನಮ್ಮ ಜಗತ್ತನ್ನು ಅರ್ಥಮಾಡಿಕೊಳ್ಳುವಲ್ಲಿ ಮಾನವಶಾಸ್ತ್ರದ ಪ್ರಾಮುಖ್ಯತೆಯ ಜ್ಞಾಪನೆಯಾಗಿ ಕಾರ್ಯನಿರ್ವಹಿಸುತ್ತದೆ. ಮಾನವ ವಿಕಸನ ಮತ್ತು ಜೀವಶಾಸ್ತ್ರದ ನಮ್ಮ ತಿಳುವಳಿಕೆಗೆ ಮಾನವಶಾಸ್ತ್ರವು ಪ್ರಮುಖ ಕೊಡುಗೆಗಳನ್ನು ನೀಡಿದೆ. ಪಳೆಯುಳಿಕೆಗಳು, ಡಿಎನ್ಎ ಮತ್ತು ಇತರ ಜೈವಿಕ ಪುರಾವೆಗಳನ್ನು ಅಧ್ಯಯನ ಮಾಡುವ ಮೂಲಕ, ಮಾನವಶಾಸ್ತ್ರಜ್ಞರು ನಮ್ಮ ಜಾತಿಯ ವಿಕಸನೀಯ ಇತಿಹಾಸವನ್ನು ಪುನರ್ನಿರ್ಮಿಸಿದ್ದಾರೆ ಮತ್ತು ನಮ್ಮನ್ನು ಅನನ್ಯವಾಗಿ ಮಾನವರನ್ನಾಗಿ ಮಾಡಿದ ಜೈವಿಕ ಮತ್ತು ನಡವಳಿಕೆಯ ರೂಪಾಂತರಗಳ ಮೇಲೆ ಬೆಳಕು ಚೆಲ್ಲಿದ್ದಾರೆ. ನಮ್ಮ ಜಾತಿಯ ಮೂಲಗಳು ಮತ್ತು ನಮ್ಮ ಜೈವಿಕ ಮತ್ತು ಸಾಂಸ್ಕೃತಿಕ ವೈವಿಧ್ಯತೆಯನ್ನು ರೂಪಿಸಿದ ಅಂಶಗಳನ್ನು ಅರ್ಥಮಾಡಿಕೊಳ್ಳಲು ಇದು ನಮಗೆ ಸಹಾಯ ಮಾಡುತ್ತದೆ.

ಮಾನವಶಾಸ್ತ್ರವು ಮಾನವರು, ಅವರ ನಡವಳಿಕೆ ಮತ್ತು ಅವರ ಸಮಾಜಗಳ ವೈಜ್ಞಾನಿಕ ಅಧ್ಯಯನವಾಗಿದೆ. ಕ್ಷೇತ್ರವು ಭಾಷೆ, ಸಂಸ್ಕೃತಿ, ಜೀವಶಾಸ್ತ್ರ, ಪುರಾತತ್ತ್ವಶಾಸ್ತ್ರ ಮತ್ತು ಇತಿಹಾಸ ಸೇರಿದಂತೆ ವ್ಯಾಪಕ ಶ್ರೇಣಿಯ ವಿಷಯಗಳನ್ನು ಒಳಗೊಂಡಿದೆ. ಮಾನವಶಾಸ್ತ್ರಜ್ಞರು ಕ್ಷೇತ್ರಕಾರ್ಯ, ಜನಾಂಗಶಾಸ್ತ್ರ ಮತ್ತು ಭಾಗವಹಿಸುವವರ ವೀಕ್ಷಣೆ ಸೇರಿದಂತೆ ಸಂಶೋಧನೆ ನಡೆಸಲು ವಿವಿಧ ವಿಧಾನಗಳನ್ನು ಬಳಸುತ್ತಾರೆ.

ಮಾನವಶಾಸ್ತ್ರದ ಪ್ರಮುಖ ಕೊಡುಗೆಯೆಂದರೆ ಮಾನವ ನಡವಳಿಕೆಯನ್ನು ಅರ್ಥಮಾಡಿಕೊಳ್ಳುವ ಪ್ರಾಮುಖ್ಯತೆಯ ಮೇಲೆ ಅದರ ಒತ್ತು. ಮಾನವಶಾಸ್ತ್ರಜ್ಞರು ವರ್ತನೆಯನ್ನು ಪ್ರತ್ಯೇಕವಾಗಿ ಅರ್ಥಮಾಡಿಕೊಳ್ಳಲು ಸಾಧ್ಯವಿಲ್ಲ ಆದರೆ ವಿಶಾಲವಾದ ಸಾಂಸ್ಕೃತಿಕ ಮತ್ತು ಸಾಮಾಜಿಕ ಸಂದರ್ಭದಲ್ಲಿ ನೆಲೆಗೊಂಡಿರಬೇಕು ಎಂದು ನಿರೂಪಿಸಿದ್ದಾರೆ.

ವಿಶ್ವ ಮಾನವಶಾಸ್ತ್ರ ದಿನದ ಮೂಲಗಳನ್ನು 1902 ರಲ್ಲಿ ಅಮೇರಿಕನ್ ಆಂಥ್ರೊಪೊಲಾಜಿಕಲ್ ಅಸೋಸಿಯೇಷನ್ (೦೦೦) ಸ್ಥಾಪನೆಯಿಂದ ಗುರುತಿಸಬಹುದು. ಸಂಘವು 10,000 ಕ್ಕೂ ಹೆಚ್ಚು ಸದಸ್ಯರನ್ನು ಹೊಂದಿರುವ ವಿಶ್ವದ ಮಾನವಶಾಸ್ತ್ರಜ್ಞರ ಅತಿದೊಡ್ಡ ವೃತ್ತಿಪರ ಸಂಸ್ಥೆಯಾಗಿದೆ. 2015 ರಲ್ಲಿ, ಮಾನವಶಾಸ್ತ್ರದ ಸಂಶೋಧನೆ ಮತ್ತು ಅಭ್ಯಾಸದ ವೈವಿಧ್ಯತೆ ಮತ್ತು ಶ್ರೀಮಂತಿಕೆಯನ್ನು ಆಚರಿಸಲು ೦೦೦ ಫೆಬ್ರವರಿಯ ಮೂರನೇ ಗುರುವಾರವನ್ನು ವಿಶ್ವ ಮಾನವಶಾಸ್ತ್ರ ದಿನ ಎಂದು ಘೋಷಿಸಿತು.

ವಿಶ್ವ ಮಾನವಶಾಸ್ತ್ರ ದಿನದ ಮಹತ್ವವು ಇಂದಿನ ಜಗತ್ತಿನಲ್ಲಿ ಮಾನವಶಾಸ್ತ್ರದ ಪ್ರಾಮುಖ್ಯತೆಯ ಅರಿವು ಮತ್ತು ತಿಳುವಳಿಕೆಯನ್ನು ಉತ್ತೇಜಿಸುವಲ್ಲಿ ಅದರ ಮಹತ್ವದಲ್ಲಿದೆ. ಈ ದಿನವು ಮಾನವಶಾಸ್ತ್ರಜ್ಞರಿಗೆ ತಮ್ಮ ಕೆಲಸವನ್ನು ಪ್ರದರ್ಶಿಸಲು ಮತ್ತು ವಿದ್ಯಾರ್ಥಿಗಳು ಮತ್ತು ವಿದ್ವಾಂಸರಿಂದ ಹಿಡಿದು ಸಾರ್ವಜನಿಕರವರೆಗೂ ವ್ಯಾಪಕ ಪ್ರೇಕ್ಷಕರೊಂದಿಗೆ ತೊಡಗಿಸಿಕೊಳ್ಳಲು ಅವಕಾಶವನ್ನು ಒದಗಿಸುತ್ತದೆ. ಮಾನವ ವೈವಿಧ್ಯತೆ ಮತ್ತು ಸಾಮಾಜಿಕ ಸಂಕೀರ್ಣತೆಯ ಬಗ್ಗೆ ನಮ್ಮ ತಿಳುವಳಿಕೆಗೆ ಮಾನವಶಾಸ್ತ್ರವು ನೀಡಿದ ಕೊಡುಗೆಗಳನ್ನು ಪ್ರತಿಬಿಂಬಿಸಲು ಇದು ಒಂದು ಸಂದರ್ಭವಾಗಿದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಆಧ್ಯಾತ್ಮಿಕ ಚಿಂತನೆ, ಧರ್ಮಕಾರ್ಯಾಸಕ್ತಿ , ದೂರ ಪ್ರಯಾಣ, ವಿದ್ಯಾ ಯೋಗ

**ವೃಷಭ:** ಅನಿರೀಕ್ಷಿತ ಲಾಭ, ಉದ್ಯೋಗ ಪ್ರಾಪ್ತಿ, ಅಡೆತಡೆಗಳಿಂದ ಕಾರ್ಯ ಜಯ, ಮಿತ್ರರಿಂದ ಸಹಕಾರ

**ಮಿಥುನ:** ಕರ್ಮಗಳ ಫಲಗಳ ಕಾಟ, ಉದ್ಯೋಗ ನಷ್ಟ ಮತ್ತು ಚಿಂತೆ, ಪ್ರೀತಿ-ಪ್ರೇಮದಲ್ಲಿ ತೊಂದರೆ, ಆರ್ಥಿಕ ಮಂದಗತಿ

**ಕಟಕ:** ಸ್ಥಿರಾಸ್ತಿ ತೊಂದರೆ, ತಂದೆಯಿಂದ ಸಹಾಯ ಸಹಕಾರ, ಪ್ರಯಾಣದಿಂದ ಕಾರ್ಯಜಯ, ಸಾಲ ಮಾಡುವಿರಿ

**ಸಿಂಹ:** ಸ್ಟೇಷನ್ ಕೋರ್ಟ್ ಅಲೆದಾಟ, ಸೋಲು ನಷ್ಟ ನಿರಾಸೆಗಳು, ನೆರೆಹೊರೆಯವರಿಂದ ತೊಂದರೆ, ಮಕ್ಕಳಿಂದ ಎಡವಟ್ಟುಗಳು

**ಕನ್ಯಾ:** ಪಾಲುದಾರಿಕೆಯಲ್ಲಿ ತೊಂದರೆಗಳು, ಆರ್ಥಿಕವಾಗಿ ಅಲ್ಪ ಚೇತರಿಕೆ, ಸಾಲ ದೊರೆಯುವುದು, ಮಾತಿನಿಂದ ತೊಂದರೆ

**ತುಲಾ:** ಸ್ವಯಂಕೃತ ಅಪರಾಧಗಳು, ಉಡಾಫೆತನ ಸೋಮಾರಿತನ, ಆರೋಗ್ಯ ಚೇತರಿಕೆ, ಶತ್ರುಗಳು ಮಿತ್ರರಾಗುವರು

**ವೃಶ್ಚಿಕ:** ದುಃಸ್ವಪ್ನ, ದೈವ ಚಿಂತನೆ, ಮಕ್ಕಳಲ್ಲಿ ಮಂದತ್ವ, ಯೋಜನೆಗಳು, ದಾಂಪತ್ಯ ಸೌಖ್ಯದಿಂದ ಅಂತರ

**ಧನಸ್ಸು:** ವ್ಯಾಪಾರ-ವ್ಯವಹಾರದಲ್ಲಿ ಏಳೆದಾಟ, ಗುಪ್ತ ಧನಾಗಮನ , ಸ್ತ್ರೀಯರಿಂದ ಲಾಭ, ಆರೋಗ್ಯದಲ್ಲಿ ಚೇತರಿಕೆ

**ಮಕರ:** ಉದ್ಯೋಗದಲ್ಲಿ ನಿರಾಸಕ್ತಿ, ದೂರ ಪ್ರಯಾಣ, ಬಂಧು ಬಾಂಧವರಿಂದ ಅಂತರ, ಗೌರವಕ್ಕೆ ಧಕ್ಕೆ

**ಕುಂಭ:** ಆರ್ಥಿಕ ಚೇತರಿಕೆ, ತಂದೆಯ ಆರೋಗ್ಯದಲ್ಲಿ ವ್ಯತ್ಯಾಸ, ಉನ್ನತ ವಿದ್ಯಾಭ್ಯಾಸದ ಚಿಂತೆ, ಸಾಮರ್ಥ್ಯದಲ್ಲಿ ಅಪನಂಬಿಕೆ

**ಮೀನ:** ಆಕಸ್ಮಿಕ ಅವಘಡಗಳು, ಸ್ವಯಂಕೃತ ಅಪರಾಧಗಳು, ಸೋಲು ನಷ್ಟ ನಿರಾಸೆಗಳು, ವ್ಯಾಪಾರ ವ್ಯವಹಾರದಲ್ಲಿ ಸಮಸ್ಯೆಗಳು

## ಶ್ರೀ ಭಗವಾನ್ ವಿಶ್ವಕರ್ಮಬ್ರಹ್ಮ ರಥೋತ್ಸವ



ವಿಶ್ವಕರ್ಮ ಸೇವಾ ಸಮಿತಿ,ಬೆಂಗಳೂರು ವತಿಯಿಂದ ಫೆ 22 ರಂದು 41ನೇ ವರ್ಷದ ಶ್ರೀ ಭಗವಾನ್ ವಿಶ್ವಕರ್ಮಬ್ರಹ್ಮ ರಥೋತ್ಸವ ಬೆಳಿಗ್ಗೆ 7.30ರಿಂದ ಮಧ್ಯಾನ್ಹ 2 ಗಂಟೆಯವರೆಗೆ ಹಾಗು ವಿಶ್ವಕರ್ಮ ಜನ ಜಾಗೃತಿ ಸಮಾವೇಶ ಸಾಯಂಕಾಲ 4 ಗಂಟೆಗೆ ಟೌನ್ ಹಾಲ್ ನಲ್ಲಿ ಅದ್ದೂರಿ ಸಮಾರಂಭವನ್ನು ಹಮ್ಮಿಕೊಂಡಿದೆ.

ಈ ಅದ್ದೂರಿ ರಥೋತ್ಸವ ಕಾರ್ಯಕ್ರಮಕ್ಕೆ ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳು ಶ್ರೀ ಸಿದ್ದರಾಮಯ್ಯ ಹಾಗು ಉಪ ಮುಖ್ಯ ಮಂತ್ರಿ ಡಿ ಕೆ ಶಿವಕುಮಾರ್. ಡಾ ಚಂದ್ರಶೇಖರ ಕಂಬಾರ , ದಿನೇಶ್ ಗುಂಡೂ ರಾವ್, ಪಿ ಸಿ ಮೋಹನ್, ತೇಜಸ್ವಿ ಸೂರ್ಯ, ರಾಮಲಿಂಗ ರೆಡ್ಡಿ ಡಾ ಎಂ ಬಿ ಪಾಟೀಲ್ , ಉದಯ್ ಗರುಡಾಚಾರ್, ಝಮೀರ್ ಅಹ್ಮದ್ ಖಾನ್, ಪರಮ ಜಗದ್ಗುರು ಅನಂತ ವಿಭೂಷಿತ ಶಿವ ಸುಜ್ಞಾನ ತೀರ್ಥ ಮಹಾಸ್ವಾಮಿಗಳು , ಕಾಳ ಹಂಸ್ತೇಂದ್ರ ಮಹಾ ಸ್ವಾಮಿಗಳು, ಕಾಳ ಹಂಸ್ತೇಂದ್ರ ಸರಸ್ವತಿ ಸ್ವಾಮಿಗಳು, ನೀಲಕಂಠಚಾರ್ಯ ಮಹಾ ಸ್ವಾಮಿಗಳು , ಬುದ್ಧಾತ್ಮಾನಂದ ಸರಸ್ವತಿ ಸ್ವಾಮಿಗಳು , ಶಂಕರಾತ್ಮಾನಂದ ಸರಸ್ವತಿ ಮಹಾಸ್ವಾಮಿಗಳು ಸುಜ್ಞಾನ ಮೂರ್ತಿ ಸ್ವಾಮಿಗಳು , ಸುಬ್ಬರಾಯಾಚಾರ್ ಸ್ವಾಮಿಗಳು , ವೀರಯ್ಯ ಬೊಟ್ಲಯ್ಯ ಹಾಗು ಮುಂತಾದವರು ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ ಎಂದು ವಿಶ್ವಕರ್ಮ ಸೇವಾ ಸಮಿತಿಯ ಅಧ್ಯಕ್ಷರಾದ ಡಾ. ಆರ್ ಮಧುಸೂಧನ್ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಸಂಜೆ ಟೌನ್ ಹಾಲ್ ನಲ್ಲಿ ನಡೆಯಲಿರುವ ವಿಶ್ವಕರ್ಮ ಜನ ಜಾಗೃತಿ ಸಮಾವೇಶ ದಲ್ಲಿ ವಿಶ್ವಕರ್ಮ ರಾಷ್ಟ್ರಮಟ್ಟ ಸೇವಾ ರತ್ನ ಪ್ರಶಸ್ತಿಯನ್ನು ವಿಶ್ವಕರ್ಮ ಜನಾಂಗದವರೇ ಆದ ಅರುಣ್ ಯೋಗಿರಾಜ್ , ಖ್ಯಾತ ಶಿಲ್ಪಿ ಗಳು, ಟಿ ಎಸ್. ದಿವ್ಯ, ಚಿನ್ನದ ಪದಕ ವಿಜೇತೆ , ನ್ಯಾಷನಲ್ ಶೂಟಿಂಗ್ ಚಾಂಪಿಯನ್ಶಿಪ್,ಪದ್ಮಶ್ರೀ ಡಾ ಸಿ ಆರ್ ಚಂದ್ರಶೇಖರ್, ಪ್ರೊಫೆಸರ್, ನಿಮ್ಹಾನ್ಸ್,ಪದ್ಮಶ್ರೀ ಡಾ ರಾಜಣ್ಣ, ಮಾಜಿ ಆಯುಕ್ತರು, ಅಂಗ ವಿಕಲ ವ್ಯಕ್ತಿಗಳ ಆದಿನಿಯಮ, ಕರ್ನಾಟಕ ಸರ್ಕಾರಡಾ ಜಿ ಜಿ ತಿಲಕ್, ಪ್ರೊಫೆಸರ್ - ವೈದೇಹಿ ಇನ್ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್ ಇನ್ನೂ ಹಲವರಿಗೆ ಸನ್ಮಾನವನ್ನು ಮಾಡಲು, ವಿಶ್ವಕರ್ಮ ಸೇವಾ ಸಮಿತಿ ಪದಾಧಿಕಾರಿಗಳು ನಿರ್ಧರಿಸಿದೆ. ಇದೇ ಸಂದರ್ಭದಲ್ಲಿ ವಿಶ್ವಕರ್ಮ ಜನಾಂಗಕ್ಕೆ ದುಡಿದ ಮಹನೀಯರಿಗೆ ವಿಶ್ವಕರ್ಮ ಸಮುದಾಯ ಸೇವಾ ರತ್ನ , ಕುಶಲ ಕರ್ಮಿಗಳಲ್ಲಿ ನೈಪುಣ್ಯತೆ ಹೊಂದಿರುವ ಹಾಗು ಹೆಸರಾಂತ ಚಿನ್ನ ಬೆಳ್ಳಿ ಕುಶಲ ಕರ್ಮಿಗಳಿಗೆ ಸಹ ಸೇವಾ ಸಮಿತಿ ಪದಾಧಿಕಾರಿಗಳು ಸನ್ಮಾನ ಹಮ್ಮಿಕೊಂಡಿದೆ. ಹೆಚ್ಚಿನ ವಿವರಗಳಿಗೆ ಸಂಪರ್ಕಿಸಿ : 9341069349, 9880025602

ಸಂಜೆ ಮುಗಿಲು
ಗುರುವಾರ
15.2.2024



# ಉಕ್ರೇನ್ ಯುದ್ಧದಿಂದ ಹಿಂದೆ ಸರಿದರೆ ರಷ್ಯಾ ಅಧ್ಯಕ್ಷ ಪುಟಿನ್ ಹತ್ಯೆ: ಮಸ್ಕ್!



**ಉಕ್ರೇನ್ :** ಉಕ್ರೇನ್ ಮೇಲೆ ನಿರಂತರ ದಾಳಿ ನಡೆಸುತ್ತಿರುವ ರಷ್ಯಾಕ್ಕೆ ಯುದ್ಧದಿಂದ ಹಿಂದೆ ಸರಿಯಬಾರದು ಎಂದು ಒತ್ತಡವಿದೆ. ಹೀಗಾಗಿ ಸಂಘರ್ಷ ಕೊನೆಗಾಣಿಸಲು ರಷ್ಯಾಕ್ಕೆ ಯಾವುದೇ ಮಾರ್ಗವಿಲ್ಲ ಎಂದು ಟೆಸ್ಲಾ ಮತ್ತು ಸ್ಪೇಸ್‌ಎಕ್ಸ್ ಮುಖ್ಯಸ್ಥ ಎಲೋನ್ ಮಸ್ಕ್ ಹೇಳಿದ್ದಾರೆ. ಪುಟಿನ್ ಯುದ್ಧದಿಂದ ಹಿಂದೆ ಸರಿದರೆ ಅವರನ್ನು ಕೊಲ್ಲುವ ಸಾಧ್ಯತೆಯಿದೆ. ಈ ಕಾರಣದಿಂದಲೇ ಪುತಿನ್ ಯುದ್ಧ ಮುಂದುವರಿಸಿದ್ದಾರೆ. ಅವರ ಮೇಲೆ ಹೆಚ್ಚಿನ ಒತ್ತಡವಿದೆ ಎಂದರು. ರಿಪಬ್ಲಿಕನ್ ಪಕ್ಷದ ಪ್ರತಿನಿಧಿಗಳೊಂದಿಗೆ ಚರ್ಚೆಯಲ್ಲಿ ಈ ಅಭಿಪ್ರಾಯ ವ್ಯಕ್ತಪಡಿಸಿಡಿದ್ದಾರೆ. ಉಕ್ರೇನ್‌ನಲ್ಲಿ ರಷ್ಯಾ ಸೋಲುವ ಸಾಧ್ಯತೆ ಇಲ್ಲ. ಉಕ್ರೇನ್ ಗೆಲ್ಲುತ್ತದೆ ಎಂದು ಭಾವಿಸುವುದು ದೇಶಕ್ಕೆ ಒಳ್ಳೆಯದಲ್ಲ ಎಂದರು. ಯುದ್ಧವು ದೀರ್ಘಕಾಲದವರೆಗೆ ಮುಂದುವರಿದರೆ ಅದು ಅವರ ನಷ್ಟವಾಗಿದೆ. ಇತ್ತೀಚೆಗಷ್ಟೇ ಅಮೆರಿಕಾ ಘೋಷಿಸಿರುವ ಆರ್ಥಿಕ ನೆರವಿನಿಂದ ಯಾವುದೇ ಪ್ರಯೋಜನವಾಗುವುದಿಲ್ಲ ಎಂದರು.

# ಅಲಾಸ್ಕಪಾಕ್ಸ್‌ಸೋಂಕು: ಮೊದಲ ಸಾವಿನ ಪ್ರಕರಣ ದಾಖಲು

**ವಾಷಿಂಗ್ಟನ್:** ಸಿಡುಬು ರೋಗವನ್ನು ಹೋಲುವ, ಅತ್ಯಂತ ಮಾರಣಾಂತಿಕ ಸೋಂಕು ಅಲಾಸ್ಕಪಾಕ್ಸ್‌ನಿಂದ ಅಮೆರಿಕದ ವ್ಯಕ್ತಿಯೊಬ್ಬರು ಮೃತಪಟ್ಟಿದ್ದು ಇದು ಅಲಾಸ್ಕಪಾಕ್ಸ್‌ನಿಂದ ದಾಖಲಾದ ಪ್ರಥಮ ಸಾವಿನ ಪ್ರಕರಣವಾಗಿದೆ.



ಈ ವೈರಸ್ ಅಮೆರಿಕದ ಅಲಾಸ್ಕಾ ರಾಜ್ಯದ ಫೈರ್ ಬ್ಯಾಂಕ್ಸ್‌ನಲ್ಲಿ 2015ರಲ್ಲಿ ಮೊದಲ ಬಾರಿ ವರದಿಯಾಗಿದ್ದು 2015ರಿಂದ ಕೇವಲ 7 ಸೋಂಕು ಪ್ರಕರಣ ಮಾತ್ರ ವರದಿಯಾಗಿದೆ.

ಎಕೆವಿಪಿ ಎಂದು ಕರೆಯಲಾಗುವ ಈ ಸೋಂಕು ಶಕಗಳಿಂದ(ಉದ್ದವಾದ ಬಾಚಿ ಹಲ್ಲನ್ನು ಹೊಂದಿರುವ ಇಲಿ, ಅಳಿಲು ಇತ್ಯಾದಿ ಸಸ್ತನಿಗಳು) ಮಾನವನಿಗೆ ಹರಡುತ್ತದೆ. ಚರ್ಮದ ಮೇಲೆ ಸಣ್ಣ ಹುಣ್ಣು, ದುಗ್ಧರಸ ಗ್ರಂಥಿ ಊದಿಕೊಳ್ಳುವುದು ಮತ್ತು ಸ್ನಾಯುನೋವು ಈ ಸೋಂಕಿನ ಲಕ್ಷಣವಾಗಿದೆ. ಈ ಸೋಂಕಿನಿಂದ ಮೃತಪಟ್ಟ ವ್ಯಕ್ತಿ ಅಲಾಸ್ಕಾದ ಕೆನೆಯ್ ದ್ವೀಪಕಲ್ಪದಲ್ಲಿ ಒಬ್ಬಂಟಿಯಾಗಿ ವಾಸಿಸುತ್ತಿದ್ದ ಮತ್ತು ಬೆಕ್ಕು ಕಚ್ಚಿದ್ದರಿಂದ ಸೋಂಕಿಗೆ ಒಳಗಾಗಿದ್ದ ಎಂದು ಮೂಲಗಳನ್ನು ಉಲ್ಲೇಖಿಸಿ 'ದಿ ಟೆಲಿಗ್ರಾಫ್' ವರದಿ ಮಾಡಿದೆ.

# ಪತ್ನಿಯ ಶಿರಚ್ಛೇದಗೈದು ತಲೆಯೊಂದಿಗೆ ರಕ್ತಸಿಕ್ತ ಬಟ್ಟೆಯಲ್ಲೇ ತಿರುಗಾಡಿದ!

**ಕೋಲ್ಕತ್ತಾ:** ವ್ಯಕ್ತಿಯೊಬ್ಬ ಪತ್ನಿಯ ಶಿರಚ್ಛೇದ ಮಾಡಿ ತಲೆಯೊಂದಿಗೆ ಊರು ತುಂಬಾ ಓಡಾಡಿದ ಘಟನೆಯೊಂದು ಪಶ್ಚಿಮ ಬಂಗಾಳದ ಪೂರ್ವ ಮಿಡ್ನಾಪುರದಲ್ಲಿ ನಡೆದಿದೆ. ವ್ಯಕ್ತಿಯನ್ನು ಗೌತಮ್ ಗುಚ್ಛೈತ್ (40) ಎಂದು ಗುರುತಿಸಲಾಗಿದೆ. ಗೌತಮ್ ತನ್ನ ಪತ್ನಿಯನ್ನು ಕೊಲೆ ಮಾಡಿದ ಬಳಿಕ ರಕ್ತಸಿಕ್ತ ಧಿರಿಸಿನಲ್ಲೇ ಚಿಸ್ತಿಪುರ ಬಸ್ ನಿಲ್ದಾಣದ ಬಳಿ ತಿರುಗಾಡಿದ್ದಾನೆ. ಜೊತೆಗೆ ಆತನ ಕೈಯಲ್ಲಿ ಪತ್ನಿ ತಲೆ ಇರುವುದನ್ನು ನೋಡಿ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಸ್ಥಳಕ್ಕೆ ದೌಡಾಯಿಸಿದ ಪೊಲೀಸರು ವ್ಯಕ್ತಿಯನ್ನು ಬಂಧಿಸಿದ್ದಾರೆ. ನಂತರ ಆತನನ್ನು ಮನೆಗೆ ಕರೆದುಕೊಂಡು ಹೋಗಿ ಪತ್ನಿಯ ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದಾರೆ. ಪೊಲೀಸರ ಪ್ರಕಾರ, ವ್ಯಕ್ತಿ ಮಾನಸಿಕ ಅಸ್ವಸ್ಥನಾಗಿದ್ದು, ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ಪತ್ನಿಯನ್ನು ಚೂಪಾದ ಆಯುಧದಿಂದ ಕೊಲೆ ಮಾಡಿದ್ದಾನೆ ಎನ್ನಲಾಗಿದೆ.



# ಕೈ ಹಿಡಿದುಕೊಂಡು ಪ್ರಾಣ ಬಿಟ್ಟ ಡಚ್ ಮಾಜಿ ಪ್ರಧಾನಿ ದಂಪತಿ



**ನೆದರ್ಲ್ಯಾಂಡ್:** ಡಚ್ ಮಾಜಿ ಪ್ರಧಾನಿ ತಮ್ಮ ಪತ್ನಿಯೊಂದಿಗೆ ಕೈ ಹಿಡಿದುಕೊಂಡು ಪ್ರಾಣ ಬಿಟ್ಟ ಘಟನೆ ನೆದರಲ್ಯಾಂಡ್ಸ್‌ನಲ್ಲಿ ನಡೆದಿದೆ.

ಡ್ರೈಸ್ ವ್ಯಾನ್ ಆಗ್ಟ್ ಅವರು ತಮ್ಮ ಪತ್ನಿ ಯುಜೆನಿಯೊಂದಿಗೆ ದಯಾಮರಣವನ್ನು ಕೇಳಿದ್ದರು.

ಇದಕ್ಕೆ ಅನುಮತಿ ಸಿಕ್ಕಿತ್ತು. ಈ ಹಿನ್ನೆಲೆಯಲ್ಲಿ ಇಬ್ಬರು ದಯಾಮರಣದ ಮೂಲಕ ತಮ್ಮ ಹುಟ್ಟೂರು ನಿಜ್ಮೆಗನ್‌ನಲ್ಲಿ ಜೊತೆಯಾಗಿ ಮೃತಪಟ್ಟಿದ್ದಾರೆ. ವ್ಯಾನ್ ಆಗ್ಟ್ ಮತ್ತು ಅವರ ಪತ್ನಿ ಯುಜೆನಿ ವ್ಯಾನ್ ಇಬ್ಬರಿಗೂ 93 ವರ್ಷ ವಯಸ್ಸಾಗಿತ್ತು.

ಆಗ್ಟ್ ಅವರು 1977 ರಿಂದ 1982ರೌರೆಗೆ ನೆದರ್ಲ್ಯಾಂಡ್ಸ್‌ನ ಪ್ರಧಾನಮಂತ್ರಿಯಾಗಿದ್ದರು. ಕ್ರಿಶ್ಚಿಯನ್ ಡೆಮಾಕ್ರಟಿಕ್ ಅಪೀಲ್ ಪಕ್ಷದ ಮೊದಲ ನಾಯಕರಾಗಿದ್ದರು. ಮೂಲಗಳ ಪ್ರಕಾರ, ಈ ದಂಪತಿ ಕೆಲ ಸಮಯದಿಂದ ಅನಾರೋಗ್ಯದಿಂದ ಬಳಲುತ್ತಿದ್ದರು. ಆಗ್ಟ್ 2019ರಲ್ಲಿ ಮೆದುಳಿನ ರಕ್ತಸ್ರಾವದಿಂದ ಬಳಲುತ್ತಿದ್ದರು ಮತ್ತು ಸಂಪೂರ್ಣವಾಗಿ ಚೇತರಿಸಿಕೊಂಡಿರಲಿಲ್ಲ. ಅವರ ಪತ್ನಿ ಅಸ್ವಸ್ಥರಾಗಿದ್ದರು. ಆದರೆ ಇಬ್ಬರಿಗೂ ಒಬ್ಬರನ್ನೊಬ್ಬರು ಬಿಟ್ಟು ಬದುಕಲು ಸಾಧ್ಯವಿಲ್ಲ ಎನ್ನಲಾಗಿತ್ತು.

ಇವರಿಬ್ಬರೂ ಪರಸ್ಪರ ಬೆಂಬಲದೊಂದಿಗೆ ಸುಮಾರು 70 ವರ್ಷಗಳ ಕಾಲ ಜೊತೆಯಾಗಿದ್ದರು. ಸಾಯುವವರೆಗೂ ಪತ್ನಿಯನ್ನು ಸದಾ ನನ್ನ ಹುಡುಗಿ ಎಂದು ಕರೆಯುತ್ತಿದ್ದರು. ಇವರ ಅಂತ್ಯಸಂಸ್ಕಾರ ಕಾರ್ಯವೂ ಖಾಸಗಿಯಾಗಿ ನಡೆದಿದೆ. ರೈಟ್ಸ್ ಫಾರಂ ಸಂಸ್ಥೆ ಈಗ ಈ ಹಿರಿಯ ದಂಪತಿ ನಿಧನದ ವಿಚಾರವನ್ನು ಅಧಿಕೃತಪಡಿಸಿದೆ.

# ಅಬುಧಾಬಿಯ ಮೊದಲ ಹಿಂದೂ ದೇವಾಲಯ ಉದ್ಘಾಟಿಸಿದ ಮೋದಿ





**ಗಲ್ಫ್:** ಇಸ್ಲಾಮಿಕ್ ರಾಷ್ಟ್ರ ಯುನೈಟೆಡ್ ಅರಬ್ ಎಮಿರೇಟ್ಸ್'ನಲ್ಲಿ ಪ್ರಧಾನಮಂತ್ರಿ, ನರೇಂದ್ರ ಮೋದಿ ಅವರು ಬಿಎಪಿಎಸ್ ಸ್ವಾಮಿನಾರಾಯಣ ದೇವಸ್ಥಾನವನ್ನ ಉದ್ಘಾಟಿಸಿದರು. ಈ ಮೂಲಕ ಅರಬ್ಬರ ನಾಡಿನಲ್ಲಿ ವೇದ ಮಂತ್ರ ಘೋಷಗಳ ನಡುವೆ ಮೊದಲ ಭವ್ಯ ಆಲಯ ಲೋಕಾರ್ಪಣೆ ಮಾಡಿದರು. ಈ ಬೃಹತ್ ದೇವಾಲಯವು ಅಬುಧಾಬಿಯ ಮೊದಲ ಹಿಂದೂ ದೇವಾಲಯವಾಗಿದ್ದು, ಇದನ್ನು 'ಮರಳಿನ ನಡುವೆ ಅರಳುವ ಕಮಲ' ಎಂದು ಕರೆಯಲಾಗುತ್ತಿದೆ. 27 ಎಕರೆಗಳಷ್ಟು ವಿಸ್ತಾರವಾಗಿರುವ ಬೃಹತ್ ಸ್ವಾಮಿನಾರಾಯಣ ದೇವಾಲಯವು ಭಾರತದ ಪ್ರಾಚೀನ ದೇವಾಲಯದ ಕಟ್ಟಡ ಶೈಲಿಗೆ ಅದ್ಭುತ ಉದಾಹರಣೆಯಾಗಿದೆ. ಅಬುಧಾಬಿಯ ಅಬು ಮುರೇಖಾ ಜಿಲ್ಲೆಯಲ್ಲಿ ಬೋಚಸನ್ವಾಸಿ ಅಕ್ಷರ ಪುರುಷೋತ್ತಮ್ ಸ್ವಾಮಿನಾರಾಯಣ ಸಂಸ್ಥಾ (ಃಂಕಖ) ಸಂಸ್ಥೆಯಿಂದ ಈ ದೇವಾಲಯವನ್ನು ನಿರ್ಮಿಸಲಾಗಿದೆ. ದೇವಾಲಯದ ನಿರ್ಮಾಣಕ್ಕೆ ಭೂಮಿಯನ್ನು ಯುಎಇ ಸರ್ಕಾರ ದಾನ ಮಾಡಿದೆ. 2015 ರಲ್ಲಿ ಪ್ರಧಾನಿ ಮೋದಿ ಯುಎಇಗೆ ಹೋದಾಗ, ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರು ದೇವಾಲಯಕ್ಕಾಗಿ 13.5 ಎಕರೆ ಭೂಮಿಯನ್ನು ಪ್ರಧಾನಿ ಮೋದಿಗೆ ಉಡುಗೊರೆಯಾಗಿ ನೀಡಿದ್ದರು. 27 ಎಕರೆ ಜಾಗದಲ್ಲಿ ದೇವಾಲಯವನ್ನು ನಿರ್ಮಿಸಲಾಗಿದ್ದು, 13.5 ಎಕರೆಯಲ್ಲಿ ದೇವಸ್ಥಾನ ಮತ್ತು 13.5 ಎಕರೆಯಲ್ಲಿ ವಾಹನ ನಿಲುಗಡೆ ಪ್ರದೇಶವಿದೆ. ವಾಹನ ನಿಲುಗಡೆಗೆ ಜಾಗವನ್ನು ಯುಎಇ ಸರ್ಕಾರ ನೀಡಿದೆ. 2019 ರಲ್ಲಿ 'ಸಹಿಷ್ಣುತೆಯ ವರ್ಷ'ದಲ್ಲಿ ಸರ್ಕಾರ ಉಳಿದ ಭೂಮಿಯನ್ನು ದೇವಾಲಯಕ್ಕೆ ನೀಡಿತ್ತು.

# ಮದ್ಯ ನೀತಿ ಪ್ರಕರಣ; ಕೇಜ್ರಿವಾಲ್‌ಗೆ 6ನೇ ಬಾರಿಗೆ ಇಡಿ ಸಮನ್ಸ್

**ನವದೆಹಲಿ:** ಮದ್ಯ ನೀತಿ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್‌ಗೆ 6ನೇ ಬಾರಿ ಸಮನ್ಸ್ ನೀಡಿದೆ.ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕರೂ ಆಗಿರುವ ಕೇಜ್ರಿವಾಲ್ ಅವರನ್ನು ಫೆ.19 ರಂದು ಕೇಂದ್ರ ತನಿಖಾ ಸಂಸ್ಥೆಯ ಮುಂದೆ ಹಾಜರಾಗುವಂತೆ ತಿಳಿಸಲಾಗಿದೆ. ಸತತ ಆರನೇ ಬಾರಿಗೆ ಕೇಜ್ರಿವಾಲ್ ಅವರನ್ನು ವಿಚಾರಣೆಗೆ ಹಾಜರಾಗುವಂತೆ ತನಿಖಾ ಸಂಸ್ಥೆ ಕರೆದಿದೆ. ಈ ಹಿಂದೆ ಫೆಬ್ರವರಿ 2, ಜನವರಿ 18 ಮತ್ತು ಜನವರಿ 3 ರಂದು ಮತ್ತು 2023 ರಲ್ಲಿ ಡಿಸೆಂಬರ್ 21 ಮತ್ತು ನವೆಂಬರ್ 2 ರಂದು ಅವರನ್ನು ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿತ್ತು. ದೆಹಲಿ ಸಿಎಂ ಕೇಜ್ರಿವಾಲ್, ಉದ್ದೇಶಪೂರ್ವಕವಾಗಿ ಸಮನ್ಸ್‌ಗೆ ಅವಿಧೇಯರಾಗಿದ್ದಾರೆ. ಕುಂಟು ನೆಪಗಳನ್ನು ನೀಡುತ್ತಿದ್ದಾರೆ ಎಂದು ಇ.ಡಿ ತನ್ನ ದೂರಿನಲ್ಲಿ ಆರೋಪಿಸಿದೆ. ಗೌರವಾನ್ವಿತ ಸ್ಥಾನದಲ್ಲಿರುವವರು ಹೀಗೆ ಮಾಡಿದರೆ, ರಾಜ್ಯದ ಜನತೆಗೆ ತಪ್ಪು ಸಂದೇಶ ಹೋಗುತ್ತದೆ ಎಂದು ಅಭಿಪ್ರಾಯಪಟ್ಟಿದೆ. ಕೇಜ್ರಿವಾಲ್ ಅವರು ಈ ಹಿಂದೆ ಇ.ಡಿಗೆ ಪತ್ರ ಬರೆದಿದ್ದರು. ಸಮನ್ಸ್‌ಗಳನ್ನು, ಅಕ್ರಮ ಮತ್ತು ರಾಜಕೀಯ ಪ್ರೇರಿತ ಎಂದು ಟೀಕಿಸಿದ್ದರು. ಚುನಾವಣೆ ಪ್ರಚಾರಕ್ಕೆ ಬರದಂತೆ ತಡೆಯುವ ಉದ್ದೇಶ ಹೀಗೆ ಮಾಡಲಾಗುತ್ತಿದೆ ಎಂದು ಟೀಕಿಸಿದ್ದಾರೆ.



# ರಾಮ ಮಂದಿರಕ್ಕೆ 11 ಕೋಟಿ ದೇಣಿಗೆ ನೀಡಿದ್ದ ಉದ್ಯಮಿಗೆ ಬಿಜೆಪಿಯಿಂದ ರಾಜ್ಯಸಭಾ ಟಿಕೆಟ್

**ಗಾಂಧಿನಗರ:** ಅಯೋಧ್ಯೆ ರಾಮ ಮಂದಿರ ನಿರ್ಮಾಣಕ್ಕೆ 2011ರಲ್ಲೇ 11 ಕೋಟಿ ರೂ. ದೇಣಿಗೆ ನೀಡಿದ್ದ ಉದ್ಯಮಿ, ಸಮಾಜ ಸೇವಕ ಗೋವಿಂದ್ ಧೋಲಾಕಿಯಾ ಅವರನ್ನು ರಾಜ್ಯಸಭಾ ಚುನಾವಣೆಗೆ ಗುಜರಾತ್‌ನಿಂದ ಬಿಜೆಪಿ ನಾಮನಿರ್ದೇಶನ ಮಾಡಿದೆ.

ಗೋವಿಂದ್ ಧೋಲಾಕಿಯಾ ಅವರು ಸೂರತ್ ಮೂಲದ ವಜ್ರ ಉತ್ಪಾದನೆ ಮತ್ತು ರಫ್ತು ಮಾಡುವ ಕಂಪನಿಯಾದ ಶ್ರೀ ರಾಮಕೃಷ್ಣ ಎಕ್ಸ್‌ಪೋರ್ಟ್ಸ್ ಪ್ರೈವೇಟ್ ಲಿಮಿಟೆಡ್‌ನ ಸಂಸ್ಥಾಪಕ ಮತ್ತು ಅಧ್ಯಕ್ಷರಾಗಿದ್ದಾರೆ. ಕಡುಬಡತನದಲ್ಲಿ ಬಾಲ್ಯ ಕಳೆದಿದ್ದ ಇವರು ಈಗ ದೊಡ್ಡ ಉದ್ಯಮಿಯಾಗಿ ಹೊರ ಹೊಮ್ಮಿದ್ದು ವಿಶ್ವದ ಅತಿ ದೊಡ್ಡ ವಜ್ರ ಕಂಪನಿಗಳಲ್ಲಿ ಇವರ ಕಂಪನಿಯೂ ಒಂದಾಗಿದೆ. ಮಾಧ್ಯಮಕ್ಕೆ ಪ್ರತಿಕ್ರಿಯಿಸಿದ ಅವರು, ರೈತ ಕುಟುಂಬದಿಂದ ನಾನು ಬಂದಿದ್ದೇನೆ. ರಾಜ್ಯಸಭಾ ಅಭ್ಯರ್ಥಿಗಳ ಪಟ್ಟಿ ಅಧಿಕೃತವಾಗಿ ಬಿಡುಗಡೆಯಾಗುವ ನಾಲ್ಕು ಗಂಟೆಗಳ ಮೊದಲು ನನ್ನ ನಾಮನಿರ್ದೇಶನದ ಬಗ್ಗೆ ನನಗೆ ತಿಳಿಯಿತು. ನನ್ನ ಹೆಸರನ್ನು ಅಂತಿಮಗೊಳಿಸುವ ಮೊದಲು ಬಿಜೆಪಿ ನಾಯಕತ್ವವು ಖಂಡಿತವಾಗಿಯೂ ಚಿಂತನೆ ನಡೆಸಿರಬೇಕು ಎಂದು ಹೇಳಿದರು. ಆರಂಭದಲ್ಲಿ ವಜ್ರ ಕಂಪನಿಯೊಂದರಲ್ಲಿ ಕಾರ್ಮಿಕನಾಗಿ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದ ಇವರು ಸಣ್ಣ ಪ್ರಮಾಣದಲ್ಲಿ ಸಾಲ ಮಾಡಿ 1970ರಲ್ಲಿ ಕಂಪನಿ ಆರಂಭಿಸಿದರು. ಸದ್ಯ 5000ಕ್ಕೂ ಹೆಚ್ಚು ಉದ್ಯೋಗಿಗಳು ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದಾರೆ. ಉತ್ತಮ ಭಾಷಣಕಾರರಾಗಿರುವ ಗೋವಿಂದ್ ಧೋಲಾಕಿಯಾ ತಮ್ಮ ಸಮಾಜಸೇವಕರಾಗಿಯೂ ಗುರುತಿಸಿಕೊಂಡಿದ್ದಾರೆ. ದೀಪಾವಳಿ ಸಮಯದಲ್ಲಿ ತಮ್ಮ ಉದ್ಯೋಗಿಗಳಿಗೆ ಕಾರು, ಫ್ಲ್ಯಾಟ್ ಸೇರಿದಂತೆ ದುಬಾರಿ ಉಡುಗೊರೆ ನೀಡುತ್ತಿದ್ದಾರೆ. ಅಷ್ಟೇ ಅಲ್ಲದೇ ಉದ್ಯೋಗಿಗಳ ಜೊತೆ ಅವರ ಕುಟುಂಬದ ಸದಸ್ಯರಿಗೂ ಪ್ರವಾಸವನ್ನು ಆಯೋಜಿಸುವ ಮೂಲಕ ಸುದ್ದಿಯಾಗಿದ್ದರು.

# ಬಿಜೆಪಿಗೆ ಸೇರ್ಪಡೆಯಾದ ಲಾಲ್ ಬಹದ್ದೂರ್ ಶಾಸ್ತ್ರಿ ಮೊಮ್ಮಗ

**ದೆಹಲಿ:** ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಮೊಮ್ಮಗ ವಿಭಾಕರ್ ಶಾಸ್ತ್ರಿ ಅವರು ಕಾಂಗ್ರೆಸ್ಗೆ ರಾಜೀನಾಮೆ ನೀಡಿದ್ದಾರೆ. ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆಯನ್ನು ಮಲ್ಲಿಕಾರ್ಜುನ ಖರ್ಗೆ ಅವರಿಗೆ ಸಲ್ಲಿಸಿದ್ದಾರೆ. ಬಿಜೆಪಿಗೆ ಸೇರ್ಪಡೆಯಾಗಿದ್ದಾರೆ. ವಿಭಾಕರ್ ಶಾಸ್ತ್ರಿ ಅವರು ಕಾಂಗ್ರೆಸ್ಗೆ ರಾಜೀನಾಮೆ ನೀಡಿದ್ದು, 2024ರ ಲೋಕಸಭಾ ಚುನಾವಣೆಯ ಮೊದಲು ಕಾಂಗ್ರೆಸ್ಗೆ ಮತ್ತೊಂದು ಹಿನ್ನಡೆಯಾಗಿದೆ. ವಿಭಾಕರ್ ಶಾಸ್ತ್ರಿ ಕಾಂಗ್ರೆಸ್ ರಾಜೀನಾಮೆ ನೀಡಿ, ಬಿಜೆಪಿಗೆ ಸೇರಿದ್ದಾರೆ. ಈ ಬಗ್ಗೆ ಎಕ್ಸ್‌ನಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರನ್ನು ಟ್ಯಾಗ್ ಮಾಡಿ ಟ್ವೀಟ್ ಮಾಡಿದ್ದಾರೆ. ನಾನು ಈ ಮೂಲಕ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ನ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡುತ್ತೇನೆ? ಎಂದು ಬರೆದುಕೊಂಡಿದ್ದಾರೆ. ಕಾಂಗ್ರೆಸ್ ಪಕ್ಷದ ಸಂಬಂಧ ಮುರಿದುಕೊಂಡ ನಂತರ ವಿಭಾಕರ್ ಶಾಸ್ತ್ರಿ ಉತ್ತರ ಪ್ರದೇಶದ ಉಪ ಮುಖ್ಯಮಂತ್ರಿ ಬ್ರಜೇಶ್ ಪಾಠಕ್ ಅವರ ಸಮ್ಮುಖದಲ್ಲಿ ಬಿಜೆಪಿಗೆ ಸೇರಿದರು. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ನಾನು ಲಾಲ್ ಬಹದ್ದೂರ್ ಶಾಸ್ತ್ರಿ ಅವರ 'ಜೈ ಜವಾನ್, ಜೈ ಕಿಸಾನ್' ದೃಷ್ಟಿಕೋನವನ್ನು ಇನ್ನಷ್ಟು ಬಲಪಡಿಸುವ ಮೂಲಕ ದೇಶಕ್ಕೆ ಸೇವೆ ಸಲ್ಲಿಸಲು ಸಾಧ್ಯವಾಗುತ್ತದೆ ಎಂದು ಹೇಳಿದ್ದಾರೆ.



# ಕಾರ್ಗಿಲ್ ಹೀರೋ ವಿಕ್ರಮ್ ಬಾತ್ರಾ ಅವರ ತಾಯಿ ವಿಧಿವಶ

**ಹಿಮಾಚಲ ಪ್ರದೇಶ:** ಕಾರ್ಗಿಲ್ ಹೀರೋ ಕ್ಯಾಪ್ಟನ್ ವಿಕ್ರಂ ಬಾತ್ರಾ, ಅವರ ತಾಯಿ ಕಮಲಾಕಾಂತ್ ಬಾತ್ರಾ, ವಿಧಿವಶರಾಗಿದ್ದಾರೆ. 77 ವರ್ಷದ ಕಮಲಾಕಾಂತ್ ಬಾತ್ರಾ, ಅವರು ಹಿಮಾಚಲ ಪ್ರದೇಶದ ಕಾಂಗ್ರಾ, ಜಿಲ್ಲೆಯ ಪಾಲಂಪುರ್‌ನಲ್ಲಿರುವ ತಮ್ಮ ನಿವಾಸದಲ್ಲಿ ಕೊನೆಯುಸಿರೆಳೆದರು. ಕಾರ್ಗಿಲ್ ಹೀರೋ, ಶೇರ್ ಶಾ ಅಂತಾನೇ ಕರೆಯಲ್ಪಡುವ ಕ್ಯಾಪ್ಟನ್ ವಿಕ್ರಂ ಬಾತ್ರಾ, 1999ರ ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದರು. ಅವರಿಗೆ ಮರಣೋತ್ತರವಾಗಿ ಪರಮವೀರ ಚಕ್ರ ನೀಡಿ ಗೌರವಿಸಲಾಗಿತ್ತು.



ಕಮಲಾಕಾಂತ್ ಬಾತ್ರಾ, ನಿಧನಕ್ಕೆ ಹಿಮಾಚಲ ಪ್ರದೇಶ ಮುಖ್ಯಮಂತ್ರಿ ಸುಖವಿಂದರ್‌ಸಿಂಗ್‌ಸುಖು ಸೇರಿದಂತೆ ಅನೇಕ ರಾಜಕೀಯ ಗಣ್ಯರು ಸಂತಾಪ ಸೂಚಿಸಿದ್ದಾರೆ. ಇನ್ನು ವೀರಮಾತೆ ನಿಧನಕ್ಕೆ ಭಾರತೀಯರು ಕಂಬನಿ ಮಿಡಿದಿದ್ದಾರೆ. ಕಾರ್ಗಿಲ್ ಹೀರೋ, ಹುತಾತ್ಮ ಕ್ಯಾಪ್ಟನ್ ವಿಕ್ರಂ ಬಾತ್ರಾ ಅವರ ತಾಯಿ ಕಮಲಾಕಾಂತ್ ಬಾತ್ರಾ, ನಿಧನಕ್ಕೆ ಹಿಮಾಚಲ ಪ್ರದೇಶ ಮುಖ್ಯಮಂತ್ರಿ, ಸಂತಾಪ ಸೂಚಿಸಿದ್ದಾರೆ. ಕ್ಯಾಪ್ಟನ್ ವಿಕ್ರಮ್ ಬಾತ್ರಾ, ಅವರ ತಾಯಿ ಶ್ರೀಮತಿ ಕಮಲಾಕಾಂತ್ ಬಾತ್ರಾ, ಅವರ ನಿಧನದ ದುಃಖದ ಸುದ್ದಿ ಬಂದಿದೆ. ಅವರ ಕುಟುಂಬಕ್ಕೆ ಅವರ ಅಗಲಿಕೆಯ ಅಪಾರ ದುಃಖವನ್ನು ಭರಿಸುವ ಶಕ್ತಿಯನ್ನು ನೀಡುವಂತೆ ನಾವು ದೇವರನ್ನು ಪ್ರಾರ್ಥಿಸುತ್ತೇವೆ ಅಂತ ಸಿಎಂ ಸುಖವಿಂದರ್ ಸಿಂಗ್ ಸುಖು ಟ್ವೀಟ್ ಮಾಡಿದ್ದಾರೆ.

# ಕ್ಯಾಲಿಫೋರ್ನಿಯಾದಲ್ಲಿ ಭಾರತೀಯ ಮೂಲದ ನಾಲ್ವರ ಶವ ಪತ್ತೆ!

**ವಾಷಿಂಗ್ಟನ್:** ಕೇರಳ ಮೂಲದ ಕುಟುಂಬವೊಂದು ಅಮೆರಿಕದ ಕ್ಯಾಲಿಫೋರ್ನಿಯಾದಲ್ಲಿನ ತಮ್ಮ ಮನೆಯಲ್ಲಿ ಶವವಾಗಿ ಪತ್ತೆಯಾಗಿದೆ.

=ಶವವಾಗಿ ಪತ್ತೆಯಾದ ಒಂದೇ ಕುಟುಂಬದ ನಾಲ್ವರು ಸದಸ್ಯರನ್ನು ಆನಂದ್ ಸುಜಿತ್ ಹೆನ್ರಿ (42), ಅವರ ಪತ್ನಿ ಆಲಿಸ್ ಪ್ರಿಯಾಂಕಾ (40) ಮತ್ತು ಅವರ 4 ವರ್ಷದ ಅವಳಿ ಮಕ್ಕಳಾದ ನೋಹ್ ಮತ್ತು ನೀಥಾನ್ ಎಂದು ಗುರುತಿಸಲಾಗಿದೆ. ಕುಟುಂಬಸ್ಥರು ಹಲವು ಬಾರಿ ಕರೆ ಮಾಡಿದ್ದು, ಅವರ ಯೋಗಕ್ಷೇಮ ತಪಾಸಣೆಗೆ ಯತ್ನಿಸಿದ್ದಾರೆ. ಇದಾದ ಬಳಿಕ ಪೊಲೀಸರು ಮನೆಯಲ್ಲಿ ನಾಲ್ಕು ಶವಗಳನ್ನು ಪತ್ತೆಹಚ್ಚಿದ್ದಾರೆ.



ಭಾರತೀಯ ಮೂಲದ ದಂಪತಿಗಳಾದ ಆನಂದ್ ಮತ್ತು ಆಲಿಸ್ ಬಾತ್ರೂಮ್‌ನಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ಅವರ ದೇಹದಲ್ಲಿ ಗುಂಡಿನ ಗಾಯಗಳನ್ನು ಪತ್ತೆಹಚ್ಚಲಾಗಿದೆ. ದಂಪತಿಯ ಅವಳಿ ಮಕ್ಕಳು ಮಲಗುವ ಕೋಣೆಯಲ್ಲಿ ಶವವಾಗಿ ಪತ್ತೆಯಾಗಿದ್ದು, ಅವರ ಸಾವಿಗೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ಘಟನೆ ನಡೆದ ಮನೆಯ ಬಾತ್ರೂಮ್‌ನಿಂದ ಪೊಲೀಸರು 9 ಎಂಎಂ ಪಿಸ್ತೂಲ್ ಮತ್ತು ಲೋಡ್ ಮಾಡಲಾದ ಮ್ಯಾಗಜೀನ್ ಅನ್ನು ವಶಪಡಿಸಿಕೊಂಡಿದ್ದಾರೆ. ದಂಪತಿ 2020 ರಲ್ಲಿ 2.1 ಮಿಲಿಯನ್ ಡಾಲರ್ಗೆ ಮನೆಯನ್ನು ಖರೀದಿಸಿದ್ದರು ಎಂದು ದಾಖಲೆಗಳಲ್ಲಿ ಕಂಡುಬಂದಿದೆ. ಮೇಲ್ನೋಟಕ್ಕೆ ಪ್ರಕರಣ ಕೊಲೆ ಇಲ್ಲವೇ ಆತ್ಮಹತ್ಯೆ ಇರಬಹುದು ಎನ್ನಲಾಗಿದೆಯಾದರೂ ಖಚಿತಪಡಿಸಿಕೊಳ್ಳಲು ಪೊಲೀಸರು ತನಿಖೆ ಪ್ರಾರಂಭಿಸಿದ್ದಾರೆ.

# ಯುಎಇಯಲ್ಲಿ ಭಾರತ್ ಮಾರ್ಟ್‌ಗೆ ಶಂಕುಸ್ಥಾಪನೆ

**ಅಬುಧಾಬಿ:** ಭಾರತದ ಎಂಎಸ್‌ಎಂಇ(ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮ) ಕ್ಷೇತ್ರಕ್ಕೆ ಅಂತರಾಷ್ಟ್ರೀಯ ಖರೀದಿದಾರರನ್ನು ತಲುಪುವ ಪರಿಣಾಮಕಾರಿ ವೇದಿಕೆ ಒದಗಿಸುವ ಭಾರತ್ ಮಾರ್ಟ್ಗೆ ಪ್ರಧಾನಿ ನರೇಂದ್ರ ಮೋದಿ ಮತ್ತು ಯುಎಇ ಪ್ರಧಾನಿ ಶೇಖ್ ಮುಹಮ್ಮದ್ ಬಿನ್ ರಶೀದ್ ಅಲ್ ಮಕ್ತೌಮ್ ಬುಧವಾರ ಶಂಕು ಸ್ಥಾಪನೆ ನೆರವೇರಿಸಿದ್ದಾರೆ.ದುಬೈಯ 'ಜೆಬೆಲ್ ಅಲಿ ಫ್ರಿ ಟ್ರೇಡ್ ಝೋನ್'ನಲ್ಲಿ ನಡೆದ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಉಭಯ ಪ್ರಧಾನಿಗಳು ವರ್ಚುವಲ್ ವೇದಿಕೆಯ ಮೂಲಕ ಜಂಟಿಯಾಗಿ ಶಂಕುಸ್ಥಾಪನೆ ನೆರವೇರಿಸಿದರು.ಬಳಿಕ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ 'ಗಲ್ಫ್, ಪಶ್ಚಿಮ ಏಷ್ಯಾ, ಆಫ್ರಿಕಾ ಮತ್ತು ಯುರೇಷಿಯಾದ ಅಂತರಾಷ್ಟ್ರೀಯ ಖರೀದಿದಾರರನ್ನು ತಲುಪಲು ಪರಿಣಾಮಕಾರಿ ವೇದಿಕೆಯನ್ನು ಒದಗಿಸುವ ಮೂಲಕ ಭಾರತದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ವಲಯಗಳ ರಫ್ತುಗಳನ್ನು ಉತ್ತೇಜಿಸುವಲ್ಲಿ ಭಾರತ್ ಮಾರ್ಟ್ ಪ್ರಮುಖ ಪಾತ್ರವನ್ನು ವಹಿಸುತ್ತದೆ' ಎಂದರು.




# ಜಮ್ಮು ಗಡಿಯಲ್ಲಿ ಪಾಕಿಸ್ತಾನದಿಂದ ಮತ್ತೆ ಕದನ ವಿರಾಮ ಉಲ್ಲಂಘನೆ



**ಜಮ್ಮು ಮತ್ತು ಕಾಶ್ಮೀರ:** ಜಮ್ಮುವಿನ ಮಕ್ವಾಲ್ ಪ್ರದೇಶದ ಗಡಿ ಭದ್ರತಾ ಪಡೆ ಪೋಸ್ಟ್‌ಗಳ ಮೇಲೆ ಪಾಕಿಸ್ತಾನ ರೇಂಜರ್ಗಳು ಗುಂಡಿನ ದಾಳಿ ಪ್ರಾರಂಭಿಸಿದ್ದರಿಂದ ಜಮ್ಮು ಅಂತರರಾಷ್ಟ್ರೀಯ ಗಡಿಯಲ್ಲಿ ಉದ್ವಿಗ್ನತೆ ಹೆಚ್ಚಾಗಿದೆ. ಗುಂಡಿನ ಚಕಮಕಿ ಮುಂದುವರೆದಿದ್ದು, ಬಿಎಸ್ ಎಫ್ ಕೂಡ ಪರಿಣಾಮಕಾರಿ ಪ್ರತೀಕಾರದೊಂದಿಗೆ ಪ್ರತಿಕ್ರಿಯಿಸಿದೆ. ಬಿಎಸ್‌ಎಫ್ ಬಿಒಪಿ ನ್ನ ಗುರಿಯಾಗಿಸಿಕೊಂಡು ಪಾಕಿಸ್ತಾನ ಪಡೆಗಳು ತಮ್ಮ ಭೂಪ್ರದೇಶದಿಂದ ಗಡಿಯಾಚೆಗಿನ ಗುಂಡಿನ ದಾಳಿ ನಡೆಸಿದ್ದು, ಈ ಘಟನೆಯಲ್ಲಿ ಪಾಕಿಸ್ತಾನದ 13 ಚೆನಾಬ್ ರೇಂಜರ್ಗಳು ಭಾಗಿಯಾಗಿದ್ದಾರೆ. ಎರಡೂ ಕಡೆಯವರು ಗಡಿ ಆಕ್ರಮಣದಲ್ಲಿ ತೊಡಗಿರುವುದರಿಂದ ಪರಿಸ್ಥಿತಿ ಅಸ್ಥಿರವಾಗಿದೆ. ಪಾಕಿಸ್ತಾನದ ಕಡೆಯಿಂದ ಅಪ್ರಚೋದಿತ ಆಕ್ರಮಣವಾಗಿ ಇಂದು ಸಂಜೆ 5.45 ರ ಸುಮಾರಿಗೆ ಗುಂಡಿನ ದಾಳಿ ಪ್ರಾರಂಭವಾಯಿತು ಎಂದು ಗಡಿ ಭದ್ರತಾ ಪಡೆ ಮೂಲಗಳು ತಿಳಿಸಿವೆ. ಸುಮಾರು 25 ನಿಮಿಷಕ್ಕೂ ಹೆಚ್ಚು ಕಾಲ ಎರಡೂ ಕಡೆಗಳ ನಡುವೆ ಭಾರಿ ಗುಂಡಿನ ಚಕಮಕಿ ನಡೆಯಿತು, ನಂತರ ಸಣ್ಣ ಗುಂಡಿನ ಚಕಮಕಿಯೂ ನಡೆಯಿತು

# ಇಟಲಿಯಲ್ಲಿ ಟಿವಿ ವಾಹಿನಿ ವಿರುದ್ಧ ಪ್ರತಿಭಟನೆ

**ರೋಮ್:** ಗಾಝಾ ಸಂಘರ್ಷಕ್ಕೆ ಸಂಬಂಧಿಸಿದ ವರದಿಯನ್ನು ಪ್ರಸಾರ ಮಾಡುವಾಗ ಫೆಲೆಸ್ತೀನೀಯರ ಸಂಕಷ್ಟವನ್ನು ಮರೆಮಾಚಿ ಇಸ್ರೇಲ್ ಪರವಾದ ವರದಿಯನ್ನು ಪ್ರಸಾರ ಮಾಡುತ್ತಿರುವ ಆರೋಪದಲ್ಲಿ ಇಟಲಿಯ ಸರಕಾರಿ ಸ್ವಾಮ್ಯದ ಆರ್‌ಎಐ ಟಿವಿ ವಾಹಿನಿಯ ವಿರುದ್ಧ ನೇಪಲ್ಸ್ ನಗರದಲ್ಲಿ ಪ್ರತಿಭಟನೆ ನಡೆಸಲಾಗಿದೆ. ಆರ್‌ಎಐ ಕಚೇರಿಯಿದ್ದ ಕಟ್ಟಡದೊಳಗೆ ಪ್ರತಿಭಟನಾಕಾರರು ನುಗ್ಗಲು ಮುಂದಾದಾಗ ಪೊಲೀಸರು ಅವರನ್ನು ತಡೆದಿದ್ದಾರೆ. ಈ ಸಂದರ್ಭ ನಡೆದ ಘರ್ಷಣೆಯಲ್ಲಿ ಐವರು ಪೊಲೀಸರು ಹಾಗೂ ಐದು ಮಂದಿ ಪ್ರತಿಭಟನಾಕಾರರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

ಕಳೆದ ವಾರ ಆರ್‌ಎಐ ಟಿವಿ ವಾಹಿನಿಯಲ್ಲಿ ಪ್ರಸಾರವಾದ ಯಾರ್ಪ್ ಸಂಗೀತ ಕಾರ್ಯಕ್ರಮದ ಅಂತ್ಯದಲ್ಲಿ ಗಾಯಕ ಘಾಲಿ 'ನರಮೇಧ ನಿಲ್ಲಿಸಿ' ಎಂದು ಕರೆನೀಡಿದ್ದರು. ಈ ಸಂದರ್ಭ ಅವರು ಗಾಝಾ ಅಥವಾ ಇಸ್ರೇಲ್ನ ಹೆಸರನ್ನು ಉಲ್ಲೇಖಿಸಿರಲಿಲ್ಲ. ಈ ಹೇಳಿಕೆಯನ್ನು ಖಂಡಿಸಿದ್ದ ರೋಮ್‌ನಲ್ಲಿನ ಇಸ್ರೇಲ್ ರಾಯಭಾರಿ 'ಸಂಗೀತ ಕಾರ್ಯಕ್ರಮದ ಮೂಲಕ ದ್ವೇಷ ಮತ್ತು ಪ್ರಚೋದನೆಗೆ ಪ್ರೋತ್ಸಾಹಿಸುವ ಕಾರ್ಯ ನಡೆದಿದೆ' ಎಂದು ಟೀಕಿಸಿದ್ದರು. ಬಳಿಕ ಆರ್‌ಎಐ ಟಿವಿ ವಾಹಿನಿಯ ಮುಖ್ಯ ಕಾಯನಿರ್ವಹಣಾಧಿಕಾರಿ ರಾಬರ್ಟೋ ಸೆರ್ಗಿಯೋ 'ಘಾಲಿ ನೀಡಿದ ಹೇಳಿಕೆ ಅವರ ವೈಯಕ್ತಿಕ ಅಭಿಪ್ರಾಯ. ಆರ್‌ಎಐ ಇಸ್ರೇಲ್ ಮತ್ತು ಯೆಹೂದಿ ಜನತೆಯನ್ನು ಬೆಂಬಲಿಸುತ್ತದೆ' ಎಂದು ಹೇಳಿದ್ದರು.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 21 ವರ್ಷದ ಹಿಂದೆ ಪ್ರಿಯಕರ ಕೊಟ್ಟ ಹೂವು ಜೆನಿಲಿಯಾ ಬಳಿ ಇನ್ನೂ ಇದೆ




ನಟಿ ಜೆನಿಲಿಯಾ ಡಿಸೋಜಾ ಅವರು ಅನೇಕರಿಗೆ ಮಾದರಿ ಆಗಿದ್ದಾರೆ. ಸಿನಿಮಾದಲ್ಲೂ, ರಿಯಲ್ ಲೈಫ್ ನಲ್ಲೂ ಅವರನ್ನು ಇಷ್ಟಪಡುವ ಅಪಾರ ಅಭಿಮಾನಿಗಳು ಇದ್ದಾರೆ. ನಟ ರಿತೇಶ್ ದೇಶಮುಖ್ ಜೊತೆ ಜೆನಿಲಿಯಾ ಅವರದ್ದು ಚಂದದ ಲವ್ ಸ್ಟೋರಿ. ಅವರಿಬ್ಬರ ಪ್ರೇಮಕಥೆ ಶುರುವಾಗಿದ್ದು 2003ರಲ್ಲಿ. ಆ ಸಂದರ್ಭದಲ್ಲಿ ರಿತೇಶ್ ದೇಶಮುಖ್ ನೀಡಿದ ಗುಲಾಬಿ ಹೂವನ್ನು ಜೆನಿಲಿಯಾ ಅವರು ಈಗಲೂ ಜೊತೆಯಲ್ಲಿ ಇಟ್ಟುಕೊಂಡಿದ್ದಾರೆ. ಅವರ ಪಾಲಿಗೆ ಈ ಹೂವು ಅಷ್ಟು ಅಮೂಲ್ಯವಾದದ್ದು. ಇಂದು (ಫೆಬ್ರವರಿ 14) ಪ್ರೇಮಿಗಳ ದಿನ. ಈ ಸಂದರ್ಭದಲ್ಲಿ ಸೆಲೆಬ್ರಿಟಿಗಳ ಪ್ರೀತಿ-ಪ್ರೇಮದ ಬಗ್ಗೆ ಫ್ಯಾನ್ಸ್ ಮಾತನಾಡುತ್ತಿದ್ದಾರೆ. ಜೆನಿಲಿಯಾ-ರಿತೇಶ್ ಅವರ ಲವ್ ಸ್ಟೋರಿಯನ್ನೂ ಸೋಶಿಯಲ್ ಮೀಡಿಯಾದಲ್ಲಿ ಮೆಲುಕು ಹಾಕಲಾಗುತ್ತಿದೆ.

ಜೆನಿಲಿಯಾ ಡಿಸೋಜಾ ನಟಿಸಿದ ಮೊದಲ ಸಿನಿಮಾ 'ತುಜೆ ಮೇರಿ ಕಸಮ್' 2003ರಲ್ಲಿ ಬಿಡುಗಡೆ ಆಯಿತು. ಆ ಸಿನಿಮಾಗೆ ಹೀರೋ ಆಗಿದ್ದವರು ರಿತೇಶ್ ದೇಶಮುಖ್ . ಅದು ರಿತೇಶ್ ನಟನೆಯ ಮೊದಲ ಸಿನಿಮಾ ಕೂಡ ಹೌದು. ಖ್ಯಾತ ರಾಜಕಾರಣಿ ವಿಲಾಸ್ ರಾವ್ ದೇಶಮುಖ್ ಅವರ ಪುತ್ರ ರಿತೇಶ್ . ರಾಜಕಾರಣಿಯ ಮಗ ಎಂಬ ಕಾರಣಕ್ಕೆ ರಿತೇಶ್ ಅವರಿಗೆ ಅಹಂ ಇರಬಹುದು ಎಂದು ಜೆನಿಲಿಯಾ ಅಂದುಕೊಂಡಿದ್ದರು. ಆದರೆ ರಿತೇಶ್ ಅವರ ಗುಣ ಆ ರೀತಿ ಇರಲಿಲ್ಲ. ಇಬ್ಬರ ನಡುವೆ ಪ್ರೀತಿ ಮೂಡಿತು. ಆ ದಿನಗಳಲ್ಲಿ ಕೆಂಪು ಗುಲಾಬಿ ಹೂವನ್ನು ಜೆನಿಲಿಯಾಗೆ ರಿತೇಶ್ ನೀಡಿದ್ದರು.

2022ರ ಜೂನ್ ನಲ್ಲಿ ಜೆನಿಲಿಯಾ ಅವರು ಸೋಶಿಯಲ್ ಮೀಡಿಯಾ ಮೂಲಕ ಅಭಿಮಾನಿಗಳ ಜೊತೆ ಪ್ರಶ್ನೋತ್ತರ ನಡೆಸಿದರು. 'ರಿತೇಶ್ ನಿಮಗೆ ನೀಡಿದ ಬೆಸ್ಟ್ ಗಿಫ್ಟ್ ಯಾವುದು' ಎಂದು ಅಭಿಮಾನಿಯೊಬ್ಬರು ಪ್ರಶ್ನೆ ಕೇಳಿದರು. ಅದಕ್ಕೆ ಉತ್ತರಿಸಿದ ಜೆನಿಲಿಯಾ ಅವರು ಎರಡು ದಶಕಗಳಷ್ಟು ಹಳೆಯದಾದ ಗುಲಾಬಿ ಹೂವನ್ನು ತೋರಿಸಿದ್ದರು! ಪ್ರಿಯಕರ ನೀಡಿದ ಆ ಉಡುಗೊರೆಯನ್ನು ಇಂದಿಗೂ ಅಷ್ಟು ಜೋಪಾನವಾಗಿ ಕಾಪಾಡಿಕೊಂಡಿರುವ ಅವರಿಗೆ ಎಲ್ಲರೂ ಮೆಚ್ಚುಗೆ ಸೂಚಿಸಿದ್ದರು. 2023ರ ಫೆಬ್ರವರಿಯಲ್ಲಿ ರಿತೇಶ್ ದೇಶಮುಖ್ ಅವರು ಇದೇ ಗುಲಾಬಿ ಹೂವಿನ ಬಗ್ಗೆ ಮಾತನಾಡಿದ್ದರು. 'ನಾನು ಆಕೆಗೆ ಒಂದು ಗುಲಾಬಿ ಹೂವು ನೀಡಿದ್ದೆ. ಅದನ್ನು ಇನ್ನೂ ಇಟ್ಟುಕೊಂಡಿದ್ದಾಳೆ. 20 ವರ್ಷ ಆಗಿದೆ. ಅದನ್ನು ನಾವು ಇನ್ನೂ ಇಟ್ಟುಕೊಂಡಿದ್ದೇವೆ' ಎಂದು ಹೆಮ್ಮೆಯಿಂದ ಹೇಳಿದ್ದರು ರಿತೇಶ್ ದೇಶಮುಖ್ . ಸುಮಾರು 9 ವರ್ಷಗಳ ಕಾಲ ಪರಸ್ಪರ ಡೇಟಿಂಗ್ ಮಾಡಿದ ರಿತೇಶ್ ದೇಶಮುಖ್ ಮತ್ತು ಜೆನಿಲಿಯಾ ಡಿಸೋಜಾ ಅವರು 2012ರಲ್ಲಿ ವೈವಾಹಿಕ ಜೀವನಕ್ಕೆ ಕಾಲಿಟ್ಟರು. ಈ ದಂಪತಿಗೆ ಇಬ್ಬರು ಮಕ್ಕಳು ಇದ್ದಾರೆ. ರಿತೇಶ್ ದೇಶಮುಖ್ ಮತ್ತು ಜೆನಿಲಿಯಾ ಡಿಸೋಜಾ ದಂಪತಿ ಹಿಂದಿ ಹಾಗೂ ಮರಾಠಿ ಚಿತ್ರರಂಗದಲ್ಲಿ ಬ್ಯುಸಿ ಆಗಿದ್ದಾರೆ. ದಕ್ಷಿಣ ಭಾರತದ ಸಿನಿಮಾಗಳಲ್ಲಿ ನಟಿಸಿ ಜೆನಿಲಿಯಾ ಫೇಮಸ್ ಆಗಿದ್ದಾರೆ. 2008ರಲ್ಲಿ ಬಂದ 'ಸತ್ಯ ಇನ್ ಲವ್ ' ಸಿನಿಮಾದಲ್ಲಿ ನಟಿಸುವ ಮೂಲಕ ಕನ್ನಡ ಚಿತ್ರರಂಗಕ್ಕೂ ಜೆನಿಲಿಯಾ ಕಾಲಿಟ್ಟರು. ಈಗ ಅವರು ಕಿರೀಟಿ ರೆಡ್ಡಿ ನಟನೆಯ 'ಜೂನಿಯರ್ ' ಸಿನಿಮಾದಲ್ಲಿ ಅಭಿನಯಿಸುತ್ತಿದ್ದಾರೆ. ಆ ಮೂಲಕ ಕನ್ನಡಕ್ಕೆ ಕಮ್ ಬ್ಯಾಕ್ ಮಾಡುತ್ತಿದ್ದಾರೆ.

# ಸಿಎಂನ ಭೇಟಿ ಮಾಡಿದ ಕಾರ್ತಿಕ್ ಮಹೇಶ್




'ಬಿಗ್ ಬಾಸ್ ಕನ್ನಡ ಸೀಸನ್ 10' ವಿನ್ ಆಗುವ ಮೂಲಕ ಕಾರ್ತಿಕ್ ಮಹೇಶ್ ಖ್ಯಾತಿ ಹೆಚ್ಚಾಗಿದೆ. ಅವರು ನಾನಾ ಕಡೆಗಳಿಗೆ ತೆರಳಿ ಅಭಿಮಾನಿಗಳನ್ನು ಭೇಟಿ ಮಾಡುತ್ತಿದ್ದಾರೆ. ಇಂದು (ಫೆಬ್ರವರಿ 14) ಅವರು ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದಿದ್ದಾರೆ. ಸಿಎಂ ನಿವಾಸದಲ್ಲಿ ಈ ಭೇಟಿ ನಡೆದಿದೆ. ಸಿದ್ದರಾಮಯ್ಯ ಅವರು ಕಾರ್ತಿಕ್ ಅವರಿಗೆ ಶುಭ ಹಾರೈಸಿದ್ದಾರೆ. ಇದರಿಂದ ಅವರ ಅಭಿಮಾನಿಗಳಿಗೆ ಖುಷಿ ಆಗಿದೆ.

'ಬಿಗ್ ಬಾಸ್ 'ನಿಂದ ಕಾರ್ತಿಕ್ ಮಹೇಶ್ ಗೆ ಸಿಕ್ಕ ಜನಪ್ರಿಯತೆ ತುಂಬಾನೇ ದೊಡ್ಡದು. ಕಿರುತೆರೆ ಹಾಗೂ ಹಿರಿತೆರೆಯಲ್ಲಿ ನಟಿಸಿರುವ ಅವರು 'ಬಿಗ್ ಬಾಸ್'ಗೆ ಬಂದರು. ಇಲ್ಲಿ ಆಟ ಹಾಗೂ ಮನರಂಜನೆ ಮೂಲಕ ಎಲ್ಲರ ಗಮನ ಸೆಳೆದರು. ಅವರು ಕಪ್ ಗೆದ್ದಿದ್ದಾರೆ. ಹೀಗಾಗಿ ಅವರು ನಾನಾ ಸೆಲೆಬ್ರಿಟಿಗಳನ್ನು ಹಾಗೂ ಅಭಿಮಾನಿಗಳನ್ನು ಭೇಟಿ ಮಾಡುತ್ತಿದ್ದಾರೆ. ಈಗ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡುವ ಅವಕಾಶ ಸಿಕ್ಕಿದೆ.

ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಕಾರ್ತಿಕ್ ಆಶೀರ್ವಾದ ಪಡೆದಿದ್ದಾರೆ. 'ಒಳ್ಳೆದಾಗಲಿ ಕಣಯ್ಯ. ಸಿನಿಮಾ ರಂಗದಲ್ಲಿ ಒಳ್ಳೆಯ ಹೆಸರು ಮಾಡು' ಎಂದು ಹಾರೈಸಿದ್ದಾರೆ. ಈ ವೇಳೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಮಾಜಿ ಅಧ್ಯಕ್ಷ ಭಾ.ಮ ಹರೀಶ್. ಮತ್ತು ಉಲ್ಲಾಸ್ ಗೌಡ ಉಪಸ್ಥಿತರಿದ್ದರು. ಕಾರ್ತಿಕ್ ಮಹೇಶ್ ಅವರು ಈ ಮೊದಲು 'ಡೊಳ್ಳು' ಹೆಸರಿನ ಸಿನಿಮಾದಲ್ಲಿ ನಟಿಸಿದ್ದರು. ಈ ಚಿತ್ರಕ್ಕೆ ರಾಷ್ಟ್ರಪ್ರಶಸ್ತಿ ಸಿಕ್ಕಿದೆ. ಬಿಗ್ ಬಾಸ್ ಮನೆಯಲ್ಲಿ ಅವರು ತಮ್ಮ ಅಸಲಿ ಆಟ ತೋರಿಸಿದ್ದಾರೆ. ಅವರನ್ನು ಇನ್ ಸ್ಟಾಗ್ರಾಮ್ ನಲ್ಲಿ 4.6 ಲಕ್ಷ ಜನರು ಹಿಂಬಾಲಿಸುತ್ತಾರೆ. ಅವರಿಗೆ ಬಿಗ್ ಬಾಸ್ ಗೆದ್ದಿದ್ದಕ್ಕೆ 50 ಲಕ್ಷ ರೂಪಾಯಿ ಜೊತೆಗೆ ಒಂದು ಎಲೆಕ್ಟ್ರಿಕ್ ಸ್ಕೂಟರ್ ಹಾಗೂ ಕಾರು ಉಡುಗೊರೆಯಾಗಿ ಸಿಕ್ಕಿತ್ತು. ಇತ್ತೀಚೆಗೆ ಅವರು ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿದ್ದರು. ಈ ವೇಳೆ ಅವರಿಗೆ ಅದ್ದೂರಿ ಸ್ವಾಗತ ಸಿಕ್ಕಿತ್ತು.




# 'ಯುಐ' ಚಿತ್ರದಲ್ಲಿ ಚೀಪ್ ಸಾಂಗ್




ನಟ, ನಿರ್ದೇಶಕ ಉಪೇಂದ್ರ ಅವರು 'ಯುಐ' ಸಿನಿಮಾದ ಕೆಲಸಗಳಲ್ಲಿ ಬ್ಯುಸಿ ಆಗಿದ್ದಾರೆ. ಈ ಸಿನಿಮಾದಲ್ಲಿ ಅವರು ನಟಿಸುವುದರ ಜೊತೆಗೆ ನಿರ್ದೇಶನ ಕೂಡ ಮಾಡುತ್ತಿರುವುದರಿಂದ ಭಾರಿ ನಿರೀಕ್ಷೆ ಸೃಷ್ಟಿ ಆಗಿದೆ. ಉಪೇಂದ್ರ ಬರೆಯುವ ಹಾಡುಗಳು ಎಂದರೆ ಅಭಿಮಾನಿಗಳಿಗೆ ಸಖತ್ ಇಷ್ಟ. ಈಗ ಅವರು 'ಯುಐ' ಸಿನಿಮಾದ ಮೊದಲ ಹಾಡಿನ ಝಲಕ್ ತೋರಿಸಿದ್ದಾರೆ. ಇದು ಚೀಪ್ ಸಾಂಗ್ . ಅಂದರೆ ಹಾಡಿನ ಕ್ವಾಲಿಟಿ ಹಾಗಿದೆ ಅಂತಲ್ಲ. ಅದರ ಹೆಸರೇ 'ಚೀಪ್ ಸಾಂಗ್ '. ಇನ್ನು, ಅದರಲ್ಲಿನ ಸಾಹಿತ್ಯ ಕೇಳಿ ಎಲ್ಲರಿಗೂ ಅಚ್ಚರಿ ಆಗುತ್ತಿದೆ. 'ಲಹರಿ ಫಿಲ್ಮ್ಸ್ ' ಮೂಲಕ ಈ ಹಾಡಿನ ಪ್ರೋಮೋ ಬಿಡುಗಡೆ ಆಗಿದೆ. ಅಜನೀಶ್ ಬಿ. ಲೋಕನಾಥ್ ಅವರು ಈ ಸಿನಿಮಾಗೆ ಸಂಗೀತ ನೀಡಿದ್ದಾರೆ.

ವಿಜಯ್ ಪ್ರಕಾಶ್ , ನಕಾಶ್ ಅಜೀಜ್ , ದೀಪಕ್ ಬ್ಲ್ಯೂ ಅವರು 'ಚೀಪ್ ' ಹಾಡಿಗೆ ಧ್ವನಿ ನೀಡಿದ್ದಾರೆ. ಉಪೇಂದ್ರ ಅವರು ಸ್ವಲ್ಪ ವಿಚಿತ್ರವಾಗಿ ಸಾಹಿತ್ಯ ಬರೆದಿದ್ದಾರೆ. 'ಎಲ್ಲ ಚೀಪ್ ಚೀಪ್ . ನಂದು ತುಂಬ ದೊಡ್ಡದು. ಅವನಿಗಿಂತ ನಿಂದು ಚಿಕ್ಕದು. ನಿಂದು ತುಂಬ ಚಿಕ್ಕದು. ಇವನಿಗಿಂತ ಅವನ್ದು ದೊಡ್ಡದು. ಎಲ್ಲ ಚೀಪ್ ಚೀಪ್ ..' ಎಂಬ ಸಾಲುಗಳು ಈ ಹಾಡಿನಲ್ಲಿ ಇವೆ. 'ಚಿಕ್ಕದೋ ಅಥವಾ ದೊಡ್ಡದೋ ಗೊತ್ತಿಲ್ಲ. ಈ ಹಾಡು ಸೂಪರ್ ಆಗಿದೆ' ಎಂದು ಫ್ಯಾನ್ಸ್ ಕಮೆಂಟ್ ಮಾಡುತ್ತಿದ್ದಾರೆ.

ಉಪೇಂದ್ರ ಅವರು ಬರೆದು ಹಾಡುಗಳಲ್ಲಿ ಬಗೆಬಗೆಯ ಅರ್ಥ ಇರುತ್ತದೆ. 25 ವರ್ಷಗಳ ಹಿಂದೆ ಅವರು 'ಉಪೇಂದ್ರ' ಸಿನಿಮಾದ 'ಏನಿಲ್ಲ ಏನಿಲ್ಲ..' ಹಾಡಿನ ಸಾಲುಗಳು ಈಗ ಇನ್ ಸ್ಟಾಗ್ರಾಮ್ ನಲ್ಲಿ ಟ್ರೆಂಡ್ ಆಗಿರುವುದು ಗೊತ್ತೇ ಇದೆ. ಎಲ್ಲರ ಬಾಯಲ್ಲೂ 'ಕರಿಮಣಿ ಮಾಲಿಕ ನೀನಲ್ಲ' ಎಂಬ ಲೈನ್ ರಾರಾಜಿಸುತ್ತಿದೆ.

ಈಗ 'ಯುಐ' ಸಿನಿಮಾದ 'ಚೀಪ್ ಸಾಂಗ್ ' ಕೂಡ ಅದೇ ರೀತಿ ಟ್ರೆಂಡ್ ಆಗುವ ಸಾಧ್ಯತೆ ದಟ್ಟವಾಗಿದೆ. ಚಿನ್ನಿ ಪ್ರಕಾಶ್ ಅವರು ಈ ಹಾಡಿಗೆ ಕೊರಿಯೋಗ್ರಫಿ ಮಾಡಿದ್ದಾರೆ. ಸದ್ಯಕ್ಕೆ ಬಿಡುಗಡೆ ಆಗಿರುವುದು ಪ್ರೋಮೋ ಮಾತ್ರ. ಫೆಬ್ರವರಿ 26ರಂದು ಫುಲ್ ಹಾಡು ಬಿಡುಗಡೆ ಆಗಲಿದೆ.

'ಓಂ', 'ಶ್ ', 'ಎ', 'ಉಪೇಂದ್ರ' ಮುಂತಾದ ಸೂಪರ್ ಹಿಟ್ ಸಿನಿಮಾಗಳಿಗೆ ನಿರ್ದೇಶನ ಮಾಡಿರುವ ಉಪೇಂದ್ರ ಅವರ ಸಾಮರ್ಥ್ಯದ ಬಗ್ಗೆ ಅಭಿಮಾನಿಗಳಿಗೆ ಭಾರಿ ಭರವಸೆ ಇದೆ. ಹಲವು ವರ್ಷಗಳ ಬಳಿಕ ಅವರು 'ಯುಐ' ಸಿನಿಮಾಗೆ ನಿರ್ದೇಶನ ಮಾಡುತ್ತಿರುವುದರಿಂದ ಸಹಜವಾಗಿಯೇ ನಿರೀಕ್ಷೆ ಜೋರಾಗಿದೆ. ಈ ಸಿನಿಮಾಗೆ ಜಿ. ಮನೋಹರನ್ ಮತ್ತು ಕೆ.ಪಿ. ಶ್ರೀಕಾಂತ್ ಅವರು ಬಂಡವಾಳ ಹೂಡಿದ್ದಾರೆ. ನವೀನ್ ಮನೋಹರನ್ ಸಹ-ನಿರ್ಮಾಪಕರಾಗಿದ್ದಾರೆ. ಈಗಾಗಲೇ ಈ ಸಿನಿಮಾದ ಟೀಸರ್ ಸಖತ್ ಕೌತುಕ ಮೂಡಿಸಿದೆ.

# ಶ್ರೀನಾಥ್ ದಾಖಲೆ ಮುರಿಯುವ ಸನಿಹದಲ್ಲಿ ಬೂಮ್ ಬೂಮ್ ಬುಮ್ರಾ




ಭಾರತ ಮತ್ತು ಇಂಗ್ಲೆಂಡ್ ನಡುವಣ 3ನೇ ಟೆಸ್ಟ್ ಪಂದ್ಯವು ಇಂದಿನಿಂದ ಶುರುವಾಗಲಿದೆ. ರಾಜ್ ಕೋಟ್ ನಲ್ಲಿ ನಡೆಯಲಿರುವ ಈ ಪಂದ್ಯದಲ್ಲಿ ಟೀಮ್ ಇಂಡಿಯಾದ ಟ್ರಂಪ್ ಕಾರ್ಡ್ ಜಸ್ ಪ್ರೀತ್ ಬುಮ್ರಾ. ಏಕೆಂದರೆ ಬಾಝ್ ಬಾಲ್ ರಣತಂತ್ರಕ್ಕೆ ಇದೀಗ ಬೂಮ್ ಬಾಲ್ ಪ್ರತಿತಂತ್ರ ಸಿದ್ಧವಾಗಿದೆ.

ಈ ಪ್ರತಿತಂತ್ರದ ಫಲವೇ ದ್ವಿತೀಯ ಟೆಸ್ಟ್ ಪಂದ್ಯದಲ್ಲಿ ಇಂಗ್ಲೆಂಡ್ ತಂಡ ಮುಗ್ಗರಿಸಿರುವುದು. ಈ ಪಂದ್ಯದ ಗೆಲುವಿನ ರೂವಾರಿ ಜಸ್ ಪ್ರೀತ್ ಬುಮ್ರಾ. ಮೊದಲ ಇನಿಂಗ್ಸ್ ನಲ್ಲಿ 6 ವಿಕೆಟ್ ಕಬಳಿಸಿದ್ದ ಬುಮ್ರಾ 2ನೇ ಇನಿಂಗ್ಸ್ ನಲ್ಲಿ 3 ವಿಕೆಟ್ ಉರುಳಿಸಿದ್ದರು. ಈ ಮೂಲಕ ಹಲವು ದಾಖಲೆಗಳನ್ನು ಬರೆದಿದ್ದರು.

ಇದೀಗ ಜಸ್ ಪ್ರೀತ್ ಬುಮ್ರಾ ಮತ್ತೊಂದು ದಾಖಲೆಯ ಹೊಸ್ತಿಲಲ್ಲಿದ್ದಾರೆ. ಅದು ಕೂಡ ಮೈಸೂರ್ ಎಕ್ಸ್ ಪ್ರೆಸ್ ಖ್ಯಾತಿಯ ಜಾವಗಲ್ ಶ್ರೀನಾಥ್ ಅವರ ದಾಖಲೆಯನ್ನು ಮುರಿಯುವ ಸನಿಹದಲ್ಲಿ ಎಂಬುದು ವಿಶೇಷ.

ಅಂದರೆ ಟೀಮ್ ಇಂಡಿಯಾ ಪರ ಅಂತಾರಾಷ್ಟ್ರೀಯ ಕ್ರಿಕೆಟ್ ನಲ್ಲಿ ಅತ್ಯಧಿಕ ಬಾರಿ 5 ವಿಕೆಟ್ ಕಬಳಿಸಿದ ವೇಗದ ಬೌಲರ್ ಗಳ ಪಟ್ಟಿಯಲ್ಲಿ ಜಾವಗಲ್ ಶ್ರೀನಾಥ್ ದ್ವಿತೀಯ ಸ್ಥಾನದಲ್ಲಿದ್ದಾರೆ. ಒಟ್ಟು 13 ಬಾರಿ ಐದು ವಿಕೆಟ್ ಕಬಳಿಸಿ ಕನ್ನಡಿಗ ಈ ವಿಶೇಷ ದಾಖಲೆ ಬರೆದಿಟ್ಟಿದ್ದಾರೆ.

ಇತ್ತ ಜಸ್ ಪ್ರೀತ್ ಬುಮ್ರಾ ಅಂತಾರಾಷ್ಟ್ರೀಯ ಕ್ರಿಕೆಟ್ ನಲ್ಲಿ 12 ಬಾರಿ ಐದು ವಿಕೆಟ್ ಗಳನ್ನು ಕಬಳಿಸಿದ್ದಾರೆ. ಇಂಗ್ಲೆಂಡ್ ವಿರುದ್ಧದ ಮೂರನೇ ಟೆಸ್ಟ್ ಪಂದ್ಯದ ಇನಿಂಗ್ಸ್ ನಲ್ಲಿ ಬುಮ್ರಾ 5 ವಿಕೆಟ್ ಪಡೆದರೆ ಜಾವಗಲ್ ಶ್ರೀನಾಥ್ ಅವರ ದಾಖಲೆಯನ್ನು ಸರಿಗಟ್ಟಬಹುದು.

ಒಂದು ವೇಳೆ ಎರಡೂ ಇನಿಂಗ್ಸ್ ಗಳಲ್ಲಿ ಐದೈದು ವಿಕೆಟ್ ಕಬಳಿಸಿದ ಅಂತಾರಾಷ್ಟ್ರೀಯ ಕ್ರಿಕೆಟ್ ನಲ್ಲಿ ಅತ್ಯಧಿಕ ಬಾರಿ 5 ವಿಕೆಟ್ ಕಬಳಿಸಿದ ಟೀಮ್ ಇಂಡಿಯಾದ 2ನೇ ವೇಗಿ ಎಂಬ ದಾಖಲೆ ಜಸ್ ಪ್ರೀತ್ ಬುಮ್ರಾ ಪಾಲಾಗಲಿದೆ. ಹೀಗಾಗಿ ಮೂರನೇ ಟೆಸ್ಟ್ ಪಂದ್ಯದಲ್ಲಿ ಬೂಮ್ ಬೂಮ್ ಕಡೆಯಿಂದ ಭರ್ಜರಿ ದಾಖಲೆಯನ್ನು ನಿರೀಕ್ಷಿಸಬಹುದು.

ಇನ್ನು ಅಂತಾರಾಷ್ಟ್ರೀಯ ಕ್ರಿಕೆಟ್ ನಲ್ಲಿ ಅತೀ ಹೆಚ್ಚು ಬಾರಿ 5 ವಿಕೆಟ್ ಕಬಳಿಸಿದ ಟೀಮ್ ಇಂಡಿಯಾದ ವೇಗದ ಬೌಲರ್ ಕಪಿಲ್ ದೇವ್. ಭಾರತ ತಂಡದ ಮಾಜಿ ನಾಯಕ ಒಟ್ಟು 24 ಬಾರಿ 5 ವಿಕೆಟ್ ಗಳ ಸಾಧನೆ ಮಾಡಿದ್ದಾರೆ.

## ಸಿದ್ದರಾಮಯ್ಯ ಸುಳ್ಳು ಹೇಳೋದನ್ನೇ ಕಾಯಕ ಮಾಡಿಕೊಂಡಿದ್ದಾರೆ

# ಪ್ರಹ್ಲಾದ್ ಜೋಶಿ ಕಿಡಿ



**ಹುಬ್ಬಳ್ಳಿ:** ಸಿದ್ದರಾಮಯ್ಯ ಸುಳ್ಳು ಹೇಳೋದನ್ನೇ ಕಾಯಕ ಮಾಡಿಕೊಂಡಿದ್ದಾರೆ. ಅವರು ಸುಳ್ಳು ರಾಮಯ್ಯ. ನಾನು ನಿನ್ನೆಯಿಂದ ಸಿದ್ದರಾಮಯ್ಯರನ್ನ ಸುಳ್ಳು ರಾಮಯ್ಯ ಎಂದು ಕರೆಯುತ್ತಿದ್ದೇನೆ. ಸಿದ್ದರಾಮಯ್ಯ ಆರ್ಥಿಕ ದುಸ್ಥಿತಿಗೆ ತಂದು ಕೇಂದ್ರದತ್ತ ಬೊಟ್ಟು ಮಾಡ್ತಿದ್ದಾರೆ ಎಂದು ಹುಬ್ಬಳ್ಳಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ಕರ್ನಾಟಕ ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವ ಪ್ರಹ್ಲಾದ್ ಜೋಶಿ, ಮೊದಲು NDRF(ನ್ಯಾಷನಲ್ ಡಿಸಾಸ್ಟರ್ ರಿಲೀಫ್ ಫಂಡ್) ಫಂಡ್ ನಲ್ಲಿ ಇಷ್ಟು ಪ್ರಮಾಣದ ಹಣ ಕೊಡುತ್ತಿರಲಿಲ್ಲ. ನಾವು ಅಡ್ವಾನ್ಸ್ ಹಣ ಕೊಡ್ತೀದ್ದೇವೆ. ಬಿ.ಎಸ್. ಯಡಿಯೂರಪ್ಪ ಅದೇ ಹಣವನ್ನು ಬರಗಾಲ ಬಂದಾಗ ಹಂಚಿಕೆ ಮಾಡಿದ್ದಾರೆ. ಸಿದ್ದರಾಮಯ್ಯ ಆರ್ಥಿಕ ದುಸ್ಥಿತಿಗೆ ತಂದು ಕೇಂದ್ರದತ್ತ ಬೊಟ್ಟು ಮಾಡ್ತೀದಾರೆ. ನಾವು ಒಂದೇ ಒಂದು ರೂಪಾಯಿ GST ಹಣ ಕೊಡೋದು ಕೂಡ ಬಾಕಿ ಇಲ್ಲ ಎಂದು ಸಿದ್ದರಾಮಯ್ಯನವರ ಆರೋಪಗಳಿಗೆ ಜೋಶಿ ತಿರುಗೇಟು ನೀಡಿದರು.

NDRFನಲ್ಲಿ ನಾವು 12 ಸಾವಿರ ಕೋಟಿ ಕೊಟ್ಟಿದ್ದೇವೆ. ಡೆವಲೂಷನ್ ಫಂಡ್ ಅವರ ಕಾಲದಲ್ಲಿ 60 ಸಾವಿರ ಕೋಟಿ ಇತ್ತು. ನಮ್ಮ ಕಾಲದಲ್ಲಿ 2 ಲಕ್ಷ 36 ಸಾವಿರ ಕೋಟಿ ಕೊಟ್ಟಿದ್ದೇವೆ. ತೆರಿಗೆ ಹಂಚಿಕೆಯಲ್ಲಿ 10 ವರ್ಷದಲ್ಲಿ 81 ಸಾವಿರ ಕೋಟಿ ಹೆಚ್ಚಿದೆ. ನಮ್ಮ ಕಾಲದಲ್ಲಿ 2 ಲಕ್ಷ 85 ಸಾವಿರ ಕೋಟಿ ಕೊಟ್ಟಿದ್ದೇವೆ. ಇವರು ಯಾವುದೇ ಗ್ರ್ಯಾಂಟ್ ಕೊಟ್ಟಿಲ್ಲ ಅಂತೀದಾರೆ. ನಾವು ಬಡ್ಡಿ ರಹಿತ ಸಾಲ ಕೊಟ್ಟಿದ್ದೇವೆ. 2004 ರಿಂದ 2014 ರಲ್ಲಿ 1667 ಕೋಟಿ ಹಣ ಬಿಡುಗಡೆಯಾಗಿತ್ತು. ಸಿದ್ದರಾಮಯ್ಯ ಸುಳ್ಳು ಹೇಳುತ್ತಿದ್ದಾರೆ. ಅವರು ಸುಳ್ಳು ರಾಮಯ್ಯ. ನಾನು ನಿನ್ನೆ ಇಂದ ಸಿದ್ದರಾಮಯ್ಯರನ್ನ ಸುಳ್ಳು ರಾಮಯ್ಯ ಎಂದು ಕರೆಯುತ್ತಿದ್ದೇನೆ. ಮಹದಾಯಿ ವಿಚಾರ ಅರಣ್ಯ ಇಲಾಖೆ ನಿರಾಕರಣೆ ಮಾಡಿಲ್ಲ ಎಂದು ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದರು.

ಸಿದ್ದರಾಮಯ್ಯ 10 ಬಾರಿ ರಾಜಕೀಯ ನಿವೃತ್ತಿಯಾಗಬೇಕು. ಅನುದಾನ ವಿಚಾರವಾಗಿ ಡ್ಯಾಶ್ ಬೋರ್ಡ್ ನಲ್ಲಿ ಎಲ್ಲ ಮಾಹಿತಿ ಹಾಕಿದ್ರು. ಅದನ್ನು ಡೌನ್ ಲೋಡ್ ಮಾಡಲು ಬಿಜೆಪಿ ನಾಯಕರಿಗೆ ಸೂಚಿಸಿದ್ದೆ. ಇದೀಗ ಅಂಕಿ-ಅಂಶವೇ ಡಿಲೀಟ್ ಆಗಿದೆ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ಕೇಂದ್ರ ಸಚಿವ ಜೋಶಿ ಗಂಭೀರ ಆರೋಪ ಮಾಡಿದರು. ಇದೇ ವೇಳೆ ಜೆಡಿಎಸ್, ಬಿಜೆಪಿ ಸೀಟು ಹಂಚಿಕೆ ಬಗ್ಗೆ ಯಾವುದೇ ಚರ್ಚೆಯಾಗಿಲ್ಲ. ಒಂದು ಹಂತದಲ್ಲಿ ಚರ್ಚೆ ನಡೆಯುತ್ತಿದೆ, ಅದೆಲ್ಲವೂ ಅಪೂರ್ಣ ಆಗಿದೆ. ರಾಷ್ಟ್ರೀಯ ಕಾರ್ಯಕಾರಿಣಿ ಸಭೆ ಬಳಿಕ ಎಲ್ಲವೂ ಅಂತಿಮವಾಗಲಿದೆ. ಈ ಬಾರಿ ಚುನಾವಣೆಯಲ್ಲಿ ನಾನು ಮತ್ತೆ ಗೆಲ್ತೇನೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ದೆಹಲಿಯಲ್ಲಿ ಕೇಂದ್ರ ಸರ್ಕಾರದ ವಿರುದ್ಧ ರೈತರ ಪ್ರತಿಭಟನೆ ವಿಚಾರ ಸಂಬಂಧ ಮಾತನಾಡಿದ ಪ್ರಹ್ಲಾದ್ ಜೋಶಿ, ಕೃಷಿ ಸಚಿವರು ರೈತ ಮುಖಂಡರ ಜೊತೆ ಮಾತುಕತೆ ನಡೆಸುತ್ತಿದ್ದಾರೆ. ರೈತರ ಹೊಸ ಬೇಡಿಕೆಯನ್ನು ನಮ್ಮ ಸರ್ಕಾರ ಪರಿಶೀಲನೆ ಮಾಡ್ತಿದೆ. ಸಹಾನುಭೂತಿಯಿಂದ ಎಲ್ಲ ಬೇಡಿಕೆ ಪರಿಶೀಲನೆ ಮಾಡುತ್ತಿದ್ದಾರೆ. ರೈತರ ಬಗ್ಗೆ ನಾವು ಸಹಾನುಭೂತಿ ಹೊಂದಿದ್ದೇವೆ. ಕಲ್ಲು ಹೊಡೆಯೋದು ಕೆಲಸವಲ್ಲ, ರೈತರು ಮಾತುಕತೆಗೆ ಬರಬೇಕು. ಕೇಂದ್ರ ಸರ್ಕಾರ ಪ್ರತಿಭಟನೆಯನ್ನು ಹತ್ತಿಕ್ಕುವ ಕೆಲಸ ಮಾಡ್ತಿಲ್ಲ. ಅನುಮತಿ ಇಲ್ಲದೆ ಬಂದವರನ್ನು ಪೊಲೀಸರು ತಡೆಯುತ್ತಿದ್ದಾರೆ. ನಮ್ಮ ದೇಶದ ಪ್ರಜೆಗಳನ್ನು ಉಳಿಸುವ ಕೆಲಸ ಆಗ್ತಿದೆ ಎಂದರು.

## ಟಿ 20 ವಿಶ್ವಕಪ್ 2024

# ಟೀಂ ಇಂಡಿಯಾಗೆ ರೋಹಿತ್ ಶರ್ಮಾ ಕ್ಯಾಪ್ಟನ್



ಮುಂಬರುವ ಟಿ20 ವಿಶ್ವಕಪ್ ಕ್ರಿಕೆಟ್ ಟೂರ್ನಿಗೆ ಟೀಂ ಇಂಡಿಯಾದ ನಾಯಕನಾಗಿ ರೋಹಿತ್ ಶರ್ಮಾ ಅವರನ್ನು ಆಯ್ಕೆಯಾಗಿದ್ದಾರೆ. ವಿಶ್ವಕಪ್ ಟೂರ್ನಿಯ ಪಂದ್ಯಗಳು ಜೂನ್ 4 ರಿಂದ 30ರ ವರೆಗೆ ವೆಸ್ಟ್ ಇಂಡೀಸ್ ಮತ್ತು ಅಮೆರಿಕದಲ್ಲಿ ನಡೆಯಲಿದ್ದು, ಭಾರತ ತಂಡವನ್ನು ರೋಹಿತ್ ಶರ್ಮಾ ಮುನ್ನಡೆಸಲಿದ್ದಾರೆ. ಈ ಬಗ್ಗೆ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ಕಾರ್ಯದರ್ಶಿ ಜಯ್ ಶಾ ಬುಧವಾರ ಖಚಿತಪಡಿಸಿದ್ದಾರೆ. ಆದ್ರೆ, ಬಿಸಿಸಿಐ ಅಧಿಕೃವಾಗಿ ಪ್ರಕಟಿಸಿಲ್ಲ.

ಸೌರಾಷ್ಟ್ರ ಕ್ರಿಕೆಟ್ ಅಸೋಸಿಯೇಷನ್ ಸ್ಟೇಡಿಯಂ ಮರುನಾಮಕರಣ ಕಾರ್ಯಕ್ರಮದಲ್ಲಿ ಮಾತನಾಡಿದ ಶಾ, ನಾವು 2023ರ ವಿಶ್ವಕಪ್‌ನ ಫೈನಲ್‌ನಲ್ಲಿ ಸೋತಿರಬಹುದು. ಆದರೆ ನಾವು ಸತತ 10 ಪಂದ್ಯಗಳನ್ನು ಗೆಲ್ಲುವ ಮೂಲಕ ಜನರ ಹೃದಯ ಗೆದ್ದಿದ್ದೇವೆ. ರೋಹಿತ್ ಶರ್ಮಾ ಅವರ ನಾಯಕತ್ವದಲ್ಲಿ ಭಾರತವು 2024 ರ ಟಿ 20 ವಿಶ್ವಕಪ್ ಗೆಲ್ಲಲಿದೆ ಎನ್ನುವ ವಿಶ್ವಾಸವಿದೆ ಎಂದು ಹೇಳಿದರು. ಈ ಮೂಲಕ ಟೀಮ್ ಇಂಡಿಯಾದ ನಾಯಕ ರೋಹಿತ್ ಶರ್ಮಾ ಎನ್ನುವುದನ್ನು ಖಚಿತಪಡಿಸಿದರು.

9ನೇ ಆವೃತ್ತಿಯ ಟಿ20 ವಿಶ್ವಕಪ್ ಟೂರ್ನಿಯ ಪಂದ್ಯಗಳು ಜೂನ್ 4 ರಿಂದ 30ರ ವರೆಗೆ ವೆಸ್ಟ್ ಇಂಡೀಸ್ ಮತ್ತು ಅಮೆರಿಕದಲ್ಲಿ ನಡೆಯಲಿದೆ ಲೀಗ್ ಹಂತದ ಕೆಲ ಪಂದ್ಯಗಳಿಗೆ ಯುಎಸ್ ಎ ಆತಿಥ್ಯವಹಿಸಿದರೆ, ಸೂಪರ್-8 ಹಂತದ ಎಲ್ಲಾ ಪಂದ್ಯಗಳು ವೆಸ್ಟ್ ಇಂಡೀಸ್ ನಲ್ಲಿ ಜರುಗಲಿದೆ.

ಇನ್ನು ಭಾರತ ತಂಡವು ಜೂನ್ 5 ರಂದು ವಿಶ್ವಕಪ್ ಅಭಿಯಾನ ಆರಂಭಿಸಲಿದ್ದು, ತನ್ನ ಮೊದಲ ಪಂದ್ಯದಲ್ಲಿ ಐರ್ಲೆಂಡ್ ತಂಡವನ್ನು ಎದುರಿಸಲಿದೆ. ಹಾಗೆಯೇ ಜೂನ್ 9 ರಂದು ನಡೆಯಲಿರುವ ಹೈವೋಲ್ಟೇಜ್ ಪಂದ್ಯದಲ್ಲಿ ಭಾರತ ಮತ್ತು ಪಾಕಿಸ್ತಾನ್ ತಂಡಗಳು ಮುಖಾಮುಖಿಯಾಗಲಿದೆ. ಈ ಪಂದ್ಯಕ್ಕೆ ನ್ಯೂಯಾರ್ಕ್ ಆತಿಥ್ಯವಹಿಸಲಿದೆ.

# ಮಂಗಳೂರಿನ ಭವಿಷ್ಯ ಬಲಿ ಕೊಡುವ ಕೆಲಸ ಸಂಘ ಪರಿವಾರ ಮಾಡುತ್ತಿದೆ ಎಂದ ಡಿವೈಎಫ್ಐ ಮುಖಂಡ




**ಮಂಗಳೂರು:** ನಗರದ ಜೆಪ್ಪುವಿನ ಜೆರೋಸಾ ಶಿಕ್ಷಣ ಸಂಸ್ಥೆಯಲ್ಲಿ ಶಿಕ್ಷಕಿಯೊಬ್ಬರು ಧರ್ಮನಿಂದನೆ ಮಾಡಿದ್ದಾರೆ ಎನ್ನಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಜೆರೋಸಾ ಶಾಲೆಗೆ ದಕ್ಷಿಣ ಕನ್ನಡ ಜಿಲ್ಲಾ ಜಾತ್ಯಾತೀತ ಪಕ್ಷಗಳು ಹಾಗೂ ಸಮಾನ ಮನಸ್ಕ ಸಂಘಟನೆಗಳು ಭೇಟಿ ನೀಡಿ ಪರಿಶೀಲನೆ ನಡೆಸಿವೆ. ಶಾಲಾ ಆಡಳಿತ ಮಂಡಳಿಯ ಜೊತೆಗೆ ಘಟನೆ ಬಗ್ಗೆ ಚರ್ಚೆ ನಡೆಸಿದ್ದಾರೆ. ಈ ಹಿಂದೆ ಜಿಲ್ಲಾ ಕಾಂಗ್ರೆಸ್ ನಿಯೋಗ ಭೇಟಿ ನೀಡಿ ಸತ್ಯಶೋಧನಾ ಸಮಿತಿ ರಚಿಸಿ ತನಿಖೆ ನಡೆಸುವಂತೆ ಆಗ್ರಹಿಸಿತ್ತು.

ಶಿಕ್ಷಕಿ ಹಿಂದೂ ಧರ್ಮದ ಅವಹೇಳನ ಮಾಡಿಲ್ಲ ಅಂತ ಹೇಳಿದ್ದಾರೆ. ಘಟನೆ ಯೋಜಿತ ರೀತಿಯಲ್ಲಿ ನಡೆದಿದೆ, ರಾಜಕೀಯ ಲಾಭ ಪಡೆಯುವ ಪ್ರಯತ್ನ ನಡೆದಿದೆ. ಮಂಗಳೂರಿನ ಭವಿಷ್ಯ ಬಲಿ ಕೊಡುವ ಕೆಲಸ ಸಂಘ ಪರಿವಾರ ನಡೆಸಿದೆ. ಅವಹೇಳನ ಮಾಡಿದ್ದಾರೆ ಅನ್ನೋದಕ್ಕೆ ಆಧಾರ ಸಿಗ್ತಾ ಇಲ್ಲ. ಶಿಕ್ಷಕಿ ಠಾಗೂರ್ ಅವರ ಪಠ್ಯವನ್ನು ಇಂಗ್ಲಿಷ್ ನಲ್ಲಿ ಪಾಠ ಮಾಡುತ್ತಿದ್ದರು. ಅವರು ಎಲ್ಲೂ ಕನ್ನಡ ಬಳಸಿಲ್ಲ, ಪಠ್ಯಕ್ಕೆ ಸಂಬಂಧಿಸಿದ ವಿಷಯ ಮಾತ್ರ ಮಾತನಾಡಿದ್ದಾರೆ. ಧಾರ್ಮಿಕ ವಿದ್ಯಮಾನ ಕುರಿತು ಮಾತನಾಡಿಲ್ಲ. ಇದು ಶಾಲೆಯ ಆಡಳಿತ ಮಂಡಳಿ ನೀಡಿದ ವಿವರಣೆ ಎಂದು ಡಿವೈಎಫ್ಐ ಮುಖಂಡ ಮುನೀರ್ ಕಾಟಿಪಳ್ಳ ತಿಳಿಸಿದರು.

ಸಮಗ್ರ ತನಿಖೆಗೆ ನಾವು ಕೂಡ ಆಗ್ರಹಿಸುತ್ತಿದ್ದೇವೆ. ಪ್ರಕರಣ ಪೋಷಕರು ಬಗೆಹರಿಸಬೇಕಿತ್ತು, ಆದ್ರೆ ಸಂಘ ಪರಿವಾರದ ಕಾರ್ಯಕರ್ತರು ಮೊದಲು ಬಂದಿದ್ದರು. ಇದು ಹಲವು ಅನುಮಾನಕ್ಕೆ ಕಾರಣ ಆಗಿದೆ. ಲೋಕಸಭಾ ಚುನಾವಣೆಗೆ ಮತೀಯ ಲಾಭ ಪಡೆಯಲು ಸಂಘಟನೆ ಪ್ರಯತ್ನ ಪಟ್ಟಿದೆ. ಶಾಸಕ ವೇದವ್ಯಾಸ ಕಾಮತ್ ಭರತ್ ಶೆಟ್ಟಿ ಸಂಘ ಪರಿವಾರದ ಮುಖಂಡರಾಗಿ ಬಂದಿದ್ದರು. ಮಂಗಳೂರಿನ ಮಟ್ಟಿಗೆ ಇದು ಕಪ್ಪು ಚುಕ್ಕೆ ಎಂದು ಮುನೀರ್ ಕಾಟಿಪಳ್ಳ ಬೇಸರ ಹೊರ ಹಾಕಿದರು.

ಮಂಗಳವಾರ ಜೆರೋಸಾ ಶಿಕ್ಷಣ ಸಂಸ್ಥೆಗೆ ಕಾಂಗ್ರೆಸ್ ನಿಯೋಗ ಭೇಟಿ ನೀಡಿತ್ತು. ಸರ್ಕಾರ ಸತ್ಯಶೋಧನಾ ಸಮಿತಿ ರಚಿಸಿ ತನಿಖೆ ನಡೆಸಬೇಕು ಎಂದು ಕಾಂಗ್ರೆಸ್ ಹಿರಿಯ ಮುಖಂಡರಾದ ಬಿ ರಮಾನಾಥ್ ರೈ ಮತ್ತು ವಿನಯಕುಮಾರ್ ಸೊರಕೆ ಆಗ್ರಹಿಸಿದ್ದರು. ಸತ್ಯಗಳು ಹೊರಬರಬೇಕು. ಈ ಘಟನೆ ಜಿಲ್ಲೆಯ ಕೋಮು ಸೌಹಾರ್ದತೆಗೆ ಧಕ್ಕೆ ತಂದಿದೆ. ಕೋಮು ಸೌಹಾರ್ದತೆ ಕಾಪಾಡುವುದು ನಮ್ಮ ಉದ್ದೇಶ. ಕೆಲವರು ಘಟನೆಯಿಂದ ಲಾಭ ಪಡೆಯುತ್ತಿದ್ದಾರೆ. ಆದರೆ ನಮ್ಮ ಪಕ್ಷ ಹಾಗಲ್ಲ. ಸುಂದರ ಸಮಾಜ ನಿರ್ಮಾಣದ ಜವಾಬ್ದಾರಿ ಎಲ್ಲರ ಮೇಲಿದ್ದು, ಸರಿ ತಪ್ಪುಗಳ ಬಗ್ಗೆ ಚರ್ಚೆಯಾಗಬೇಕು. ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ ಸತ್ಯಶೋಧನಾ ಸಮಿತಿ ರಚಿಸಿ, ತನಿಖೆಯಾಗಬೇಕೆಂದು ಸರ್ಕಾರಕ್ಕೆ ಒತ್ತಾಯಿಸುತ್ತೇವೆಂದು ಹೇಳಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com